ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೦೪

**ಪಟ್ಟಿ – ೦೭**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಐವತ್ತೊಂಭತ್ತನೆ ಅಧಿವೇಶನ**

**ಮಂಗಳವಾರ, ದಿನಾಂಕ : ೨೫ನೇ ಆಗಸ್ಟ್, ೨೦೨೬**

---

## ಸಮೂಹ – II

೧. ವಸತಿ ಸಚಿವರು

೨. ಕೃಷಿ ಸಚಿವರು

೩. ಸಕ್ಕರೆ ಮತ್ತು ಜವಳಿ ಸಚಿವರು

೪. ಸಹಕಾರ ಸಚಿವರು

೫. ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು

೬. ಪೌರಾಡಳಿತ ಸಚಿವರು

---

# ರಾಜ್ಯದಲ್ಲಿ ಇರುವಂತಹ ಒಟ್ಟು ನೋಂದಾಯಿತ ವಕ್ಫ್ ಆಸ್ತಿಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೭೧ (೧೦೧೧) ಮಾನ್ಯ ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಜಿಲ್ಲಾವಾರು ನೋಂದಾಯಿತ ವಕ್ಫ್ ಆಸ್ತಿಗಳ ಸಂಖ್ಯೆ ಹಾಗೂ ಅವುಗಳ ಒಟ್ಟು ವಿಸ್ತೀರ್ಣ ಎಷ್ಟು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಹೊಸದಾಗಿ ಎಷ್ಟು ವಕ್ಫ್ ಆಸ್ತಿಗಳು ನೋಂದಣಿಯಾಗಿವೆ ; (ಜಿಲ್ಲಾವಾರು ವಿವರ ಒದಗಿಸುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ವಕ್ಫ್ ಆಸ್ತಿಗಳ ಅತಿಕ್ರಮಣಕ್ಕೆ ಸಂಬಂಧಿಸಿದಂತೆ ಎಷ್ಟು ಪ್ರಕರಣಗಳು ದಾಖಲಾಗಿವೆ ; ಅವುಗಳಲ್ಲಿ ಎಷ್ಟು ಪ್ರಕರಣಗಳಲ್ಲಿ ಅತಿಕ್ರಮಣ ತೆರವುಗೊಳಿಸಲಾಗಿದೆ ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಈ) ನೋಂದಾಯಿತ ವಕ್ಫ್ ಆಸ್ತಿಗಳ ಪೈಕಿ ಮಸೀದಿ, ದರ್ಗಾ, ಈದ್ಗಾ, ಖಬರಸ್ತಾನ್ ಮದರಸಾ ಹಾಗೂ ಇತರೆ ವಕ್ಫ್ ಸಂಸ್ಥೆಗಳ ವರ್ಗವಾರು ವಿವರ ನೀಡುವುದು ;

(ಉ) ರಾಜ್ಯದ ವಕ್ಫ್ ಆಸ್ತಿಗಳ ಸಂಪೂರ್ಣ ಮಾಹಿತಿಯನ್ನು ಡಿಜಿಟಲ್ ದಾಖಲೆಗಳಲ್ಲಿ ದಾಖಲಿಸಲಾಗಿದೆಯೇ ; ಇಲ್ಲದಿದ್ದಲ್ಲಿ ಯಾವ–ಯಾವ ಜಿಲ್ಲೆಗಳಲ್ಲಿ ಬಾಕಿ ಉಳಿದಿದೆ ? (ಸಂಪೂರ್ಣ ಮಾಹಿತಿ ಒದಗಿಸುವುದು)

## ವಸತಿ ಇಲಾಖೆಯಡಿ ಬರುವ ವಿವಿಧ ಯೋಜನೆಗಳಡಿ ಮನೆಗಳ ಮಂಜೂರಾತಿ, ನಿರ್ಮಾಣ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೭೨ (೧೦೧೩) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ವಿವಿಧ ವಸತಿ ಯೋಜನೆಗಳಡಿ ಎಷ್ಟು ಮನೆಗಳನ್ನು ಮಂಜೂರು ಮಾಡಲಾಗಿದೆ ; (ಯೋಜನೆವಾರು ಮಾಹಿತಿ ಒದಗಿಸುವುದು)

(ಆ) ಜಿಲ್ಲಾವಾರು ಮಂಜೂರಾತಿ, ನಿರ್ಮಾಣ ಪೂರ್ಣಗೊಂಡ ಮನೆಗಳು ಹಾಗೂ ಬಾಕಿ ಇರುವ ಮನೆಗಳ ಸಂಖ್ಯೆ ಎಷ್ಟು; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಮನೆ ಮಂಜೂರಾಗಿದ್ದರೂ ಕಾಮಗಾರಿ ಆರಂಭವಾಗದ ಅಥವಾ ಅಪೂರ್ಣಗೊಂಡಿರುವ ಮನೆಗಳ ಸಂಖ್ಯೆ ಎಷ್ಟು ; ಅವುಗಳನ್ನು ಪೂರ್ಣಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳಾವುವು ;

(ಈ) ವಸತಿ ಯೋಜನೆಗಳ ಫಲಾನುಭವಿಗಳಿಗೆ ನಿರ್ಮಾಣ ವೆಚ್ಚ ಹೆಚ್ಚಳದ ಹಿನ್ನೆಲೆಯಲ್ಲಿ ಆರ್ಥಿಕ ನೆರವನ್ನು ಹೆಚ್ಚಿಸುವ ಕುರಿತು ಸರ್ಕಾರ ಪರಿಶೀಲನೆ ನಡೆಸಿದೆಯೇ ? (ಇದ್ದಲ್ಲಿ ಮಾಹಿತಿ ಒದಗಿಸುವುದು)

## ಕರ್ನಾಟಕ ಪಬ್ಲಿಕ್ ಸ್ಕೂಲ್ (KPS) ಯೋಜನೆ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೭೩ (೧೦೧೪) ಮಾನ್ಯ ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ೧೧೭ ಮೌಲಾನಾ ಆಜಾದ್ ಮಾದರಿ ಶಾಲೆಗಳು ಹಾಗೂ ಉರ್ದು ಶಾಲೆಗಳನ್ನು ಕರ್ನಾಟಕ ಪಬ್ಲಿಕ್ ಸ್ಕೂಲ್‌ಗಳಾಗಿ (KPS) ಉನ್ನತೀಕರಿಸುವ ಯೋಜನೆಯು ಪ್ರಸ್ತುತ ಯಾವ ಹಂತದಲ್ಲಿದೆ ;

(ಆ) ಈ ಯೋಜನೆಗಾಗಿ ಸರ್ಕಾರ ಒಟ್ಟು ಎಷ್ಟು ಅನುದಾನ ಮಂಜೂರು ಮಾಡಿದ್ದು, ಇದುವರೆಗೆ ಎಷ್ಟು ವೆಚ್ಚ ಮಾಡಲಾಗಿದೆ ;

(ಇ) ೧೧೭ ಶಾಲೆಗಳ ಪೈಕಿ ಎಷ್ಟು ಶಾಲೆಗಳಲ್ಲಿ ಕಟ್ಟಡ ನಿರ್ಮಾಣ ಕಾಮಗಾರಿ ಪೂರ್ಣಗೊಂಡಿವೆ ; ಎಷ್ಟು ಶಾಲೆಗಳಲ್ಲಿ ಕಾಮಗಾರಿ ಪ್ರಗತಿಯಲ್ಲಿದೆ ಹಾಗೂ ಎಷ್ಟು ಶಾಲೆಗಳಲ್ಲಿ ಇನ್ನೂ ಕಾಮಗಾರಿ ಆರಂಭವಾಗಿಲ್ಲ ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಈ) ಕಾಮಗಾರಿಯಲ್ಲಿ ಉಂಟಾಗಿರುವ ವಿಳಂಬಕ್ಕೆ ಕಾರಣಗಳೇನು ; ಕಾಮಗಾರಿಯನ್ನು ಸರ್ಕಾರ ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ;

(ಉ) ಉನ್ನತೀಕರಣಗೊಂಡ ಶಾಲೆಗಳಲ್ಲಿ ವಿಜ್ಞಾನ ಪ್ರಯೋಗಾಲಯ, ಕಂಪ್ಯೂಟರ್ ಲ್ಯಾಬ್, ಗ್ರಂಥಾಲಯ, ಕ್ರೀಡಾ ಸೌಲಭ್ಯ ಹಾಗೂ ಸ್ಮಾರ್ಟ್ ತರಗತಿಗಳನ್ನು ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರಾಜ್ಯದಲ್ಲಿ ಮಳೆ ಕೊರತೆ ಹಾಗೂ ನೀರಾವರಿ ಸೌಲಭ್ಯಗಳ ಅಭಾವದಿಂದ ಕೃಷಿ ಉತ್ಪಾದನೆ ಕುಸಿಯುತ್ತಿರುವ ಬಗ್ಗೆ

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೭೪ (೧೦೧೨) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮಳೆ ಕೊರತೆ ಹಾಗೂ ನೀರಾವರಿ ಸೌಲಭ್ಯಗಳ ಅಭಾವದಿಂದ ಕೃಷಿ ಉತ್ಪಾದನೆ ಕುಸಿಯುತ್ತಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಕಳೆದ ಮೂರು ವರ್ಷಗಳಲ್ಲಿ ಜಿಲ್ಲಾವಾರು ಎಷ್ಟು ಕೃಷಿ ಭೂಮಿಯಲ್ಲಿ ಬಿತ್ತನೆ ಕೈಬಿಡಲಾಗಿದೆ ಅಥವಾ ಉತ್ಪಾದನೆ ಕುಸಿದಿದೆ ಎಂಬ ವರದಿಯಾಗಿದೆ ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಸದರಿ ಸಮಸ್ಯೆಯನ್ನು ನಿವಾರಿಸಿ ರೈತರ ಕೃಷಿ ಉತ್ಪಾದಕತೆ ಹೆಚ್ಚಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಪೂರ್ಣ ಮಾಹಿತಿ ಒದಗಿಸುವುದು)

(ಈ) ಕಳೆದ ಮೂರು ವರ್ಷಗಳಲ್ಲಿ ನೀರಾವರಿ ಸೌಲಭ್ಯವಿಲ್ಲದ ಕೃಷಿ ಪ್ರದೇಶಗಳಲ್ಲಿ ಹನಿ ನೀರಾವರಿ, ತುಂತುರು ನೀರಾವರಿ ಹಾಗೂ ಕೃಷಿ ಕೆರೆಗಳ ನಿರ್ಮಾಣಕ್ಕೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ? (ಸಂಪೂರ್ಣ ಮಾಹಿತಿ ಒದಗಿಸುವುದು)

## ನಗರಾಭಿವೃದ್ಧಿ ಇಲಾಖೆಯಲ್ಲಿ ಅನುಮೋದನೆ ಪಡೆದಿದ್ದರೂ ಕಾಮಗಾರಿಗಳು ಅಪೂರ್ಣವಾಗಿರುವ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೭೫ (೧೦೧೦) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಅನುಮೋದನೆ ಪಡೆದಿದ್ದರೂ ವಿವಿಧ ಕಾರಣಗಳಿಂದ ಅಪೂರ್ಣವಾಗಿ ಉಳಿದಿರುವ ಕಾಮಗಾರಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು/ಕಾಮಗಾರಿವಾರು ಮಾಹಿತಿ ಒದಗಿಸುವುದು)

(ಆ) ರಸ್ತೆ, ಚರಂಡಿ, ಕುಡಿಯುವ ನೀರಿನ ಪೈಪ್‌ಲೈನ್, ಮೇಲ್ಸೇತುವೆ ಹಾಗೂ ಇತರೆ ನಗರಾಭಿವೃದ್ಧಿ ಕಾಮಗಾರಿಗಳು ಅಪೂರ್ಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಕಾಮಗಾರಿಗಳು ವಿಳಂಬಗೊಳ್ಳಲು ಕಾರಣಗಳೇನು ; ಅವುಗಳನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ಹಾಗೂ ಇದಕ್ಕಾಗಿ ವಿಶೇಷ ಕಾರ್ಯಯೋಜನೆಯನ್ನು ರೂಪಿಸಿರುವುದೇ ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಈ) ಅಪೂರ್ಣಗೊಂಡಿರುವ ಕಾಮಗಾರಿಗಳ ಪೈಕಿ ಗುತ್ತಿಗೆದಾರರ ನಿರ್ಲಕ್ಷ್ಯ ಅಥವಾ ಒಪ್ಪಂದ ಉಲ್ಲಂಘನೆಯಿಂದ ವಿಳಂಬಗೊಂಡಿರುವ ಕಾಮಗಾರಿಗಳ ಸಂಖ್ಯೆ ಎಷ್ಟು ಅಂತಹ ಗುತ್ತಿಗೆದಾರರ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ರೈತರ ಬೆಳೆ ವಿಮೆ ಕೃಷಿ ಒಳಸಾಮಗ್ರಿಗಳ ಬೆಲೆ ಏರಿಕೆ ಹಾಗೂ ಕೃಷಿ ವೆಚ್ಚ ನಿಯಂತ್ರಣ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೭೬ (೧೦೩೮) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಪ್ರಧಾನಮಂತ್ರಿ ಫಸಲ್ ಭಿಮಾ ಯೋಜನೆ ಸೇರಿದಂತೆ ವಿವಿಧ ಬೆಳೆ ವಿಮಾ ಯೋಜನೆಗಳಡಿ ಇದುವರೆಗೆ ಒಟ್ಟು ಎಷ್ಟು ರೈತರು ನೋಂದಾಯಿಸಿಕೊಂಡಿದ್ದು, ಎಷ್ಟು ರೈತರು ವಿಮಾ ಪರಿಹಾರವನ್ನು ಪಡೆದಿದ್ದಾರೆ ; (ಜಿಲ್ಲಾವಾರು ಹಾಗೂ ವರ್ಷವಾರು ವಿವರಗಳನ್ನು ನೀಡುವುದು)

(ಆ) ರಾಜ್ಯದಲ್ಲಿ ಬಿತ್ತನೆ ಬೀಜ, ರಸಗೊಬ್ಬರ, ಕೀಟನಾಶಕ ಹಾಗೂ ಕೃಷಿಗೆ ಅಗತ್ಯವಿರುವ ಇತರೆ ಪರಿಕರಗಳ ಬೆಲೆ ನಿರಂತರವಾಗಿ ಏರಿಕೆಯಾಗುತ್ತಿರುವ ಹಿನ್ನಲೆಯಲ್ಲಿ ರೈತರ ಮೇಲಿನ ಉತ್ಪಾದನಾ ವೆಚ್ಚದ ಹೊರೆಯನ್ನು ಕಡಿಮೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ರೈತರಿಗೆ ಗುಣಮಟ್ಟದ ಬೀಜ ಮತ್ತು ಗೊಬ್ಬರವನ್ನು ಸಮಂಜಸ ದರದಲ್ಲಿ ದೊರಕಿಸಲು ಕೈಗೊಂಡಿರುವ ಕ್ರಮಗಳೇನು ;

(ಇ) ಬಿತ್ತನೆ ಸಮಯದಲ್ಲಿ ರೈತರಿಗೆ ಅಗತ್ಯ ಪ್ರಮಾಣದ ಪ್ರಮಾಣೀಕೃತ ಬಿತ್ತನೆ ಬೀಜ, ರಸಗೊಬ್ಬರ ಹಾಗೂ ಕೀಟನಾಶಕಗಳು ಸಕಾಲದಲ್ಲಿ ಲಭ್ಯವಾಗುವಂತೆ ಸರ್ಕಾರ ಯಾವ ವ್ಯವಸ್ಥೆಯನ್ನು ಮಾಡಿದೆ ; ಕಳಪೆ ಬೀಜ, ನಕಲಿ ಗೊಬ್ಬರ ಮತ್ತು ಕೀಟನಾಶಕಗಳ ಮಾರಾಟ ತಡೆಯಲು ಕಳೆದ ಮೂರು ವರ್ಷಗಳಲ್ಲಿ ಎಷ್ಟು ಪ್ರಕರಣಗಳನ್ನು ದಾಖಲಿಸಿ ಎಷ್ಟು ಮಂದಿಯ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ ;

(ಈ) ಕೃಷಿ ಪಂಪ್‌ಸೆಟ್‌ಗಳಿಗೆ ಸಮರ್ಪಕ ವಿದ್ಯುತ್ ಪೂರೈಕೆಯಾಗದಿರುವುದು ಹಾಗೂ ವಿದ್ಯುತ್ ವ್ಯತ್ಯಯದಿಂದ ರೈತರು ಎದುರಿಸುತ್ತಿರುವ ಸಮಸ್ಯೆ ಸರ್ಕಾರದ ಗಮನಕ್ಕೆ ಬಂದಿದೆಯೇ ; ಕೃಷಿ ಚಟುವಟಿಕೆಗಳಿಗೆ ಅಗತ್ಯವಿರುವ ನಿರಂತರ ಹಾಗೂ ನಿಗದಿತ ವಿದ್ಯುತ್ ಪೂರೈಕೆಯನ್ನು ಖಚಿತಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಸಹಕಾರ ಬ್ಯಾಂಕ್‌ಗಳ ಹಣಕಾಸಿನ ಸ್ಥಿತಿ ಹಾಗೂ ಸಾಲ ವಿತರಣೆ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೭೭ (೧೦೪೦) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸಹಕಾರ ಬ್ಯಾಂಕ್‌ಗಳು ಹಾಗೂ ಪತ್ತಿನ ಸಹಕಾರ ಸಂಘಗಳ ಪ್ರಸ್ತುತ ಹಣಕಾಸಿನ ಸ್ಥಿತಿಗತಿಗಳೇನು ; ಕಳೆದ ಮೂರು ವರ್ಷಗಳಲ್ಲಿ ಅವುಗಳ ಠೇವಣಿ, ಸಾಲ ವಿತರಣೆ, ಲಾಭ–ನಷ್ಟ ಹಾಗೂ ಅನುತ್ಪಾದಕ ಆಸ್ತಿಗಳ (ಎನ್‌ಪಿಎ) ಪ್ರಮಾಣ ಎಷ್ಟಿದೆ ; (ಸಂಸ್ಥೆವಾರು ವಿವರ ನೀಡುವುದು)

(ಆ) ರಾಜ್ಯದ ಸಹಕಾರ ಬ್ಯಾಂಕ್‌ಗಳು ಹಾಗೂ ಪತ್ತಿನ ಸಹಕಾರ ಸಂಘಗಳ ಮೂಲಕ ಪ್ರಸ್ತುತ ರೈತರಿಗೆ ನೀಡಲಾಗಿರುವ ಕೃಷಿ ಸಾಲ ಹಾಗೂ ಕೃಷಿಯೇತರ ಸಾಲದ ಒಟ್ಟು ಮೊತ್ತ ಎಷ್ಟಿದೆ ; (ಜಿಲ್ಲಾವಾರು ಮತ್ತು ಸಾಲದ ವರ್ಗವಾರು ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ಸಹಕಾರ ಬ್ಯಾಂಕ್‌ಗಳು ಹಾಗೂ ಪತ್ತಿನ ಸಹಕಾರ ಸಂಘಗಳಲ್ಲಿ ಬಾಕಿ ಉಳಿದಿರುವ ಕೃಷಿ ಮತ್ತು ಕೃಷಿಯೇತರ ಸಾಲದ ಮೊತ್ತ ಎಷ್ಟಿದೆ ; ಎಷ್ಟು ಸಾಲಗಳು ಅನುತ್ಪಾದಕ ಆಸ್ತಿಗಳಾಗಿ (ಎನ್‌ಪಿಎ) ವರ್ಗೀಕರಣಗೊಂಡಿವೆ ಹಾಗೂ ಅವುಗಳ ವಸೂಲಾತಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ರಾಜ್ಯದ ಸಹಕಾರ ಬ್ಯಾಂಕ್‌ಗಳ ಆರ್ಥಿಕ ಸದೃಢತೆ ಹೆಚ್ಚಿಸಲು, ರೈತರಿಗೆ ಕಡಿಮೆ ಬಡ್ಡಿದರದಲ್ಲಿ ಸಕಾಲಿಕವಾಗಿ ಸಾಲ ಸೌಲಭ್ಯ ಒದಗಿಸಲು ಹಾಗೂ ಸಹಕಾರಿ ಸಂಸ್ಥೆಗಳಲ್ಲಿ ಹೆಚ್ಚುತ್ತಿರುವ ಎನ್ ಪಿ ಎ ಪ್ರಮಾಣವನ್ನು ನಿಯಂತ್ರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ಹಾಗೂ ಮುಂದಿನ ದಿನಗಳಲ್ಲಿ ಕೈಗೊಳ್ಳಲಿರುವ ಕ್ರಮಗಳೇನು ?

# ರೈತರ ಆತ್ಮಹತ್ಯೆ ಕಾರಣ ಪರಿಹಾರ ಮತ್ತು ಕುಟುಂಬಗಳ ಪುನರ್ವಸತಿ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೭೮ (೧೦೩೯) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಕೃಷಿ ಸಾಲಬಾಧೆ, ಬೆಳೆ ನಷ್ಟ, ಬೆಳೆಗಳಿಗೆ ಸೂಕ್ತ ಬೆಲೆ ದೊರೆಯದಿರುವುದು ಹಾಗೂ ಇತರೆ ಕಾರಣಗಳಿಂದ ಎಷ್ಟು ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ; (ಜಿಲ್ಲಾವಾರು ಮತ್ತು ವರ್ಷವಾರು ಸಂಪೂರ್ಣ ವಿವರ ನೀಡುವುದು)

(ಆ) ರೈತರ ಆತ್ಮಹತ್ಯೆ ಪ್ರಕರಣಗಳಲ್ಲಿ ಸರ್ಕಾರದ ವತಿಯಿಂದ ಪರಿಹಾರ ಪಡೆಯಲು ಅರ್ಹರೆಂದು ಗುರುತಿಸಲಾದ ಕುಟುಂಬಗಳ ಸಂಖ್ಯೆ ಎಷ್ಟು ; ಈ ಪೈಕಿ ಎಷ್ಟು ಕುಟುಂಬಗಳಿಗೆ ಪರಿಹಾರ ನೀಡಲಾಗಿದೆ ಮತ್ತು ಪರಿಹಾರ ಬಾಕಿ ಉಳಿದಿರುವ ಕುಟುಂಬಗಳ ಸಂಖ್ಯೆ ಹಾಗೂ ಬಾಕಿಗೆ ಕಾರಣವೇನು ;

(ಇ) ರೈತರ ಆತ್ಮಹತ್ಯೆಗೆ ಪ್ರಮುಖ ಕಾರಣಗಳನ್ನು ಗುರುತಿಸಲು ಸರ್ಕಾರ ಯಾವುದೇ ಜಿಲ್ಲಾವಾರು ಅಧ್ಯಯನ/ಸಮೀಕ್ಷೆ ನಡೆಸಿದೆಯೇ ; ನಡೆಸಿದ್ದಲ್ಲಿ, ಕೃಷಿ ಸಾಲ, ಬೆಳೆ ನಷ್ಟ, ಬೆಲೆ ಕುಸಿತ, ನೀರಿನ ಕೊರತೆ ಸೇರಿದಂತೆ ಯಾವ ಕಾರಣಗಳು ಪ್ರಮುಖವಾಗಿ ಕಂಡುಬಂದಿವೆ ;

(ಈ) ರೈತರ ಆತ್ಮಹತ್ಯೆಗಳನ್ನು ತಡೆಗಟ್ಟಲು ಕೃಷಿ ಇಲಾಖೆ ಹಾಗೂ ಸರ್ಕಾರವು ಕೈಗೊಂಡಿರುವ ಶಾಶ್ವತ ಕ್ರಮಗಳೇನು ; ಆತ್ಮಹತ್ಯೆ ಮಾಡಿಕೊಂಡ ರೈತರ ಕುಟುಂಬಗಳಿಗೆ ಪರಿಹಾರದ ಜೊತೆಗೆ

ಜೀವನೋಪಾಯ. ಮಕ್ಕಳ ಶಿಕ್ಷಣ ಮತ್ತು ಸಾಲದ ಸಮಸ್ಯೆ ನಿವಾರಣೆಗೆ ಯಾವುದೇ ವಿಶೇಷ ಪುನರ್ವಸತಿ ಯೋಜನೆ ಜಾರಿಯಲ್ಲಿದೆಯೇ ?

## ಸಿಂಧನೂರು ಹಳ್ಳವನ್ನು ಸ್ವಚ್ಛಗೊಳಿಸುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೭೬ (೯೯೪) ಮಾನ್ಯ ಪೌರಾಡಳಿತ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರ ಜನತೆಯ ದಿನಬಳಕೆ ಹಾಗೂ ಸುತ್ತಮುತ್ತಲಿನ ಹಳ್ಳಿಗಳ ಜಾನುವಾರುಗಳಿಗೆ ನೀರನ್ನು ಪೂರೈಸುತ್ತಿದ್ದ ಹೆಮ್ಮೆಯ ಸಿಂಧನೂರು ಹಳ್ಳವು ಇಂದು ಜಾಲಿ ಬೇಲಿಗಳಿಂದ ತುಂಬಿಕೊಂಡು, ಸಿಂಧನೂರಿನ ಮಧ್ಯಭಾಗದಲ್ಲಿ ಕೊಳಚೆ ನೀರು ವಿಲೀನಗೊಂಡು ಚರಂಡಿಯಾಗಿ ಮಾರ್ಪಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಹಳ್ಳದ ಜಾಗವನ್ನು ಖಾಸಗಿ ವ್ಯಕ್ತಿಗಳು ಅತಿಕ್ರಮಣ ಮಾಡಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈ ಸಂಬಂಧ ಸಿಂಧನೂರು ನಗರಸಭೆ ವತಿಯಿಂದ ಯಾವ ಕ್ರಮ ವಹಿಸಲಾಗಿದೆ ;

(ಈ) ಯಾವ ಕಾಲಮಿತಿಯೊಳಗೆ ಸಿಂಧನೂರು ನಗರಸಭೆ ವತಿಯಿಂದ ಸಿಂಧನೂರು ಹಳ್ಳವನ್ನು ಸ್ವಚ್ಛಗೊಳಿಸಿ, ಅತಿಕ್ರಮಣ ಪ್ರದೇಶವನ್ನು ಖಾಸಗಿ, ವ್ಯಕ್ತಿಗಳಿಂದ ವಶಪಡಿಸಿಕೊಳ್ಳಲಾಗುವುದು ?

# ರೈತರಿಗೆ ಸಹಕಾರ ಸಂಘಗಳ ಮೂಲಕ ಕೃಷಿ ಸಾಲವನ್ನು ನೀಡುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೮೦ (೯೯೧) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರ ತಾಲ್ಲೂಕಿನಲ್ಲಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು (PACS) ಸೇರಿದಂತೆ ಒಟ್ಟು ಎಷ್ಟು ಸಹಕಾರ ಸಂಘಗಳು ಕಾರ್ಯನಿರ್ವಹಿಸುತ್ತಿವೆ ಹಾಗೂ ಅವುಗಳಲ್ಲಿ ಎಷ್ಟು ಸಂಘಗಳು ಪ್ರಸ್ತುತ ಸಕ್ರಿಯವಾಗಿ ರೈತರಿಗೆ ಕೃಷಿ ಸಾಲ ಮತ್ತು ಇತರೆ ಸೇವೆಗಳನ್ನು ಒದಗಿಸುತ್ತಿವೆ ;

(ಆ) ಕಳೆದ ಮೂರು ವರ್ಷಗಳಲ್ಲಿ ಸಿಂಧನೂರು ತಾಲ್ಲೂಕಿನ ಸಹಕಾರ ಸಂಘಗಳ ಮೂಲಕ ರೈತರಿಗೆ ನೀಡಲಾದ ಅಲ್ಪಾವಧಿ ಮತ್ತು ಮಧ್ಯಮಾವಧಿ ಕೃಷಿ ಸಾಲದ ಮೊತ್ತ ಫಲಾನುಭವಿ ರೈತರು ಸಂಖ್ಯೆ ಹಾಗೂ ವಸೂಲಾತಿ ಪ್ರಮಾಣ ವರ್ಷವಾರು ಎಷ್ಟಿದೆ ;

(ಇ) ಕೃಷಿ ಹಂಗಾಮಿನಲ್ಲಿ ರೈತರಿಗೆ ಅಗತ್ಯವಿರುವ ಸಮಯದಲ್ಲಿ ಸಹಕಾರ ಸಂಘಗಳಿಂದ ಕೃಷಿ ಸಾಲ ಮಂಜೂರಾಗದೆ ಸಾಲ ಮಂಜೂರಾತಿ ಅಥವಾ ವಿತರಣೆಯಲ್ಲಿ ವಿಳಂಬವಾಗುತ್ತಿರುವ ಕುರಿತು ದೂರುಗಳು ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದರೆ, ಸದರಿ ದೂರುಗಳನ್ನು ಪರಿಹರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಉ) ಸಣ್ಣ ಮತ್ತು ಅತಿಸಣ್ಣ ರೈತರು ಅರ್ಹ ರೈತರು ಸಹಕಾರ ಸಂಘಗಳ ಮೂಲಕ ಕೃಷಿ ಸಾಲ ಪಡೆಯುವಲ್ಲಿ ಎದುರಿಸುತ್ತಿರುವ ಅಡಚಣೆಗಳನ್ನು ನಿವಾರಿಸಲು ಸಹಕಾರ ಇಲಾಖೆ ಸರಳೀಕೃತ ಸಾಲ ಪ್ರಕ್ರಿಯೆ ಮತ್ತು ಡಿಜಿಟಲ್ ಸೇವಾ ವ್ಯವಸ್ಥೆಯನ್ನು ಜಾರಿಗೆ ತರುವುದರಲ್ಲಿ ಸರ್ಕಾರದ ನಿಲುವೇನು ?

## ಕಾಮದೇನು ಸಮುದಾಯ ಬೇಸಾಯಿ ಸಹಕಾರಿ ಸಂಘ (ರಿ) ದ ಸದಸ್ಯರುಗಳಿಗೆ ಜಮೀನು ಮಂಜೂರು ಮಾಡುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೮೧ (೯೯೦) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕಿನ 'ಕಾಮದೇನು ಸಮುದಾಯ ಬೇಸಾಯ ಸಹಕಾರಿ ಸಂಘ (ರಿ) ಇವರ ಜವಳಗೇರಾ ಬಳಿಯ ತುರಕಟ್ಟೆ ಸುಲ್ತಾನ್‌ಪುರ ಗ್ರಾಮ ಮತ್ತು ವಲ್ಕಂದಿನ್ನಿ ಹೋಬಳಿಯ ಬನ್ನಿಗನೂರು ಗ್ರಾಮದ ಸುಮಾರು ೧೬೬ ಎಕರೆ ೧೬ ಗುಂಟೆ ಜಮೀನನ್ನು ಸದರಿ ಸಂಘದ ೮೩ ಜನ ಶೇರುದಾರರಿಗೆ ತಲಾ ೨ ಎಕರೆಯಂತೆ ಈ ಹಿಂದೆ ಹಂಚಿಕೆ ಮಾಡಿದ್ದು ; ಸುಮಾರು ೫೦ ವರ್ಷಗಳಿಂದ ಸದರಿ ಶೇರುದಾರರು ಸಾಗುವಳಿ ಮಾಡುತ್ತಾ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಸಂಘವು ಸರ್ಕಾರದಿಂದ ಸಾಲ–ಸಹಾಯ ಧನ ಪಡೆದು ಜಮೀನನ್ನು ಖರೀದಿಸಿದ್ದು, ಸಂಘವು ಸಮಾಪನೆಗೊಂಡ ನಂತರ ಸರ್ಕಾರದಿಂದ ಪಡೆದ ಸಾಲ ಮರುಪಾವತಿಯಾಗದ ಕಾರಣ ೧೯೯೦ರಲ್ಲಿ ಪಹಣಿಯಲ್ಲಿ ಕರ್ನಾಟಕ ಸರ್ಕಾರವೆಂದು ಹೆಸರು ಬದಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸದರಿ ೮೩ ಜನ ಷೇರುದಾರರು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ವರ್ಗಕ್ಕೆ ಸೇರಿದವರಾಗಿದ್ದು, ಆರ್ಥಿಕವಾಗಿ ದುರ್ಬಲರಾಗಿದ್ದ ಕಾರಣದಿಂದಾಗಿ ಸಕಾಲಕ್ಕೆ ಸರ್ಕಾರದ ಸಾಲವನ್ನು ಮರುಪಾವತಿ ಮಾಡಲು ಸಾಧ್ಯವಾಗಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಪ್ರಸ್ತುತ ಸದರಿ ೮೩ ಜನ ಷೇರುದಾರರ ಕುಟುಂಬಗಳು ಸರ್ಕಾರಕ್ಕೆ ಮರುಪಾವತಿ ಮಾಡಬೇಕಿರುವ ಸಾಲವನ್ನು ಮರುಪಾವತಿ ಮಾಡಲು ಸಿದ್ಧರಿದ್ದು, ಯಾವ ಅಧಿಕಾರಿಗಳು ಸದರಿ ಮೊತ್ತವನ್ನು ಅವರಿಂದ ಪಡೆಯಲು ಮುಂದಾಗುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಸದರಿ ಸಂಘದ ೮೩ ಷೇರುದಾರರ ಕುಟುಂಬಗಳಿಗೆ ಇತರೆ ಯಾವುದೇ ಪಟ್ಟಾ ಜಮೀನನ್ನು ಇಲ್ಲದ ಕಾರಣದಿಂದಾಗಿ ಇದೇ ಜಮೀನನ್ನು ಸಾಗುವಳಿ ಮಾಡಿ ಜೀವನ ನಡೆಸುತ್ತಿದ್ದು ಸದರಿ ಸಾಗುವಳಿದಾರರಿಗೆ ಜಮೀನುನ್ನು ಅಧಿಕೃತವಾಗಿ ಮಂಜೂರು ಮಾಡುವ ಸಂಬಂಧ ಸರ್ಕಾರದ ನಿಲುವೇನು ?

## ಕೀಟ ನಾಶಕಗಳನ್ನು ಬಳಸುವ ಕುರಿತು ವೈಜ್ಞಾನಿಕ ಸಲಹೆಯನ್ನು ರೈತರಿಗೆ ನೀಡುವ ಕುರಿತು

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೮೨ (೯೯೨) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಸಿಂಧನೂರು ತಾಲ್ಲೂಕಿನಲ್ಲಿ ಭತ್ತ ಸೇರಿದಂತೆ ಪ್ರಮುಖ ಬೆಳೆಗಳಲ್ಲಿ ಕಂಡುಬಂದಿರುವ ಪ್ರಮುಖ ಕೀಟ ಮತ್ತು ರೋಗಬಾಧೆಗಳ ಪ್ರಮಾಣವನ್ನು ಕೃಷಿ ಇಲಾಖೆಯು ವೈಜ್ಞಾನಿಕವಾಗಿ ದಾಖಲಿಸಿಕೊಂಡಿದೆಯೇ ; ದಾಖಲಿಸಿಕೊಂಡಿದ್ದಲ್ಲಿ, ವರ್ಷವಾರು ವಿವರ ನೀಡುವುದು ;

(ಆ) ರೈತರು ಕೀಟಬಾಧೆ ನಿಯಂತ್ರಿಸಲು ಅಗತ್ಯಕ್ಕಿಂತ ಹೆಚ್ಚಿನ ಪ್ರಮಾಣದಲ್ಲಿ ಅಥವಾ ಅಪಾಯಕಾರಿ ಕೀಟನಾಶಕಗಳನ್ನು ಬಳಸುತ್ತಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಸಿಂಧನೂರು ತಾಲ್ಲೂಕಿನಲ್ಲಿ ಕೀಟನಾಶಕಗಳ ಅವೈಜ್ಞಾನಿಕ ಬಳಕೆಯನ್ನು ತಡೆಯಲು ಸಮಗ್ರ ಕೀಟ ನಿರ್ವಹಣೆ (Integrated Pest Management-IPM) ಪದ್ಧತಿಯನ್ನು ಅಳವಡಿಸಿಕೊಳ್ಳುವಂತೆ: ರೈತರಿಗೆ ತರಬೇತಿ, ಕ್ಷೇತ್ರ ಪ್ರದರ್ಶನ ಮತ್ತು ತಾಂತ್ರಿಕ ಮಾರ್ಗದರ್ಶನವನ್ನು ಕಳೆದ ಮೂರು ವರ್ಷಗಳಲ್ಲಿ ಎಷ್ಟು ಗ್ರಾಮಗಳಲ್ಲಿ ನೀಡಲಾಗಿದೆ ;

(ಈ) ರೈತರಿಗೆ ಕೀಟಬಾಧೆ ಕಾಣಿಸಿಕೊಂಡ ತಕ್ಷಣ ಸರಿಯಾದ ಕೀಟನಾಶಕ ಮತ್ತು ಅದರ ಪ್ರಮಾಣದ ಕುರಿತು ವೈಜ್ಞಾನಿಕ ಸಲಹೆ ದೊರೆಯಲು ಮೊಬೈಲ್ ಆಧಾರತ ಕೀಟ-ರೋಗ ಪತ್ತೆ ತಾಂತ್ರಿಕ ವ್ಯವಸ್ಥೆಯನ್ನು ಸಿಂಧನೂರು ತಾಲ್ಲೂಕಿನಲ್ಲಿ ಪರಿಣಾಮಕಾರಿಯಾಗಿ ಜಾರಿಗೆ ತರಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ರೈತರಿಗೆ ಕೃಷಿ ಯಂತ್ರೋಪಕರಣಗಳನ್ನು ಒದಗಿಸುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೮೮೩ (೯೯೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಮೂರು ವರ್ಷಗಳಲ್ಲಿ (೨೦೨೩-೨೪, ೨೦೨೪-೨೫ ಮತ್ತು ೨೦೨೫-೨೬) ಸಿಂಧನೂರು ತಾಲ್ಲೂಕಿಗೆ ಕೃಷಿ ಯಾಂತ್ರೀಕರಣ ಯೋಜನೆಯಡಿ ವರ್ಷವಾರು ನಿಗದಿಪಡಿಸಲಾದ ಭೌತಿಕ ಮತ್ತು ಆರ್ಥಿಕ ಗುರಿ ಎಷ್ಟು ;

(ಆ) ಅದೇ ಅವಧಿಯಲ್ಲಿ ಕೃಷಿ ಯಂತ್ರೋಪಕರಣಗಳ ಖರೀದಿಗೆ ಸಹಾಯಧನಕ್ಕಾಗಿ ಅರ್ಜಿ ಸಲ್ಲಿಸಿದ ರೈತರ ಸಂಖ್ಯೆ ಎಷ್ಟು ಹಾಗೂ ಸಹಾಯಧನ ಮಂಜೂರಾಗಿ ವಿತರಣೆಗೊಂಡ ರೈತರ ಸಂಖ್ಯೆ ಎಷ್ಟು ;

(ಇ) ಸಿಂಧನೂರು ತಾಲ್ಲೂಕಿನಲ್ಲಿ ಈ ಯೋಜನೆಯಡಿ ಟ್ರ್ಯಾಕ್ಟರ್, ಪವರ್ ಟಿಲ್ಲರ್, ಭತ್ತ ನಾಟಿ ಯಂತ್ರ, ಕೊಯ್ಲು ಯಂತ್ರ, ಥ್ರೆಷರ್ ಹಾಗೂ ಇತರೆ ಕೃಷಿ ಯಂತ್ರೋಪಕರಣಗಳಿಗೆ ಪ್ರತ್ಯೇಕವಾಗಿ ಎಷ್ಟು ರೈತರಿಗೆ ಸಹಾಯಧನ ನೀಡಲಾಗಿದೆ ;

(ಈ) ಪ್ರಸಕ್ತ ೨೦೨೬–೨೭ನೇ ಸಾಲಿನಲ್ಲಿ ಸಿಂಧನೂರು ತಾಲ್ಲೂಕಿಗೆ ಕೃಷಿ ಯಾಂತ್ರೀಕರಣ ಯೋಜನೆಯಡಿ ನಿಗದಿಪಡಿಸಿರುವ ಗುರಿ ಎಷ್ಟು ಮತ್ತು ಇದುವರೆಗೆ ಸಾಧಿಸಿರುವ ಪ್ರಗತಿ ಎಷ್ಟಾಗಿದೆ ;

(ಉ) ಸಿಂಧನೂರು ತಾಲ್ಲೂಕಿನಲ್ಲಿ ಸಣ್ಣ ಮತ್ತು ಅತಿಸಣ್ಣ ರೈತರು ಹಾಗೂ ರೈತ ಗುಂಪುಗಳಿಗೆ ಕೃಷಿ ಯಂತ್ರೋಪಕರಣಗಳ ಬಳಕೆಯನ್ನು ಹೆಚ್ಚಿಸುವ ಉದ್ದೇಶದಿಂದ ಕಸ್ಟಮ್ ಹೈರಿಂಗ್ ಸೆಂಟರ್‌ಗಳ ಮೂಲಕ ಯಂತ್ರೋಪಕರಣಗಳನ್ನು ಬಾಡಿಗೆಗೆ ಒದಗಿಸುವ ವ್ಯವಸ್ಥೆಯನ್ನು ಇನ್ನಷ್ಟು ವಿಸ್ತರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಬೀದರ್ ಜಿಲ್ಲೆಯಲ್ಲಿ '೧೯೬೨ ಸಂಚಾರಿ ಪಶು ಚಿಕಿತ್ಸಾ ಘಟಕ'ಗಳ ಸೇವೆ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೮೮೪ (೧೦೧೯) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿವಮೊಗ್ಗ ಜಿಲ್ಲೆಯಲ್ಲಿ ಅಕಾಲಿಕ ಮಳೆಗೆ ಅಡಿಕೆ ತೋಟ ಹಾನಿ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರದಿಂದ ಪರಿಹಾರ ವಿತರಿಸಲು ಕ್ರಮ ಕೈಗೊಳ್ಳಲಾಗಿದೆಯೇ ; ಇದಕ್ಕಾಗಿ ಮೀಸಲಿಟ್ಟ ಹಣ ಎಷ್ಟು ;

(ಇ) ಶಿವಮೊಗ್ಗ ಜಿಲ್ಲೆಯಲ್ಲಿ ಎಷ್ಟು ಅಡಿಕೆ ಮರಗಳು ಹಾನಿಯಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಪ್ರತಿ ಎಕರೆಗೆ ಅಥವಾ ಒಂದು ಅಡಿಕೆ ಮರಕ್ಕೆ ಎಷ್ಟು ಪರಿಹಾರವನ್ನು ಸರ್ಕಾರ ನಿಗದಿಪಡಿಸಿದೆ ;

(ಉ) ಇದುವರೆವಿಗೂ ಪರಿಹಾರ ಕೋರಿ ಸ್ವೀಕೃತಗೊಂಡಿರುವ ಅರ್ಜಿಗಳು ಎಷ್ಟು ; ಎಷ್ಟು ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದೆ ; ಬಾಕಿ ಉಳಿದಿರುವ ಅರ್ಜಿಗಳು ಎಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ಗೋ ಶಾಲೆಗಳ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೮೮೫ (೧೦೨೧) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅಸ್ತಿತ್ವದಲ್ಲಿರುವ ಸರ್ಕಾರದ ವತಿಯಿಂದ ಎಷ್ಟು ಗೋ ಶಾಲೆಗಳನ್ನು ತೆರೆಯಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಗೋ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸಲು ಇರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಖಾಲಿ ಇರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ;

(ಇ) ರಾಜ್ಯದಲ್ಲಿರುವ ಖಾಸಗಿ ಗೋ ಶಾಲೆಗಳ ಸಂಖ್ಯೆ ಎಷ್ಟು ;

(ಈ) ಕಳೆದ 3 ವರ್ಷದಲ್ಲಿ ಖಾಸಗಿ ಗೋ ಶಾಲೆ ನಡೆಸುವವರಿಗೆ ಸರ್ಕಾರದಿಂದ ಪ್ರತಿ ವರ್ಷ ಅನುದಾನ ಬಿಡುಗಡೆ ಮಾಡಲಾಗುತ್ತಿದೆಯೇ ; (ಜಿಲ್ಲಾವಾರು ವಿವರ ನೀಡುವುದು)

(ಉ) ಪ್ರತಿ ಗೋ ಶಾಲೆಗಳಲ್ಲಿ ಇರುವ ಬರಡು ಹಸು, ಎತ್ತುಗಳ, ಕರುಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ಮಾಹಿತಿ ನೀಡುವುದು)

## ಸಹಕಾರ ಭವನ ನಿರ್ಮಾಣ ಮಾಡುವ ಕುರಿತು

**ಶ್ರೀ ಎನ್. ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೮೮೬ (೧೦೪೭) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ನಗರದಲ್ಲಿ ಸಹಕಾರ ಭವನ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ರಾಯಚೂರು ನಗರದಲ್ಲಿ ಸಹಕಾರ ಭವನದ ಕಟ್ಟಡ ನಿರ್ಮಾಣ ಮಾಡಲು ಸಹಕಾರ ಸಂಘಗಳ ಜಂಟಿ ನಿಬಂಧಕರು ಕಲಬುರಗಿ ಇವರಿಂದ ಬಂದಿರುವಂತಹ ಪ್ರಸ್ತಾವನೆಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ; ಪ್ರಸ್ತಾವನೆ ಅನುಮೋದನೆಗೆ ವಿಳಂಬವಾಗಲು ಕಾರಣಗಳೇನು ?

## ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ

**ಶ್ರೀ ಎನ್. ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೮೮೭ (೧೦೪೮) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿ ಖಾಲಿ ಇರುವ ಪಶುವೈದ್ಯಕೀಯ ಹುದ್ದೆಗಳು ಎಷ್ಟು ; ಖಾಲಿ ಇರುವ ಹುದ್ದೆಗಳನ್ನು ಭರ್ತಿಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ರಾಯಚೂರು ನಗರದ ಮಲಿಯಾಬಾದ ಗೋಶಾಲಾ ಹತ್ತಿರ ಮಂಜೂರಾಗಿರುವ ಪಶುಚಿಕಿತ್ಸಾಲಯ ನಿರ್ಮಾಣ ಕಾಮಗಾರಿ ಯಾವ ಹಂತದಲ್ಲಿ ಇದೆ ; ಇಲ್ಲಿ ಸೂಮಾರು ೧೦೦೦ ಗೋವುಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಸಂಸ್ಥೆಗೆ ಸರ್ಕಾರದಿಂದ ಅನುದಾನ ಮಂಜೂರು ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಜವಳಿ ಪಾರ್ಕ್ ಮಂಜೂರು ಮಾಡುವ ಬಗ್ಗೆ

**ಶ್ರೀ ಎನ್. ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೮೮೮ (೧೦೪೯) ಮಾನ್ಯ ಸಕ್ಕರೆ ಮತ್ತು ಜವಳಿ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

೨೦೨೫–೨೬ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವಂತೆ ರಾಯಚೂರು ನಗರದಲ್ಲಿ ಜವಳಿ ಪಾರ್ಕ್ (Textile Park) ಮಂಜೂರು ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಶಿರಾ ತಾಲ್ಲೂಕಿನ ವಸತಿ ಯೋಜನೆಯ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :–**

೮೮೯ (೧೦೫೭) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಮಕೂರು ಜಿಲ್ಲೆ, ಶಿರಾ ತಾಲ್ಲೂಕಿಗೆ ಕಳೆದ ಮೂರು ವರ್ಷಗಳಲ್ಲಿ ಸರ್ಕಾರದ ವಿವಿಧ ವಸತಿ ಯೋಜನೆಗೆ ಮಂಜೂರಾದ ಮನೆಗಳ ಸಂಖ್ಯೆ ಎಷ್ಟು ; (ವರ್ಷವಾರು, ಗ್ರಾಮವಾರು ಸಂಪೂರ್ಣ ವಿವರ ನೀಡುವುದು)

(ಆ) ಮಂಜೂರಾದ ಮನೆಗಳಲ್ಲಿ ಪ್ರಾರಂಭವಾದ ಮನೆಗಳ ಸಂಖ್ಯೆ ಎಷ್ಟು ; ಮುಕ್ತಾಯವಾದ ಮನೆಗಳ ಸಂಖ್ಯೆ ಎಷ್ಟು :

(ಇ) ಎಷ್ಟು ಫಲಾನುಭವಿಗಳು ಮನೆ ನಿರ್ಮಿಸಿಕೊಂಡಿದ್ದರೂ, ಹಣ ಬಿಡುಗಡೆಯಾಗಿರುವುದಿಲ್ಲ ; (ವರ್ಷವಾರು, ಗ್ರಾಮವಾರು ವಿವರ ನೀಡುವುದು)

(ಈ) ಎಲ್ಲಾ ಫಲಾನುಭವಿಗಳಿಗೂ ಶೀಘ್ರವಾಗಿ ಹಣ ಬಿಡುಗಡೆ ಮಾಡಲು ಸರ್ಕಾರ ಕೈಗೊಳ್ಳುವ ಕ್ರಮವೇನು ;

(ಉ) ಶಿರಾ ತಾಲ್ಲೂಕಿನಲ್ಲಿರುವ ವಸತಿ ರಹಿತರ ಮತ್ತು ನಿವೇಶನ ರಹಿತರ ಸಂಖ್ಯೆ ಎಷ್ಟು ; (ಗ್ರಾಮವಾರು ಸಂಪೂರ್ಣ ವಿವರ ನೀಡುವುದು)

(ಊ) ಎಲ್ಲಾ ವಸತಿ ರಹಿತರಿಗೆ ವಸತಿ ಸೌಕರ್ಯ ಕಲ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರಾಜ್ಯದಲ್ಲಿ ಇಂದಿರಾ ಕ್ಯಾಂಟೀನ್‌ಗಳಲ್ಲಿ ಸರ್ಕಾರ ನಿಗದಿಪಡಿಸಿದ ಮೆನು/ಚಾರ್ಟ್‌ನಂತೆ ಆಹಾರ ನೀಡದಿರುವ ಕುರಿತು

**ಶ್ರೀಮತಿ ಹೇಮಲತಾ ನಾಯಕ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೯೦ (೧೦೪೪) ಮಾನ್ಯ ಪೌರಾಡಳಿತ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಇಂದಿರಾ ಕ್ಯಾಂಟೀನ್‌ಗಳಲ್ಲಿ ಸರ್ಕಾರ ನಿಗದಿಪಡಿಸಿರುವ ಮೆನು/ಚಾರ್ಟ್‌ನಂತೆ ಆಹಾರ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಕೈಗೊಂಡಿರುವ ಕ್ರಮಗಳೇನು ; (ವಿವರ ಒದಗಿಸುವುದು)

(ಆ) ಕೆಲವು ಇಂದಿರಾ ಕ್ಯಾಂಟೀನ್‌ಗಳು ಪ್ರತಿದಿನ ತೆರೆಯದೆ ಎರಡು–ಮೂರು ದಿನಗಳಿಗೊಮ್ಮೆ ತೆರೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹೌದಾದರೆ ಅಂತಹ ಪ್ರಕರಣಗಳು ಕಂಡುಬಂದಿರುವ ಜಿಲ್ಲಾವಾರು ವಿವರ ಒದಗಿಸುವುದು ;

(ಇ) ಇಂದಿರಾ ಕ್ಯಾಂಟೀನ್‌ಗಳಲ್ಲಿ ಶುಚಿತ್ವ ಕಾಪಾಡದಿರುವುದರಿಂದ ಸಾರ್ವಜನಿಕರು ವಿಶೇಷವಾಗಿ ಬಡವರ ಆರೋಗ್ಯದ ಮೇಲೆ ಪರಿಣಾಮ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ತಪ್ಪಿತಸ್ಥ ಗುತ್ತಿಗೆದಾರರ ವಿರುದ್ಧ ಕೈಗೊಂಡಿರುವ ಕ್ರಮಗಳೇನು ; (ವಿವರ ಒದಗಿಸುವುದು)

(ಈ) ೨೦೨೩–೨೪ನೇ ಸಾಲಿನಿಂದ ಇಲ್ಲಿಯವರೆಗೆ ಇಂದಿರಾ ಕ್ಯಾಂಟೀನ್‌ಗಳ ಗುತ್ತಿಗೆದಾರರಿಗೆ ಎಷ್ಟು ಮೊತ್ತದ ಬಿಲ್ ಪಾವತಿಸಲಾಗಿದೆ ; ಪ್ರಸ್ತುತ ಯಾವ ತಿಂಗಳಿನಿಂದ ಎಷ್ಟು ಮೊತ್ತದ ಬಿಲ್ ಬಾಕಿ ಇದೆ ; ಬಾಕಿ ಮೊತ್ತವನ್ನು ಪಾವತಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ಒದಗಿಸುವುದು)

(ಉ) ಇಂದಿರಾ ಕ್ಯಾಂಟೀನ್‌ಗಳಲ್ಲಿ ಸರ್ಕಾರ ನಿಗದಿಪಡಿಸಿರುವ ಮೆನು ಪ್ರಕಾರ ಆಹಾರ ಒದಗಿಸುವುದು, ಶುಚಿತ್ವ ಕಾಪಾಡುವುದು ಹಾಗೂ ಕ್ಯಾಂಟೀನ್‌ಗಳನ್ನು ಪ್ರತಿದಿನ ತೆರೆಯುವುದನ್ನು ಖಚಿತಪಡಿಸಲು ಸರ್ಕಾರ ಮುಂದೆ ಯಾವ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಲಿದೆ ? (ವಿವರ ಒದಗಿಸುವುದು)

## ಮೀನುಗಾರಿಕೆ ಇಲಾಖೆ ವತಿಯಿಂದ ಮೀನುಗಾರರಿಗೆ ಆಶ್ರಯ ಮನೆಗಳನ್ನು ಕಲ್ಪಿಸುವ ಯೋಜನೆಯಡಿ ೨೦೨೧–೨೨ನೇ ಸಾಲಿನಿಂದ ಇಲ್ಲಿಯವರೆಗೆ ಮಂಜೂರಾದ ಮನೆಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೯೧ (೧೦೪೫) ಮಾನ್ಯ ಮುಜರಾಯಿ, ಮೀನುಗಾರಿಕೆ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೧–೨೨ನೇ ಸಾಲಿನಿಂದ ಮೀನುಗಾರಿಕೆ ಇಲಾಖೆ ವತಿಯಿಂದ ಮೀನುಗಾರರಿಗೆ ಆಶ್ರಯ ಮನೆಗಳನ್ನು ಕಲ್ಪಿಸುವ ಯೋಜನೆಯಡಿ ಇಲ್ಲಿಯವರೆಗೆ ಎಷ್ಟು ಮನೆಗಳನ್ನು ಮಂಜೂರು ಮಾಡಲಾಗಿದೆ ; (ಜಿಲ್ಲಾವಾರು ಹಾಗೂ ವರ್ಷವಾರು ವಿವರ ಒದಗಿಸುವುದು)

(ಆ) ೨೦೨೧–೨೨ನೇ ಸಾಲಿನಿಂದ ಪ್ರತಿ ವರ್ಷ ಜಿಲ್ಲಾವಾರು ನಿಗದಿಪಡಿಸಿದ ಗುರಿ ಎಷ್ಟು ಹಾಗೂ ಅದರ ಪೈಕಿ ಸಾಧನೆ

ಎಷ್ಟು; ಇನ್ನೂ ಬಾಕಿ ಇರುವ ಮನೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಹಾಗೂ ವರ್ಷವಾರು ವಿವರ ಒದಗಿಸುವುದು)

(ಇ) ಸುಮಾರು ಎರಡು ವರ್ಷಗಳ ಹಿಂದೆ ಮನೆಗಳು ಮಂಜೂರಾದರೂ ಇದುವರೆಗೆ ನಿರ್ಮಾಣ ಪ್ರಾರಂಭಿಸದ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಅಂತಹ ಫಲಾನುಭವಿಗಳ ವಿರುದ್ಧ ಅಥವಾ ಸಂಬಂಧಪಟ್ಟವರ ವಿರುದ್ಧ ಕೈಗೊಂಡಿರುವ ಕ್ರಮಗಳೇನು ;

(ಈ) ಮಂಜೂರಾದ ಮನೆಗಳ ಪೈಕಿ ಪೂರ್ಣಗೊಂಡ, ಭಾಗಶಃ ಪೂರ್ಣಗೊಂಡ ಅರ್ಧಕ್ಕೆ ನಿಂತಿರುವ ಹಾಗೂ ಇನ್ನೂ ಪ್ರಾರಂಭವಾಗದ ಮನೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಹಾಗೂ ವರ್ಷವಾರು ವಿವರ ಒದಗಿಸುವುದು)

(ಉ) ಭಾಗಶಃ ಪೂರ್ಣಗೊಂಡ ಮನೆಗಳಿಗೆ ಇದುವರೆಗೆ ಪಾವತಿಸಿರುವ ಅನುದಾನ ಎಷ್ಟು ಹಾಗೂ ಪೂರ್ಣಗೊಂಡ ಮನೆಗಳಿಗೆ ಪಾವತಿಸಿರುವ ಅನುದಾನ ಎಷ್ಟು ; ಅರ್ಧಕ್ಕೆ ನಿಂತಿರುವ ಮತ್ತು ಪ್ರಾರಂಭವಾಗದ ಮನೆಗಳನ್ನು ಪೂರ್ಣಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ಮತ್ತು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ?

## ೨೦೨೩–೨೪ನೇ ಸಾಲಿನಿಂದ ಇಲ್ಲಿಯವರೆಗೆ ರಾಜ್ಯದ ವಿವಿಧ ವಸತಿ ಯೋಜನೆಗಳಡಿ ಜಿಲ್ಲಾವಾರು ನಿಗದಿಪಡಿಸಿರುವ ಮನೆಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೯೨ (೧೦೪೬) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೩-೨೪ನೇ ಸಾಲಿನಿಂದ ಇಲ್ಲಿಯವರೆಗೆ ರಾಜ್ಯದ ವಿವಿಧ ವಸತಿ ಯೋಜನೆಗಳಡಿ ಜಿಲ್ಲಾವಾರು ನಿಗದಿಪಡಿಸಿರುವ ಮನೆಗಳ ಗುರಿ ಎಷ್ಟು ; ಈ ಪೈಕಿ ಸಾಧನೆ ಎಷ್ಟು ಹಾಗೂ ಬಾಕಿ ಇರುವ ಮನೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಹಾಗೂ ವರ್ಷವಾರು ವಿವರ ಒದಗಿಸುವುದು)

(ಆ) ನಿಗದಿಪಡಿಸಿದ ಗುರಿಯ ಪೈಕಿ ಇದುವರೆಗೆ ಎಷ್ಟು ಮನೆಗಳು ಪೂರ್ಣಗೊಂಡಿವೆ ; ಎಷ್ಟು ಮನೆಗಳು ನಿರ್ಮಾಣ ಹಂತದಲ್ಲಿವೆ ಹಾಗೂ ಇನ್ನೂ ಎಷ್ಟು ಮನೆಗಳ ನಿರ್ಮಾಣ ಪ್ರಾರಂಭವಾಗಿಲ್ಲ ; (ಜಿಲ್ಲಾವಾರು ಹಾಗೂ ವರ್ಷವಾರು ವಿವರ ಒದಗಿಸುವುದು)

(ಇ) ಪೂರ್ಣಗೊಂಡ ಮನೆಗಳ ಪೈಕಿ ಎಷ್ಟು ಫಲಾನುಭವಿಗಳ ಸಂಪೂರ್ಣ ಅನುದಾನ ಪಾವತಿಸಲಾಗಿದೆ ; ಭಾಗಶಃ ಅನುದಾನ ಪಾವತಿಸಿ ಉಳಿದ ಮೊತ್ತ ಪಾವತಿಸಲು ಬಾಕಿ ಇರುವ ಫಲಾನುಭವಿಗಳ ಸಂಖ್ಯೆ ಎಷ್ಟು ಹಾಗೂ ಬಾಕಿ ಮೊತ್ತ ಎಷ್ಟು; (ಜಿಲ್ಲಾವಾರು ವಿವರ ಒದಗಿಸುವುದು)

(ಈ) ಮನೆ ನಿರ್ಮಾಣ ಪ್ರಾರಂಭಿಸದಿರುವ ಫಲಾನುಭವಿಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಬಾಕಿ ಇರುವ ಮನೆಗಳ ನಿರ್ಮಾಣವನ್ನು ಪೂರ್ಣಗೊಳಿಸಲು ಸರ್ಕಾರ ಯಾವುದೇ ಕಾಲಮಿತಿಯನ್ನು ನಿಗದಿಪಡಿಸಿದೆಯೇ ;

(ಉ) ಮನೆಗಳು ಪೂರ್ಣಗೊಂಡಿದ್ದರೂ ಅನುದಾನದ ಮೊತ್ತ ಪಾವತಿಸಲು ಬಾಕಿ ಇರುವ ಪ್ರಕರಣಗಳಲ್ಲಿ ಬಾಕಿ ಮೊತ್ತವನ್ನು ಫಲಾನುಭವಿಗಳಿಗೆ ಯಾವಾಗ ಸಂಪೂರ್ಣವಾಗಿ ಪಾವತಿಸಲಾಗುವುದು ; ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ಒದಗಿಸುವುದು)

## ಮಂಗಳೂರು ವಿಮಾನ ನಿಲ್ದಾಣ ವಿಸ್ತರಣೆ ಕುರಿತು

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೯೩ (೯೮೯) ಮಾನ್ಯ ಮುಜರಾಯಿ, ಮೀನುಗಾರಿಕೆ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರು ವಿಮಾನ ನಿಲ್ದಾಣವನ್ನು ವಿಸ್ತರಣೆ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು ;

(ಆ) ಮಂಗಳೂರು ವಿಮಾನ ನಿಲ್ದಾಣ ಪ್ರಸ್ತುತ ಟೇಬಲ್ ಟಾಪ್ ನಿಲ್ದಾಣವಿದ್ದು, ಈ ನಿಲ್ದಾಣಕ್ಕೆ ಪ್ರಪಂಚದ ಎಲ್ಲಾ ರಾಷ್ಟ್ರಗಳಿಗೆ ವಿಮಾನ ಹಾರಾಟ ನಡೆಸಲು ಮತ್ತು ದೊಡ್ಡ ವಿಮಾನ ಹಾರಾಟ ಮಾಡಲು ಸಾಧ್ಯವಿಲ್ಲ ಎಂಬ ಕಾರಣಕ್ಕಾಗಿ ವಿಮಾನ ಯಾನದಲ್ಲಿ ದೂರದ ರಾಷ್ಟ್ರದ ವಿಮಾನಗಳು ಹಾರಾಟ ಮಾಡಲು ಆಗಿಲ್ಲ ಎಂದು ಕಾರಣ ಹೇಳುತ್ತಿರುವುದು ಸರಿಯೇ ; (ವಿವರ ನೀಡುವುದು)

(ಇ) ಮಂಗಳೂರು ವಿಮಾನ ನಿಲ್ದಾಣ ಅಂತರರಾಷ್ಟ್ರೀಯ ವಿಮಾನ ನಿಲ್ದಾಣವಾಗಿದ್ದರೂ, ಕಳೆದ ೨೦ ವರ್ಷಗಳಿಂದ ಗಲ್ಫ್ ರಾಷ್ಟ್ರಗಳನ್ನು ಹೊರತುಪಡಿಸಿ ; ಇತರೆ ರಾಷ್ಟ್ರಗಳಿಗೆ ವಿಮಾನ ಸೌಕರ್ಯ ಒದಗಿಸದೇ ಇರಲು ಕಾರಣವೇನು ; (ವಿವರ ನೀಡುವುದು)

(ಈ) ಪ್ರಸ್ತುತ ವಿಮಾನ ನಿಲ್ದಾಣದ ರನ್‌ವೇಯ ವಿಸ್ತೀರ್ಣ ಎಷ್ಟು ; ದೊಡ್ಡ ವಿಮಾನ ಹಾರಾಟ ನಡೆಸಲು ಬೇಕಾಗಿರುವ ಸೌಕರ್ಯಗಳಾವುವು ; (ವಿವರ ನೀಡುವುದು)

(ಉ) ಮಂಗಳೂರು ವಿಮಾನ ನಿಲ್ದಾಣದಲ್ಲಿ ಮೂಲಭೂತ ಸೌಕರ್ಯ ಒದಗಿಸಿಕೊಡಲು ಖಾಸಗೀಕರಣ ಮಾಡುತ್ತಿರುವುದರಿಂದ

ಪ್ರಯಾಣಿಕರಿಗೆ ಅನ್ಯಾಯವಾಗಿದೆ ಎಂಬ ಕೂಗು ಇದ್ದು, ಇದನ್ನು ಸರಿಪಡಿಸಲು ಕೈಗೊಂಡ ಕ್ರಮವೇನು ? (ವಿವರ ನೀಡುವುದು)

## ಮೂಲಭೂತ ಸೌಕರ್ಯ ಅಭಿವೃದ್ಧಿಗಾಗಿ ಅನುದಾನ ಮಂಜೂರು ಮಾಡುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೯೪ (೯೮೫) ಮಾನ್ಯ ಪೌರಾಡಳಿತ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಿಂದ ದಕ್ಷಿಣ ಕನ್ನಡ ಜಿಲ್ಲೆಯ ವ್ಯಾಪ್ತಿಯಲ್ಲಿ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳಲ್ಲಿ ಮೂಲಭೂತ ಸೌಕರ್ಯ ಅಭಿವೃದ್ಧಿಗಾಗಿ ಯಾವ ಯಾವ ಕಾಮಗಾರಿಗಳನ್ನು ಪ್ರಾರಂಭ ಮಾಡಲಾಗಿದೆ ; (ವಿವರ ನೀಡುವುದು)

(ಆ) ಈ ಕಾಮಗಾರಿಗಳಿಗೆ ಎಷ್ಟು ಅನುದಾನ ಮಂಜೂರಾಗಿದೆ ; ಮಂಜೂರಾದ ಅನುದಾನದಲ್ಲಿ ವೆಚ್ಚ ಮಾಡಿದ ಹಣ ಎಷ್ಟು ; ಬಾಕಿ ಇರುವ ಹಣ ಎಷ್ಟು ; (ವರ್ಷವಾರು ವಿವರ ನೀಡುವುದು)

(ಇ) ಮಂಜೂರಾದ ಕಾಮಗಾರಿಗಳು ಪ್ರಸ್ತುತ ಯಾವ ಹಂತದಲ್ಲಿದೆ ; ಪೂರ್ಣಗೊಂಡ ಕಾಮಗಾರಿಗಳು ಹಾಗೂ ಬಾಕಿ ಇರುವ ಕಾಮಗಾರಿಗಳು ಎಷ್ಟು ;

(ಈ) ಬಾಕಿ ಇರುವ ಕಾಮಗಾರಿಗಳನ್ನು ಸರ್ಕಾರದಿಂದ ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲು ಕ್ರಮಕೈಗೊಳ್ಳಲಾಗುವುದು ? (ವಿವರ ನೀಡುವುದು)

## ರೈತರ ಕಲ್ಯಾಣ ಯೋಜನೆಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೯೫ (೯೮೬) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಸಾಲಿನಲ್ಲಿ ಸರ್ಕಾರ ರೂಪಿಸಿದ ರೈತರ ಕಲ್ಯಾಣ ಯೋಜನೆಗಳನ್ನು ಹಾಗೆಯೇ ಮುಂದುವರಿಸಲಾಗಿದೆಯೇ ; ಅಥವಾ ಯೋಜನೆಗಳಲ್ಲಿ ಯಾವುದಾದರೂ ಬದಲಾವಣೆ ಮಾಡಲಾಗಿದೆಯೇ ; (ದಾಖಲೆಗಳೊಂದಿಗೆ ವಿವರ ನೀಡುವುದು)

(ಆ) ಪ್ರಸ್ತುತ ಹಣಕಾಸು ವರ್ಷದಲ್ಲಿ ರೈತರ ಕಲ್ಯಾಣಕ್ಕಾಗಿ ಮಂಜೂರಾದ ಅನುದಾನ ಎಷ್ಟು ; ಎಷ್ಟು ಅನುದಾನ ಬಳಕೆ ಮಾಡಲಾಗಿದೆ; ಬಾಕಿ ಇರುವ ಅನುದಾನ ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಬರಗಾಲದ ಈ ಸಮಯದಲ್ಲಿ ರೈತರ ಬೆಳೆಗಳು ಸಂಪೂರ್ಣವಾಗಿ ಹಾನಿಯಾಗಿದ್ದು, ಅವುಗಳನ್ನು ಆರ್ಥಿಕವಾಗಿ ಸದೃಢಗೊಳಿಸಲು ಹಾಗೂ ಬರದಿಂದ ನಷ್ಟವನ್ನು ತುಂಬಲು ಸರ್ಕಾರ ಕೈಗೊಂಡಿರುವ ಕ್ರಮವೇನು ?

## ಮೀನುಗಾರಿಕಾ ವೃತ್ತಿಯಲ್ಲಿ ತೊಡಗಿರುವ ಕುಟುಂಬಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೯೬ (೯೮೭) ಮಾನ್ಯ ಮುಜರಾಯಿ, ಮೀನುಗಾರಿಕೆ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಮೀನುಗಾರಿಕಾ ವೃತ್ತಿಯಲ್ಲಿ ತೊಡಗಿರುವ ಕುಟುಂಬಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು) ;

(ಆ) ಕಳೆದ ೩ ವರ್ಷಗಳಿಂದ ಈ ಕುಟುಂಬಗಳಿಗೆ ಮಂಜೂರು ಮಾಡಿರುವ ಮನೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು) ಈ ಘಟಕ ವೆಚ್ಚದಲ್ಲಿ ಮನೆಯನ್ನು ನಿರ್ಮಾಣ ಮಾಡಿಕೊಳ್ಳಲು ಸಾಧ್ಯವಿದೆಯೇ ;

(ಇ) ಪ್ರಸ್ತುತ ಕಟ್ಟಡ ಸಾಮಾಗ್ರಿಗಳ ಬೆಲೆಗಳು ಏರಿಕೆಯಾಗಿರುವುದರಿಂದ ಮನೆಗಳ ಘಟಕ ವೆಚ್ಚವನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಈ) ಒಳನಾಡಿನಲ್ಲಿ ಮೀನುಗಾರಿಕೆ ಕುಟುಂಬದವರಿಗೆ ಸೇರಿರುವ ಪ್ರವರ್ಗ–೧ ರ ಜಾತಿಗೆ ಸೇರಿರುವ ಮೀನುಗಾರರ ವೃತ್ತಿಯನ್ನು ಹೊಂದಿದವರಿಗೆ ಗುತ್ತಿಗೆಯನ್ನು ನೀಡಲಾಗಿದೆಯೇ ; ಗುತ್ತಿಗೆ ನೀಡಿರುವ ಕುಟುಂಬಗಳ ಸಂಖ್ಯೆ ಎಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ಮೀನುಗಾರಿಕೆ ಮಾಡಲು ಅನುಮತಿ ನೀಡುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೯೭ (೯೮೮) ಮಾನ್ಯ ಮುಜರಾಯಿ, ಮೀನುಗಾರಿಕೆ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮೀನುಗಾರಿಕೆ ಇಲಾಖೆಯಿಂದ ಒಟ್ಟು ಎಷ್ಟು ಕೆರೆಗಳನ್ನು ಹರಾಜು ಮಾಡಿ ಮೀನುಗಾರಿಕೆ ಮಾಡಲು ಅನುಮತಿ ನೀಡಲಾಗಿದೆ ; (ವಿವರ ನೀಡುವುದು)

(ಆ) ಈ ಹರಾಜು ಪ್ರಕ್ರಿಯೆಯಲ್ಲಿ ಸರ್ಕಾರಕ್ಕೆ ಪ್ರತಿ ವರ್ಷ ಎಷ್ಟು ಆದಾಯ ಆಗಲಿದೆ ; (ವಿವರ ನೀಡುವುದು)

(ಇ) ಒಳನಾಡಿನ ಪ್ರದೇಶಗಳಲ್ಲಿ ಎಷ್ಟು ಕೆರೆಗಳಲ್ಲಿ ಮೀನುಗಾರಿಕೆ ಮಾಡಲು ಅನುಕೂಲ ಮಾಡಲಾಗಿದೆ ; ಕಳೆದ ೩ ವರ್ಷಗಳಲ್ಲಿ ಮೀನುಗಾರಿಕೆಯಿಂದ ಸರ್ಕಾರಕ್ಕೆ ಬಂದಿರುವ ಆದಾಯ ಎಷ್ಟು ?

## ಕಾಳಗಿ ಪಟ್ಟಣ ಪಂಚಾಯತ್ ಅನುದಾನದ ಬಗ್ಗೆ

**ಶ್ರೀ ಜಗದೇವ್ ಗುತ್ತೇದಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೯೮ (೧೦೦೧) ಮಾನ್ಯ ಪೌರಾಡಳಿತ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಕಲಬುರಗಿ ಜಿಲ್ಲೆಯ ಕಾಳಗಿ ಪಟ್ಟಣ ಪಂಚಾಯಿತಿಗೆ ನಿಗದಿಪಡಿಸಿ ಮಂಜೂರಾಗಿರುವ ಅನುದಾನದ ಮೊತ್ತವೆಷ್ಟು ; (ವಿವರಗಳನ್ನು ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಈ ಅನುದಾನದಲ್ಲಿ ಯಾವ ಯಾವ ಅಭಿವೃದ್ಧಿ, ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ; ಈ ಕಾಮಗಾರಿಗಳಿಗೆ ವೆಚ್ಚವಾಗಿರುವ ಮೊತ್ತವೆಷ್ಟು ; ಪ್ರಸ್ತುತ ಈ ಕಾಮಗಾರಿಗಳು ಯಾವ ಹಂತದಲ್ಲಿದೆ ; (ವಿವರಗಳನ್ನು ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ಕೈಗೆತ್ತಿಕೊಂಡ ಕಾಮಗಾರಿಗಳಲ್ಲಿ ಪೂರ್ಣಗೊಂಡಿರುವ ಮತ್ತು ಅಪೂರ್ಣಗೊಂಡಿರುವ ಕಾಮಗಾರಿಗಳು ಯಾವುವು ? (ವಿವರಗಳನ್ನು ನೀಡುವುದು)

## ಕಾಳಗಿ ತಾಲ್ಲೂಕಿಗೆ APMC ಪ್ರಾರಂಭಿಸುವ ಬಗ್ಗೆ

**ಶ್ರೀ ಜಗದೇವ್ ಗುತ್ತೇದಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೯೯ (೧೦೦೨) ಮಾನ್ಯ ಕೃಷಿ ಸಚಿವರು ಈ ವಿಷಯುಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆ ಕಾಳಗಿ ತಾಲ್ಲೂಕಿಗೆ ಹೊಸ ಎ.ಪಿ.ಎಂ.ಸಿ. ಮಾರುಕಟ್ಟೆಯನ್ನು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ಯಾವಾಗ ಮಂಜೂರು ಮಾಡಲಾಗುವುದು ;

(ಆ) ಹೊಸ ಎ.ಪಿ.ಎಂ.ಸಿ ಮಾರುಕಟ್ಟೆಯನ್ನು ಪ್ರಾರಂಭಿಸಲು ಕಾಳಗಿ ತಾಲ್ಲೂಕಿನ ಯಾವ ಸ್ಥಳದಲ್ಲಿ ಸ್ಥಳ ಗುರುತಿಸಲಾಗಿದೆ ;

(ಇ) ಹೊಸ ಮಾರುಕಟ್ಟೆಯ ಕಟ್ಟಡವನ್ನು ಪ್ರಸಕ್ತ ಸಾಲಿನಲ್ಲಿಯೇ ನಿರ್ಮಿಸಲು ಸರ್ಕಾರ ಕ್ರಮಕೈಗೊಳ್ಳುವುದೇ ; ಹಾಗಿದ್ದಲ್ಲಿ, ಹೊಸ ಮಾರುಕಟ್ಟೆಯು ನಿರ್ಮಾಣಕ್ಕೆ ಸರ್ಕಾರದಿಂದ ಅನುದಾನವನ್ನೇನಾದರೂ ಬಿಡುಗಡೆ ಮಾಡಲಾಗಿದೆಯೇ ?

## ಹೊಸದಾಗಿ ಪ್ರಾರಂಭಿಸುತ್ತಿರುವ ಕ್ರೀಡಾಂಗಣದ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೯೦೦ (೧೦೬೭) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನಲ್ಲಿ ಈಗಾಗಲೇ ಅಂತರಾಷ್ಟ್ರೀಯ ಮಟ್ಟದ ಕ್ರಿಕೆಟ್ ಕ್ರೀಡಾಂಗಣಗಳು ಲಭ್ಯವಿದ್ದರೂ, ಹೊಸ ಮೈದಾನವನ್ನು ಮತ್ತೆ ಬೆಂಗಳೂರಿನಲ್ಲೇ ನಿರ್ಮಿಸಲು ಹೊರಟಿರುವುದು ಪ್ರಾದೇಶಿಕ ಅಸಮಾನತೆಗೆ ಕಾರಣವಾಗುವುದಿಲ್ಲವೆ ;

(ಆ) ಉತ್ತರ ಕರ್ನಾಟಕ ಭಾಗದಲ್ಲಿ ಕ್ರೀಡಾ ಮೂಲ ಸೌಕರ್ಯಗಳನ್ನು ಅಭಿವೃದ್ಧಿಪಡಿಸುವ ಮತ್ತು ಈ ಭಾಗದ ಉದಯೋನ್ಮುಖ ಕ್ರೀಡಾಪಟುಗಳಿಗೆ ಅಂತರಾಷ್ಟ್ರೀಯ ಮಟ್ಟದ ಸೌಲಭ್ಯ ಒದಗಿಸುವ ನಿಟ್ಟಿನಲ್ಲಿ, ಈ ಉದ್ದೇಶಿತ ಹೊಸ ಕ್ರಿಕೆಟ್ ಮೈದಾನವನ್ನು ಉತ್ತರ ಕರ್ನಾಟಕದ ಯಾವುದಾದರೂ ಒಂದು ಪ್ರಮುಖ ನಗರ (ಉದಾಹರಣೆಗೆ ಹುಬ್ಬಳ್ಳಿ-ಧಾರಾವಾಡ, ಬೆಳಗಾವಿ ಅಥವಾ ಕಲಬುರಗಿ) ದಲ್ಲಿ ನಿರ್ಮಿಸಲು ಸರ್ಕಾರ ಕ್ರಮ ತೆಗೆದುಕೊಳ್ಳುವುದೇ ;

(ಇ) ಬೆಂಗಳೂರಿನಲ್ಲಿ ಭೂಮಿಯ ಬೆಲೆ ಗಗನಕ್ಕೇರಿರುವುದರಿಂದ ಮತ್ತು ಅತಿಯಾದ ಸಂಚಾರ ದಟ್ಟಣೆ ಇರುವುದರಿಂದ, ಅದೇ ಯೋಜನೆಯನ್ನು ಉತ್ತರ ಕರ್ನಾಟಕ ಭಾಗಕ್ಕೆ ಸ್ಥಳಾಂತರಿಸಿದರೆ ಕಡಿಮೆ ವೆಚ್ಚದಲ್ಲಿ ಹೆಚ್ಚಿನ ಭೂಮಿ ಲಭ್ಯವಾಗಿ ಸರ್ಕಾರದ ಬೊಕ್ಕಸಕ್ಕೆ ಕೋಟ್ಯಾಂತರ ರೂಪಾಯಿ ಉಳಿತಾಯವಾಗುತ್ತದೆ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರದ ಕ್ರಮವನ್ನು ವಿವರವಾಗಿ ವಿವರಿಸುವುದು ;

(ಈ) ಕೇವಲ ರಾಜಧಾನಿ ಬೆಂಗಳೂರನ್ನು ಮಾತ್ರ ಕೇಂದ್ರೀಕರಿಸದೆ, ಇಂತಹ ಬೃಹತ್ ಯೋಜನೆಗಳನ್ನು ಉತ್ತರ ಕರ್ನಾಟಕಕ್ಕೆ ತರುವುದರ ಮೂಲಕ ಆ ಭಾಗದ ಪ್ರವಾಸೋದ್ಯಮ ಮತ್ತು ಆರ್ಥಿಕ ಪ್ರಗತಿಗೆ ವೇಗ ನೀಡಲು ಸರ್ಕಾರಕ್ಕಿರುವ ಅಡೆತಡೆಗಳೇನು ? (ಈ ಕುರಿತು ಸಂಪೂರ್ಣ ಮಾಹಿತಿ ನೀಡುವುದು)

## DCC ಬ್ಯಾಂಕ್ ಸಾಲ ಸೌಲಭ್ಯಗಳ ಬಗ್ಗೆ

**ಶ್ರೀ ಜಗದೇವ್ ಗುತ್ತೇದಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೦೧ (೧೦೦೦) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಿಂದ ಕಲಬುರಗಿ ಜಿಲ್ಲೆಯ ಡಿ.ಸಿ.ಸಿ ಬ್ಯಾಂಕ್‌ಗಳಿಂದ ಕಾಳಗಿ ತಾಲ್ಲೂಕಿನ ಎಷ್ಟು ಮಂದಿ ರೈತರಿಗೆ ಅಭಿವೃದ್ಧಿ ಸಾಲ ನೀಡಲಾಗಿದೆ ; (ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ಪ್ರತಿ ರೈತರಿಗೆ ನೀಡಿರುವ ಸಾಲದ ಮೊತ್ತವೆಷ್ಟು ; (ವಿವರ ನೀಡುವುದು)

(ಇ) ಅಭಿವೃದ್ಧಿ ಸಾಲ ಪಡೆದ ರೈತರಲ್ಲಿ ಎಷ್ಟು ಮಂದಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದವರಾಗಿರುತ್ತಾರೆ ? (ವಿವರ ನೀಡುವುದು)

## ಪಶು ಅಸ್ಪತ್ರೆಗಳ ಬಗ್ಗೆ

**ಶ್ರೀ ಜಗದೇವ್ ಗುತ್ತೇದಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೦೨ (೧೦೦೪) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾಳಗಿ ತಾಲ್ಲೂಕಿನಲ್ಲಿ ಪಶುಸಂಗೋಪನಾ ಇಲಾಖೆಯಲ್ಲಿ ಪಶು ಆಸ್ಪತ್ರೆಗಳಿಗೆ ಸ್ವಂತ ಕಟ್ಟಡ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸ್ವಂತ ಕಟ್ಟಡಗಳಿಲ್ಲದಿರುವ ಪಶು ಆಸ್ಪತ್ರೆಗಳು ಯಾವುವು ; ಈ ಕೊರತೆ ನೀಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಕೃಷಿ ಭಾಗ್ಯ ಯೋಜನೆಯಡಿ ಕೃಷಿ ಹೊಂಡಗಳ ನಿರ್ಮಾಣದ ಕುರಿತು

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೦೩ (೧೦೭೭) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಕೃಷಿ ಭಾಗ್ಯ ಯೋಜನೆಯಡಿ ಕೃಷಿ ಹೊಂಡಗಳ ನಿರ್ಮಾಣಕ್ಕೆ ರೈತರಿಂದ ಭಾರಿ ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಯೋಜನೆಯನ್ನು ಸಂಪೂರ್ಣವಾಗಿ ಅನುಷ್ಠಾನಗೊಳಿಸಲಾಗಿದೆಯೇ ; (ವಿವರ ನೀಡುವುದು)

(ಇ) ೨೦೨೪-೨೫ ಮತ್ತು ೨೦೨೬-೨೭ನೇ ಸಾಲಿನಲ್ಲಿ ಈ ಯೋಜನೆಯಡಿ ಎಷ್ಟು ಜನ ರೈತ ಫಲಾನುಭವಿಗಳನ್ನು ಗುರುತಿಸಲಾಗಿ ಅವರಿಗೆ ನೀಡಿರುವ ಸಹಾಯಧನದ ಮೊತ್ತವೆಷ್ಟು ; (ವಿವರ ನೀಡುವುದು)

(ಈ) ಯಾವ ಯಾವ ವರ್ಗದ ರೈತರಿಗೆ ಯಾವ ಮಾನದಂಡವನ್ನು ಅನುಸರಿಸಿ ಸಹಾಯಧನ ನೀಡಲಾಗುತ್ತಿದೆ ; (ವಿವರ ನೀಡುವುದು)

(ಉ) ಕೃಷಿ ಭಾಗ್ಯ ಅನುದಾನದ ಜೊತೆಗೆ ರಾಜ್ಯ ವಿಪತ್ತು ತಗ್ಗಿಸುವ ನಿಧಿಯ (ಎಸ್.ಡಿ.ಎಂ.ಎಫ್) ಅನುದಾನವನ್ನು ಕೃಷಿ ಇಲಾಖೆಯ ಯೋಜನೆಗೆ ಸೇರಿಸಲಾಗಿದೆಯೇ ; ಹಾಗಿದ್ದಲ್ಲಿ, ಯಾವ ಯಾವ ಮಾದರಿಯ ಕೃಷಿ ಹೊಂಡಗಳಿಗೆ ಸಹಾಯಧನ ಒದಗಿಸಲಾಗುವುದು ; (ಸಂಪೂರ್ಣ ವಿವರ ನೀಡುವುದು)

(ಊ) ಹಾಗಿದ್ದಲ್ಲಿ, ಈ ಸಹಾಯಧನ ಪ್ಯಾಕೇಜ್‌ನಲ್ಲಿ ಫೆನ್ಸಿಂಗ್ ಸೌಲಭ್ಯವನ್ನು ಕಲ್ಪಿಸಲಾಗಿದೆಯೇ, ಇದಕ್ಕಾಗಿ ೨೦೨೬-೨೭ನೇ ಸಾಲಿನಲ್ಲಿ ಒದಗಿಸಿರುವ ಅನುದಾನವೆಷ್ಟು ? (ಜಿಲ್ಲಾವಾರು ವಿವರವಾದ ಮಾಹಿತಿ ಒದಗಿಸುವುದು)

## ವಿಜಯಪುರ ಮತ್ತು ಬೆಳಗಾವಿ ಜಿಲ್ಲೆಗಳ ನಗರ ಪ್ರದೇಶಗಳಲ್ಲಿರುವ ಸ್ಲಂಗಳ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೦೪ (೧೦೩೫) ಮಾನ್ಯ ಪೌರಾಡಳಿತ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ ಮತ್ತು ಬೆಳಗಾವಿ ಜಿಲ್ಲೆಗಳ ನಗರ ಪ್ರದೇಶಗಳಲ್ಲಿರುವ ಅಧಿಕೃತ ಸ್ಲಂಗಳೆಷ್ಟು ; (ನಗರವಾರು ಪಟ್ಟಿ ನೀಡುವುದು)

(ಆ) ಸದರಿ ಸ್ಲಂಗಳ ಅಭಿವೃದ್ಧಿಗೆ ಸರ್ಕಾರ (ಕೊಳಚೆ ನಿರ್ಮೂಲನಾ ಮಂಡಳಿ) ಯಾವ ಯಾವ ಯೋಜನೆಗಳನ್ನು ಅನುಷ್ಠಾನ ಮಾಡುತ್ತಿದೆ ; (ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ವಿಜಯಪುರ ಮತ್ತು ಬೆಳಗಾವಿ ಜಿಲ್ಲೆಗಳ ನಗರ ಪ್ರದೇಶಗಳಲ್ಲಿರುವ ಸ್ಲಂಗಳ ಅಭಿವೃದ್ಧಿಗೆ ಸರ್ಕಾರ ಕೈಗೊಂಡ ಕಾಮಗಾರಿಗಳು ಯಾವುವು ; ಸದರಿ ಕಾಮಗಾರಿಗಳನ್ನು ಯಾವ ರೀತಿ ಅನುಷ್ಠಾನ ಮಾಡಲಾಗಿದೆ ; (ವಿವರ ನೀಡುವುದು)

(ಈ) ಸದರಿ ಸ್ಲಂಗಳಲ್ಲಿ ಕೈಗೊಂಡ ಕಾಮಗಾರಿಗಳು ಯಾವ ಹಂತದಲ್ಲಿವೇ ; ಸದರಿ ಕಾಮಗಾರಿ ನಿರ್ವಹಿಸಿರುವ ಕುರಿತು ಮೂರನೆ ತಂಡದಿಂದ ತಪಾಸಣೆ ಮಾಡಲಾಗಿದೆಯೇ ? (ಫೋಟೊ ಸಹಿತ ವಿವರ ನೀಡುವುದು)

## ರಾಜ್ಯದಲ್ಲಿ ಕೃಷಿ ತಾಂತ್ರಿಕ ನಿರ್ದೇಶನಾಲಯ ಪ್ರಾರಂಭಿಸುವ ಬೇಡಿಕೆ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೦೫ (೧೦೩೬) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕೃಷಿ ತಾಂತ್ರಿಕ ನಿರ್ದೇಶನಾಲಯ ಪ್ರಾರಂಭಿಸಲು ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೃಷಿ ತಾಂತ್ರಿಕ ನಿರ್ದೇಶನಾಲಯ ಪ್ರಾರಂಭಿಸಲು ಸರ್ಕಾರದ ಹಂತದಲ್ಲಿ ಪ್ರಸ್ತಾವನೆ ಇದೆಯೇ ; ಪ್ರಸ್ತುತ ಸದರಿ ಪ್ರಸ್ತಾವನೆ ಯಾವ ಹಂತದಲ್ಲಿ ಇದೆ ;

(ಆ) ಕೃಷಿ ಇಲಾಖೆಯಲ್ಲಿ ಲಭ್ಯವಿರುವ ವಿವಿಧ ವೃಂದದ ಹುದ್ದೆಗಳಿಗೆ ಬಿ.ಟೆಕ್ (ಕೃಷಿ) ಪದವಿ ಪಡೆದ ಅಭ್ಯರ್ಥಿಗಳನ್ನು ಪರಿಗಣಿಸಲು ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಎಷ್ಟು ಪ್ರಮಾಣದಲ್ಲಿ ಬಿ.ಟೆಕ್(ಕೃಷಿ) ಪದವೀಧರರನ್ನು ಸದರಿ ಹುದ್ದೆಗಳಿಗೆ ಪರಿಗಣಿಸಲಾಗುವುದು ;

(ಇ) ರಾಜ್ಯದಲ್ಲಿ ಕೃಷಿ ತಾಂತ್ರಿಕ ನಿರ್ದೇಶನಾಲಯ ಪ್ರಾರಂಭಿಸಿ ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ತಾಂತ್ರಿಕ ಅಧಿಕಾರಿ ಹುದ್ದೆ ಸೃಜಿಸಲು ಕೇಂದ್ರ ಸರ್ಕಾರ ನಿರ್ದೇಶನ ನೀಡಿದೆಯೇ ; ಹಾಗಿದ್ದಲ್ಲಿ, ಸದರಿ ಪ್ರಸ್ತಾವನೆ ಸರ್ಕಾರದ ಮುಂದೆ ಯಾವ ಯಾವ ಹಂತದಲ್ಲಿ ಇದೆ ?

## ರೈತರ ಆತ್ಮಹತ್ಯೆಗೆ ಪರಿಹಾರ ಒದಗಿಸುವ ಕುರಿತು

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೦೬ (೧೦೫೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೩ ವರ್ಷದಲ್ಲಿ ಎಷ್ಟು ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ; (ವರ್ಷವಾರು, ಜಿಲ್ಲಾವಾರು ವಿವರ ನೀಡುವುದು)

(ಆ) ಸದರಿ ಆತ್ಮಹತ್ಯೆ ಪ್ರಕರಣಗಳಲ್ಲಿ ಬೆಳೆ ನಷ್ಟ, ಕೃಷಿ ಸಾಲ, ಹವಾಮಾನ ವೈಪರೀತ್ಯ, ಬೆಳೆ ಬೆಲೆ ಕುಸಿತ ಹಾಗೂ ಇತರೆ ಕಾರಣಗಳಿಂದ ಸಂಭವಿಸಿರುವ ಪ್ರಕರಣಗಳ ಸಂಖ್ಯೆ ಎಷ್ಟಿದೆ ; (ಕಾರಣವಾರು ವಿವರಗಳನ್ನು ನೀಡುವುದು)

(ಇ) ರೈತರ ಆತ್ಮಹತ್ಯೆ ತಡೆಗಟ್ಟಲು ಸರ್ಕಾರ ಇದುವರೆಗೆ ಕೈಗೊಂಡಿರುವ ಕ್ರಮಗಳೇನು ಹಾಗೂ ಅವುಗಳಿಂದ ಸಾಧಿಸಿರುವ ಫಲಿತಾಂಶಗಳೇನು ;

(ಈ) ರೈತರ ಆತ್ಮಹತ್ಯೆ ಪ್ರಕರಣಗಳಲ್ಲಿ ಮೃತ ರೈತ ಕುಟುಂಬಗಳಿಗೆ ಪ್ರಸ್ತುತ ನೀಡುತ್ತಿರುವ ಪರಿಹಾರ ಧನ ಎಷ್ಟು ; ಕಳೆದ ಮೂರು ವರ್ಷಗಳಲ್ಲಿ ಎಷ್ಟು ಕುಟುಂಬಗಳಿಗೆ ಪರಿಹಾರ ಮಂಜೂರಾಗಿದ್ದು, ಎಷ್ಟು ಕುಟುಂಬಗಳಿಗೆ ಪರಿಹಾರ ನೀಡುವುದು ಬಾಕಿಯಿದೆ ; (ಜಿಲ್ಲಾವಾರು ವಿವರ ಒದಗಿಸುವುದು)

(ಉ) ರೈತರ ಆತ್ಮಹತ್ಯೆ ಪ್ರಕರಣಗಳನ್ನು ಪರಿಶೀಲಿಸುವ ಸಂದರ್ಭದಲ್ಲಿ ಅಗತ್ಯ ದಾಖಲೆಗಳ ಕೊರತೆ, ಸಾಲದ ದಾಖಲೆಗಳ ಲಭ್ಯತೆ ಇಲ್ಲದಿರುವುದು ಅಥವಾ ಇತರೆ ಕಾರಣಗಳಿಂದ ಪರಿಹಾರ ನಿರಾಕರಣೆಯಾಗುತ್ತಿರುವ ಪ್ರಕರಣಗಳು ಎಷ್ಟಿವೆ ; ಇಂತಹ ಕುಟುಂಬಗಳಿಗೆ ಪರಿಹಾರ ದೊರೆಯುವಂತೆ ನಿಯಮಗಳನ್ನು ಸರಳೀಕರಿಸುವ ಪ್ರಸ್ತಾವ ಸರ್ಕಾರದ ಮುಂದಿದೆಯೇ ;

(ಊ) ರೈತರ ಆತ್ಮಹತ್ಯೆ ತಡೆಗಟ್ಟುವ ಉದ್ದೇಶದಿಂದ ಪ್ರತಿ ಜಿಲ್ಲೆಯಲ್ಲಿ ರೈತ ಸಂಕಷ್ಟ ನಿವಾರಣಾ ಮತ್ತು ಮಾನಸಿಕ ಆರೋಗ್ಯ ಸಹಾಯ ಕೇಂದ್ರ ಸ್ಥಾಪಿಸಿ ಸಾಲದ ಸಮಸ್ಯೆ, ಬೆಳೆ ವಿಮೆ, ಕಾನೂನು ಸಲಹೆ ಹಾಗೂ ಮಾನಸಿಕ ಸಮಾಲೋಚನೆಯನ್ನು ಒಂದೇ ಸೂರಿನಡಿ ಒದಗಿಸುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸಂಗ್ರಹವಾಗುವ ಅಧಿಭಾರ ಶುಲ್ಕ ಕುರಿತು

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೦೭ (೧೦೫೩) ಮಾನ್ಯ ಪೌರಾಡಳಿತ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಪ ನೋಂದಣಿ ಕಛೇರಿಯಲ್ಲಿ ನೋಂದಾಯಿಸುವ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯ ಆಸ್ತಿಯಿಂದ ಸಂಗ್ರಹವಾಗುವ ಅಧಿಭಾರ ಶುಲ್ಕ (surcharge cess) ನಗರ ಸ್ಥಳೀಯ ಸಂಸ್ಥೆಗಳ ಖಾತೆಗಳಿಗೆ ಪ್ರತಿವರ್ಷ ಜಮೆ ಆಗುತ್ತಿದೆಯೇ ; ಆಗುತ್ತಿದ್ದಲ್ಲಿ, ಯಾವ ಖಾತೆಗೆ ಜಮೆ ಮಾಡಲಾಗುತ್ತಿದೆ ; ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ವ್ಯಾಪ್ತಿಯ ನಗರ ಸ್ಥಳೀಯ ಸಂಸ್ಥೆಗಳಿಗೆ ಕಳೆದ ೩ ವರ್ಷಗಳಿಂದ ಅಧಿಭಾರ ಶುಲ್ಕ ಜಮೆಯಾಗಿರುವ ವಿವರ ನೀಡುವುದು ;

(ಆ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯ ಯಾವ ನಗರ ಸ್ಥಳೀಯ ಸಂಸ್ಥೆಗಳಿಗೆ ಎಷ್ಟೆಷ್ಟು ಅಧಿಭಾರ ಶುಲ್ಕ ಜಮೆಯಾಗಲು ಬಾಕಿ ಇದೆ ; (ವಿವರ ನೀಡುವುದು) ಸಂಗ್ರಹವಾಗಿರುವ ಅಧಿಭಾರ ಶುಲ್ಕವನ್ನು ನಗರ ಸ್ಥಳೀಯ ಸಂಸ್ಥೆಗಳಿಗೆ ಜಮೆ ಮಾಡುವವರು ಯಾರು ;

(ಇ) ಗ್ರಾಮ ಪಂಚಾಯಿತಿಯಿಂದ ಮೇಲ್ದರ್ಜೆಗೇರಿದ ಪಟ್ಟಣ ಪಂಚಾಯಿತಿಯ ಮುಖ್ಯಾಧಿಕಾರಿ ಶ್ರೇಣಿ ೨ ವೃಂದದ ವೇತನ ತಾರತಮ್ಯ ನಿವಾರಣೆಗೆ ಕೈಗೊಂಡ ಕ್ರಮಗಳೇನು ;

(ಈ) ನಗರ ಸ್ಥಳೀಯ ಸಂಸ್ಥೆಗಳಲ್ಲಿ ಖಾಯಂ ಪೌರಕಾರ್ಮಿಕರಿಗೆ ಭಾಗಶಃ ವೇತನವನ್ನು ನಗರ ಸ್ಥಳೀಯ ಸಂಸ್ಥೆಗಳಿಂದಲೇ ಪಾವತಿ ಮಾಡುವಂತೆ ಆದೇಶ ಮಾಡಿರುವ ಉದ್ದೇಶ ಮತ್ತು ಕಾರಣವೇನು ;

ಇದರಿಂದಾಗಿ ಹೊರಗುತ್ತಿಗೆ ಸಿಬ್ಬಂದಿಗಳನ್ನು ಹೊರತುಪಡಿಸಿ ಖಾಯಂ ಪೌರಕಾರ್ಮಿಕರಿಗೆ ಕೂಡಾ ನಗರ ಸ್ಥಳೀಯ ಸಂಸ್ಥೆಗಳ ಸ್ವಂತ ನಿಧಿಯು ವೇತನಕ್ಕೆ ವಿನಿಯೋಗ ಆಗಿ ಅಭಿವೃದ್ಧಿ ಕಾರ್ಯಗಳು ಕುಂಠಿತ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ದಕ್ಷಿಣ ಕನ್ನಡ ಜಿಲ್ಲಾ ಸಹಕಾರಿ ಸಕ್ಕರೆ ಕಾರ್ಖಾನೆ ಬ್ರಹ್ಮಾವರದಲ್ಲಿ ಕಾರ್ಯನಿರ್ವಹಿಸಿದ ಅಧಿಕಾರಿಯ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೦೮ (೧೦೬೨) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲಾ ಸಹಕಾರಿ ಸಕ್ಕರೆ ಕಾರ್ಖಾನೆ ಬ್ರಹ್ಮಾವರದಲ್ಲಿ ದಿನಾಂಕ:೦೪.೦೧.೨೦೨೦ ರಿಂದ ಇಲ್ಲಿಂಯುವರೆಗೆ ಕಾಂರ್ಯನಿರ್ವಹಿಸುತ್ತಿದ್ದ ಹಾಗೂ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ವ್ಯವಸ್ಥಾಪಕ ನಿರ್ದೇಶಕರು ಯಾರು ಮತ್ತು ಅವರು ಕಾರ್ಯನಿರ್ವಹಿಸಿದ ಅವಧಿಯ ವಿವರವನ್ನು ಒದಗಿಸುವುದು ;

(ಆ) ಸದರಿ ಅಧಿಕಾರಿಗಳು ರಾಜ್ಯದ ಯಾವ ಯಾವ ಸ್ಥಳಗಳಲ್ಲಿ ಯಾವ ಯಾವ ಹುದ್ದೆಯಲ್ಲಿ ಕಾರ್ಯನಿರ್ವಹಿಸಿದ್ದಾರೆ ಎನ್ನುವ ವಿವರವನ್ನು ಒದಗಿಸುವುದು ;

(ಇ) ಮೇಲೆ ಹೇಳಿದ ಸಂಬಂಧಿತ ವ್ಯವಸ್ಥಾಪಕ ನಿರ್ದೇಶಕರ ಮೇಲೆ ವಿವಿಧ ಹುದ್ದೆಯಲ್ಲಿ ವಿವಿಧ ಸಂದರ್ಭದಲ್ಲಿ ನಡೆದ ಇಲಾಖಾ ತನಿಖೆ ಹಾಗೂ ಅದರ ಮೇಲೆ ಕೈಗೊಂಡ ಕ್ರಮದ ಸಂಪೂರ್ಣ ವಿವರವನ್ನು ಒದಗಿಸುವುದು ?

## ಪಶು ಚಿಕಿತ್ಸಾಲಯಗಳ ಕುರಿತು

**ಶ್ರೀ ಮಧು ಜಿ.ಮಾದೇಗೌಡ (ಪದವೀಧರರ ಕ್ಷೇತ್ರ) :–**

೯೦೯ (೯೭೦) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯಲ್ಲಿರುವ ಪಶು ವೈದ್ಯಕೀಯ ಸಂಸ್ಥೆಗಳ ಸಂಖ್ಯೆ ಎಷ್ಟು ; ಇವುಗಳಲ್ಲಿ ಪಶು ಆಸ್ಪತ್ರೆ, ಪಶು ಚಿಕಿತ್ಸಾಲಯ, ಪ್ರಾಥಮಿಕ ಪಶು ಚಿಕಿತ್ಸಾಲಯ, ಪಾಲಿಕ್ಲಿನಿಕ್ ಮತ್ತು ಸಂಚಾರಿ ಚಿಕಿತ್ಸಾಲಯಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ಪೈಕಿ ಸ್ವಂತ ಕಟ್ಟಡ ಹೊಂದಿರುವ ಹಾಗೂ ಬಾಡಿಗೆ ಅಥವಾ ಇತರೆ ಕಟ್ಟಡಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಪಶು ವೈದ್ಯಕೀಯ ಸಂಸ್ಥೆಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಮಂಡ್ಯ ಜಿಲ್ಲೆಯಲ್ಲಿ ಹೊಸದಾಗಿ ನಿರ್ಮಾಣ ಮಾಡುತ್ತಿರುವ ಪಶು ವೈದ್ಯಕೀಯ ಸಂಸ್ಥೆಗಳ ಸಂಖ್ಯೆ ಎಷ್ಟು ; ಎಲ್ಲೆಲ್ಲಿ ನಿರ್ಮಾಣ ಮಾಡಲಾಗುತ್ತದೆ ; ಒದಗಿಸಿರುವ ಅನುದಾನದೊಂದಿಗೆ ತಾಲ್ಲೂಕುವಾರು ಮಾಹಿತಿ ನೀಡುವುದು ;

(ಈ) ಮಂಡ್ಯ ಜಿಲ್ಲೆಗೆ ಮಂಜೂರಾದ, ಭರ್ತಿಯಾದ ಮತ್ತು ಖಾಲಿ ಇರುವ ಪಶು ವೈದ್ಯರ ಸಂಖ್ಯೆ ಎಷ್ಟು ; (ಶೇಕಡವಾರು ಪ್ರಮಾಣದೊಂದಿಗೆ ಮಾಹಿತಿ ನೀಡುವುದು)

(ಉ) ನಿಯಮಗಳ ಅನ್ವಯ ಎಷ್ಟು ಸಂಖ್ಯೆಯ ಜಾನುವಾರುಗಳಿಗೆ ಒಬ್ಬರು ಪಶು ವೈದ್ಯರು ಇರಬೇಕು ; ಈ ಸಂಖ್ಯೆಗೆ ಅನುಸಾರವಾಗಿ ವೈದ್ಯರ ಲಭ್ಯತೆ ಇದೆಯೇ ; (ವಿವರ ನೀಡುವುದು)

(ಊ) ಕಳೆದ ಮೂರು ವರ್ಷಗಳಲ್ಲಿ ಸಂಚಾರಿ ಚಿಕಿತ್ಸಾಲಯಗಳ ಮೂಲಕ ಚಿಕಿತ್ಸೆ ನೀಡಲಾದ ಜಾನುವಾರುಗಳ ಸಂಖ್ಯೆ ಎಷ್ಟು; ಉಚಿತ ಸಹಾಯವಾಣಿ ಆರಂಭಿಸಲಾಗಿದೆಯೇ ; ಇದ್ದಲ್ಲಿ, ಸ್ವೀಕೃತವಾದ ಕರೆಗಳ ಸಂಖ್ಯೆ ಮತ್ತು ಸಹಾಯವಾಣಿ ಸಂಖ್ಯೆ ನೀಡುವುದು ;

(ಋ) ಇತ್ತೀಚಿನ ಜಾನುವಾರು ಗಣತಿ ಪ್ರಕಾರ ಮಂಡ್ಯ ಜಿಲ್ಲೆಯಲ್ಲಿರುವ ಜಾನುವಾರುಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು)

## ಸಮಸ್ಯಾತ್ಮಕ ಮಣ್ಣಿನ ಸುಧಾರಣೆ ಕುರಿತು

**ಶ್ರೀ ಮಧು ಜಿ.ಮಾದೇಗೌಡ (ಪದವೀಧರರ ಕ್ಷೇತ್ರ) :–**

೯೧೦ (೯೭೧) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯ ಕಾವೇರಿ ಅಚ್ಚುಕಟ್ಟು ಪ್ರದೇಶದಲ್ಲಿರುವ ಸಮಸ್ಯಾತ್ಮಕ ಮಣ್ಣು ಪ್ರದೇಶದ ವಿಸ್ತೀರ್ಣ ಎಷ್ಟು ; ಕಳೆದ ಮೂರು ವರ್ಷಗಳಲ್ಲಿ ತಗ್ಗಿಸಲಾದ ಸಮಸ್ಯಾತ್ಮಕ ಮಣ್ಣು ಪ್ರದೇಶದ ವಿಸ್ತೀರ್ಣ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸಮಸ್ಯಾತ್ಮಕ ಮಣ್ಣಿನ ವಿಧಗಳು ಯಾವುವು ; ಲವಣ, ಕ್ಷಾರ, ಆಮ್ಲ – ಇಲ್ಲಿನ ಮಣ್ಣಿನಲ್ಲಿ ಯಾವುದರ ಪ್ರಮಾಣ ಹೆಚ್ಚಿದೆ; ಇವುಗಳ ಕೊರತೆಯಿಂದ ಮಣ್ಣಿನ ಮೇಲೆ ಆಗುವ ಅಡ್ಡ ಪರಿಣಾಮಗಳೇನು ;

(ಇ) ಸಮಸ್ಯಾತ್ಮಕ ಮಣ್ಣಿನ ಸುಧಾರಣೆಗಾಗಿ ಕೈಗೊಂಡಿರುವ ಕ್ರಮಗಳೇನು ; (ವಿವರವಾದ ಮಾಹಿತಿ ನೀಡುವುದು)

(ಈ) ಭೂಮಿ ಫಲವತ್ತತೆ, ಇಳುವರಿ ಹೆಚ್ಚಿಸುವ ದೃಷ್ಟಿಯಿಂದ ಬೆಳೆ ಬದಲಾವಣೆ (crop rotation) ಕುರಿತು ರೈತರಿಗೆ ಮಾಹಿತಿ ನೀಡಲಾಗುತ್ತಿದೆಯೇ ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ಕಳೆದ ಮೂರು ವರ್ಷಗಳಲ್ಲಿ ಎಷ್ಟು ಮಣ್ಣಿನ ಮಾದರಿಯಗಳನ್ನು ಸಂಗ್ರಹಿಸಿ ಪರೀಕ್ಷಿಸಲಾಗಿದೆ ; ಮಣ್ಣು ಪರೀಕ್ಷೆ ಮಾಡಿಸುವುದಕ್ಕೆ ರೈತರ ಪ್ರತಿಕ್ರಿಯೆ ಹೇಗಿದೆ ; ಜನರಲ್ಲಿ ಈ ಬಗ್ಗೆ ಜಾಗೃತಿ ಮೂಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## 'ರಾಗಿ' ಪೂರೈಸಿರುವ ರೈತರಿಗೆ ಹಣ ಪಾವತಿಸುವ ಕುರಿತು

**ಶ್ರೀ ಮಧು ಜಿ.ಮಾದೇಗೌಡ (ಪದವೀಧರರ ಕ್ಷೇತ್ರ) :–**

೯೧೧ (೯೭೨) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಧಾನ್ಯ ಖರೀದಿ ಕೇಂದ್ರಗಳಿಗೆ 'ರಾಗಿ' ಪೂರೈಸಿರುವ ರೈತರಿಗೆ ಇದುವರೆಗೂ ಹಣ ಪಾವತಿ ಆಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ರಾಜ್ಯದಲ್ಲಿ ರೈತರಿಗೆ ಪಾವತಿಸಲು ಬಾಕಿ ಇರುವ ಒಟ್ಟು ಮೊತ್ತ ಎಷ್ಟು ; (ಜಿಲ್ಲೆ, ತೆರೆಯಲಾದ ಖರೀದಿ ಕೇಂದ್ರಗಳ ಸಂಖ್ಯೆ, ಖರೀದಿ ಕೇಂದ್ರಗಳಿಗೆ ರಾಗಿ ಪೂರೈಸಿದ ರೈತರ ಸಂಖ್ಯೆ, ಪೂರೈಕೆಯಾದ ರಾಗಿ ಪ್ರಮಾಣ ಹಾಗೂ ಪಾವತಿಸಲು ಬಾಕಿ ಇರುವ ಮೊತ್ತ ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಧಾನ್ಯಗಳ ಖರೀದಿ ಸಂಬಂಧ ನೋಂದಣೆ ಮತ್ತು ಖರೀದಿ ಪ್ರಕ್ರಿಯೆ ಎಂದಿನಿಂದ ಆರಂಭಿಸಲಾಯಿತು ; ಪ್ರತಿ ಕ್ವಿಂಟಾಲ್‌ಗೆ ರಾಗಿಗೆ ನಿಗದಿಪಡಿಸಲಾಗಿದ್ದ ಬೆಂಬಲ ಬೆಲೆ ಎಷ್ಟು ; ನಿಯಮದ ಪ್ರಕಾರ ಎಷ್ಟು ದಿನದೊಳಗೆ ಹಣ ಜಮೆ ಮಾಡಬೇಕಿತ್ತು ; (ವಿವರ ನೀಡುವುದು)

(ಈ) ಈವರೆವಿಗೂ ಎಷ್ಟು ಸಂಖ್ಯೆಯ ರೈತರಿಗೆ ಎಷ್ಟು ಹಣ ಪಾವತಿಸಲಾಗಿದೆ ; (ಧಾನ್ಯವಾರು ವಿವರ ನೀಡುವುದು)

(ಉ) ಬಾಕಿ ಇರುವ ಮೊತ್ತವನ್ನು ಯಾವ ಕಾಲಮಿತಿಯೊಳಗೆ ಪಾವತಿಸಲು ಕ್ರಮವಹಿಸಲಾಗುವುದು ? (ಸಂಪೂರ್ಣ ವಿವರ ನೀಡುವುದು)

## ಮೌಲಾನ ಆಜಾದ್ ಶಾಲೆಗಳ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೯೧೨ (೧೦೨೦) ಮಾನ್ಯ ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮಂಜೂರಾದ ಒಟ್ಟು ಮೌಲಾನ ಆಜಾದ್ ಆಂಗ್ಲ ಮಾಧ್ಯಮ ಶಾಲೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಮಂಜೂರಾದ ಶಾಲೆಗಳಿಗೆ ಮಂಜೂರಾದ ಹುದ್ದೆಗಳ ವಿವರ ನೀಡುವುದು ; ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ;

(ಇ) ಸದರಿ ಶಾಲೆಗಳಲ್ಲಿ ಕಡಿಮೆ ದಾಖಲಾತಿ ಇರುವ ಶಾಲೆಗಳನ್ನು ಮುಚ್ಚಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳ ವಿವರ ನೀಡುವುದು ;

(ಈ) ರಾಜ್ಯದಲ್ಲಿ ಎಷ್ಟು ಮೌಲಾನ ಆಜಾದ್ ಶಾಲೆಗಳನ್ನು ಮುಚ್ಚಲಾಗಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ಕಳಪೆ ಗುಣಮಟ್ಟದ ಪಶು ಆಹಾರ ಪೂರೈಕೆ ಕುರಿತು

**ಶ್ರೀ ಮಧು ಜಿ.ಮಾದೇಗೌಡ (ಪದವೀಧರರ ಕ್ಷೇತ್ರ) :–**

೯೧೩ (೯೭೪) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಾರ್ಷಿಕವಾಗಿ ಬೇಡಿಕೆ ಇರುವ ಪಶು ಆಹಾರದ ಪ್ರಮಾಣ ಎಷ್ಟು ; ಸಹಕಾರ ಮತ್ತು ಖಾಸಗಿ ವಲಯದ ಎಷ್ಟು ಸಂಸ್ಥೆಗಳು, ಎಷ್ಟು ಪ್ರಮಾಣದಲ್ಲಿ ಮಾಸಿಕವಾಗಿ ಮತ್ತು ವಾರ್ಷಿಕವಾಗಿ ಪಶು ಆಹಾರವನ್ನು ಉತ್ಪಾದಿಸುತ್ತಿವೆ ;

(ಆ) ಇತ್ತೀಚಿನ ದಿನಗಳಲ್ಲಿ ಕಳಪೆ ಗುಣಮಟ್ಟದ ಕಚ್ಚಾ ವಸ್ತುಗಳನ್ನು ಬಳಸಿಕೊಂಡು ಪಶು ಆಹಾರವನ್ನು ತಯಾರಿಸಲಾಗುತ್ತಿದೆ ಎಂಬ ಬಗ್ಗೆ ಹೈನುಗಾರರಿಂದ ವ್ಯಾಪಕ ದೂರುಗಳು ಕೇಳಿಬರುತ್ತಿದ್ದು, ನಿಯಂತ್ರಣಕ್ಕೆ ಸರ್ಕಾರದ ಕ್ರಮಗಳೇನು ;

(ಇ) ಸಹಕಾರ ಮತ್ತು ಖಾಸಗಿ ವಲಯದ ಎಷ್ಟು ಸಂಸ್ಥೆಗಳು ಕಳಪೆ ಗುಣಮಟ್ಟದ ಪಶು ಆಹಾರ ಉತ್ಪಾದಿಸಿರುವುದನ್ನು ಕಳೆದ ಮೂರು ವರ್ಷಗಳಲ್ಲಿ ಪತ್ತೆ ಹಚ್ಚಲಾಗಿದೆ ಹಾಗೂ ಎಷ್ಟು ಮೆಟ್ರಿಕ್ ಟನ್ ಕಳಪೆ ಆಹಾರವನ್ನು ವಶಕ್ಕೆ ಪಡೆಯಲಾಗಿದೆ ; (ವರ್ಷವಾರು, ಸಹಕಾರ ಮತ್ತು ಖಾಸಗಿ ಸಂಸ್ಥೆವಾರು ಮಾಹಿತಿ ನೀಡುವುದು)

(ಈ) ಇದೇ ಅವಧಿಯಲ್ಲಿ ಕಳಪೆ ಗುಣಮಟ್ಟದ ಆಹಾರ ಸೇವಿಸಿ ಮೃತಪಟ್ಟ ಹಸುಗಳ ಸಂಖ್ಯೆ ಎಷ್ಟು ; (ವರ್ಷವಾರು ಮಾಹಿತಿ ನೀಡುವುದು)

(ಉ) ಕಳಪೆ ಆಹಾರ ಉತ್ಪಾದನೆ ಮತ್ತು ಪೂರೈಕೆ ಸಂಬಂಧ ಇದುವರೆಗೂ ಎಷ್ಟು ಪ್ರಕರಣಗಳನ್ನು ದಾಖಲಿಸಲಾಗಿದೆ ;

(ಊ) ಕಳಪೆ ಆಹಾರ ಸೇವಿಸುವುದರಿಂದ ಹಸುಗಳ ಆರೋಗ್ಯ ಮೇಲೆ ಆಗುವ ವ್ಯತಿರಿಕ್ತ ಪರಿಣಾಮಗಳೇನು ? (ವಿವರವಾದ ಮಾಹಿತಿ ನೀಡುವುದು)

# ರಾಜ್ಯದಲ್ಲಿ ರಸಗೊಬ್ಬರ ಕೊರತೆ, ವಿತರಣಾ ಲೋಪ, ಕಾಳಸಂತೆ ತಡೆ ಹಾಗೂ ತಾಂತ್ರಿಕ ಸಮಸ್ಯೆಗಳ ಕುರಿತು

**ಡಾ. ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೧೪ (೧೦೧೫) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಲವು ಜಿಲ್ಲೆಗಳಲ್ಲಿ ಮುಂಗಾರು ಆರಂಭದಲ್ಲೇ ಯೂರಿಯಾ ಹಾಗೂ ಡಿ.ಎ.ಪಿ (DAP) ಗೊಬ್ಬರಗಳ ತೀವ್ರ ಕೊರತೆಯಾಗಿ ರೈತರು ಆತಂಕಕ್ಕೊಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕೇಂದ್ರದಿಂದ ಅನುದಾನ/ದಾಸ್ತಾನು ಬಿಡುಗಡೆಯಾಗಿದ್ದರೂ ಸ್ಥಳೀಯ ವಿತರಣಾ ಲೋಪದಿಂದಾಗಿ ಗೊಬ್ಬರ ಸಿಗುತ್ತಿಲ್ಲ ಎಂಬ ಆರೋಪ ನಿಜವೇ ; ಬೆಳೆಗಳ ಇಳುವರಿ ಕುಸಿತ ತಡೆಯಲು ಕೈಗೊಂಡಿರುವ ತುರ್ತು ಕ್ರಮಗಳೇನು ;

(ಇ) ಕೃತಕ ಅಭಾವ ಸೃಷ್ಟಿಸಿ ಕಾಳಸಂತೆಯಲ್ಲಿ ದುಬಾರಿ ಬೆಲೆಗೆ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಕಪ್ಪು ಮಾರುಕಟ್ಟೆದಾರರ ವಿರುದ್ಧ ಅಗತ್ಯ ವಸ್ತುಗಳ ಕಾಯ್ದೆಯಡಿ (ECA) ಕೈಗೊಂಡಿರುವ ಕ್ರಮಗಳೇನು ; (ಜಿಲ್ಲಾವಾರು ವಿವರ ನೀಡುವುದು)

(ಈ) 'ಕೆ–ಕಿಸಾನ್' ತಂತ್ರಾಂಶ ಹಾಗೂ FID ಸರ್ವರ್ ತೊಂದರೆಯಿಂದ ಪೂರೈಕೆಗೆ ಅಡ್ಡಿಯಾಗುತ್ತಿರುವುದು ನಿಜವೇ ; ಡಿಜಿಟಲ್ ಟ್ರ್ಯಾಕಿಂಗ್ ಮೂಲಕ ಕೊರತೆಯಿರುವ ಪ್ರದೇಶಗಳಿಗೆ ತಕ್ಷಣ ಗೊಬ್ಬರ ತಲುಪಿಸಲು ರೂಪಿಸಿರುವ ಸಾರಿಗೆ ಕ್ರಿಯಾ ಯೋಜನೆಗಳೇನು ?

## ರಾಜ್ಯದಲ್ಲಿ 'ಪ್ರಧಾನ ಮಂತ್ರಿ ಆವಾಸ್ ಯೋಜನೆ–ನಗರ' (**PMAY-U**) ೧.೦ ಮತ್ತು ೨.೦ ಅನುಷ್ಠಾನದ ಕುರಿತು

**ಡಾ. ಎಂ.ಜಿ.ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೧೫ (೧೦೧೬) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಪ್ರಧಾನ ಮಂತ್ರಿ ಆವಾಸ್ ಯೋಜನೆ–ನಗರ (PMAY-U) ಅಡಿ ಮಂಜೂರಾದ, ಪೂರ್ಣಗೊಂಡ ಮತ್ತು ಫಲಾನುಭವಿಗಳಿಗೆ ನೀಡಲಾದ ಮನೆಗಳೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ನೂತನ PMAY-U 2.0 ಯೋಜನೆಯಡಿ ಬೀದರ್ ಜಿಲ್ಲೆಗೆ ನಿಗದಿಪಡಿಸಿದ ಒಟ್ಟು ಮನೆಗಳ ಗುರಿ ಎಷ್ಟು ಹಾಗೂ ಮುಂದಿನ ೩ ವರ್ಷಗಳಲ್ಲಿ ಎಷ್ಟು ಮನೆ ಕಟ್ಟಲು ಉದ್ದೇಶಿಸಲಾಗಿದೆ ;

(ಇ) ಜಿಲ್ಲೆಯಲ್ಲಿ ಮನೆಗಳ ನಿರ್ಮಾಣ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ವಿಳಂಬಕ್ಕೆ ಕಾರಣಗಳೇನು ಹಾಗೂ ಸೆಪ್ಟೆಂಬರ್ ೨೦೨೬ರ ಒಳಗೆ ಪೂರ್ಣಗೊಳಿಸಲು ಕೈಗೊಂಡ ಕ್ರಮಗಳೇನು ;

(ಈ) PMAY-U 2.0 ಅಡಿಯಲ್ಲಿ ಬಡ ಫಲಾನುಭವಿಗಳ ಪಾರದರ್ಶಕ ಆಯ್ಕೆಗೆ ಸರ್ಕಾರ ರೂಪಿಸಿರುವ ಹೊಸ ಮಾರ್ಗಸೂಚಿಗಳೇನು?

## ಬೆಳಗಾವಿ–ಕಿತ್ತೂರು–ಧಾರವಾಡ ನೂತನ ರೈಲು ಮಾರ್ಗ ಯೋಜನೆ ಹಾಗೂ ಭೂಸ್ವಾಧೀನ ಪ್ರಕ್ರಿಯೆಯ ವಿಳಂಬದ ಕುರಿತು

**ಡಾ. ಎಂ.ಜಿ.ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೧೬ (೧೦೧೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ–ಕಿತ್ತೂರು–ಧಾರವಾಡ ನೂತನ ರೈಲು ಮಾರ್ಗ ಯೋಜನೆಗೆ ಮಂಜೂರಾತಿ ದೊರೆತು ೬ ವರ್ಷಗಳಾಗಿದ್ದರೂ ಯೋಜನೆ ಅನುಷ್ಠಾನಗೊಳ್ಳದಿರಲು ಹಾಗೂ ಭೂಸ್ವಾಧೀನ ಪ್ರಕ್ರಿಯೆ ವಿಳಂಬವಾಗಲು ಕಾರಣಗಳೇನು ;

(ಆ) ಈ ಯೋಜನೆಗೆ ಅಗತ್ಯವಿರುವ ಒಟ್ಟು ೫೮೧ ಹೆಕ್ಟೇರ್ (ಸುಮಾರು ೧೪೩೬ ಎಕರೆ) ಭೂಮಿಯಲ್ಲಿ ಇದುವರೆಗೆ ರೈಲ್ವೆ ಇಲಾಖೆಗೆ ಹಸ್ತಾಂತರಿಸಲಾದ ಭೂಮಿಯ ಪ್ರಮಾಣವೆಷ್ಟು ; (ಸಂಪೂರ್ಣ ವಿವರ ನೀಡುವುದು)

(ಇ) ೫೦:೫೦ ವೆಚ್ಚ ಹಂಚಿಕೆಯ ಈ ಯೋಜನೆಗೆ ರಾಜ್ಯ ಸರ್ಕಾರದಿಂದ ಬಿಡುಗಡೆ ಮಾಡಬೇಕಾದ ಮೊತ್ತವೆಷ್ಟು; ಇದರಲ್ಲಿ ಇತ್ತೀಚೆಗೆ ಬಿಡುಗಡೆ ಮಾಡಲಾದ ೭೦ ಕೋಟಿ ರೂಪಾಯಿ ಪರಿಹಾರ ಧನದಿಂದ ಎಷ್ಟು ಎಕರೆ ಭೂಸ್ವಾಧೀನ ಪೂರ್ಣಗೊಳ್ಳಲಿದೆ ;

(ಈ) ಈ ಯೋಜನೆಗೆ ಸಂಬಂಧಿಸಿದಂತೆ ಅರಣ್ಯ ಮಂಜೂರಾತಿ, ಭೂಸ್ವಾಧೀನ ಮತ್ತು ಮೂಲಸೌಕರ್ಯಗಳ ಸ್ಥಳಾಂತರ ಪ್ರಕ್ರಿಯೆಯನ್ನು ಪೂರ್ಣಗೊಳಿಸಿ, ರೈಲ್ವೆ ಇಲಾಖೆಗೆ ಭೂಮಿ ಹಸ್ತಾಂತರಿಸಲು ಸರ್ಕಾರ ವಿಧಿಸಿಕೊಂಡಿರುವ ಅಂತಿಮ ಕಾಲಮಿತಿ ಏನು ?

## ಮೈಸೂರು ನಗರದಲ್ಲಿ ವಸತಿ ಇಲಾಖೆಯಿಂದ ಕೈಗೊಂಡ ಯೋಜನೆಗಳು

**ಶ್ರೀ ಸಿ. ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೧೭ (೧೦೩೨) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ನಗರ ವ್ಯಾಪ್ತಿಯಲ್ಲಿ ವಸತಿ ಇಲಾಖೆಯ (ರಾಜೀವ್ ಗಾಂಧಿ ವಸತಿ ನಿಗಮ ಕರ್ನಾಟಕ ವಸತಿ ಮಂಡಳಿ (KHB) ಮತ್ತು ಕೊಳಚೆ ಪ್ರದೇಶ ಅಭಿವೃದ್ಧಿ ಮಂಡಳಿಗಳು) ಮೂಲಕ ಕೈಗೊಂಡಿರುವ ಪ್ರಮುಖ ವಸತಿ ಯೋಜನೆಗಳಾವುವು ; (ಯೋಜನೆಗಳ ಹೆಸರು ಹಾಗೂ ಬಡಾವಣೆ ಪ್ರದೇಶಗಳ ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಮೈಸೂರು ನಗರದ ಈ ವಸತಿ ಯೋಜನೆಗಳಿಗೆ ಬಿಡುಗಡೆಯಾದ ಮತ್ತು ವೆಚ್ಚ ಮಾಡಲಾದ ಒಟ್ಟು ಅನುದಾನ ಎಷ್ಟು ; (ವರ್ಷವಾರು ಮತ್ತು ಯೋಜನಾವಾರು ವಿವರ ನೀಡುವುದು)

(ಇ) ವಸತಿ ಇಲಾಖೆಯಲ್ಲಿ ಕೈಗೊಂಡಿರುವ ಮನೆಗಳ ನಿರ್ಮಾಣ ಹಂಚಿಕೆ ಪ್ರಕ್ರಿಯೆ ವಿಳಂಬವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ವಿಳಂಬಕ್ಕೆ ಕಾರಣಗಳೇನು ಹಾಗೂ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸಿ ಫಲಾನುಭವಿಗಳಿಗೆ ಹಸ್ತಾಂತರಿಸಲು ಕೈಗೊಂಡಿರುವ ಕ್ರಮಗಳೇನು ;

(ಈ) ಮೈಸೂರು ನಗರದ ಬಡ ಹಾಗೂ ಆರ್ಥಿಕವಾಗಿ ಹಿಂದುಳಿದ ವರ್ಗದ ಜನರಿಗೆ ಹೊಸದಾಗಿ ಮನೆ ಹಾಗೂ ನಿವೇಶನ ಕಲ್ಪಿಸಲು ವಸತಿ ಇಲಾಖೆಯಿಂದ ರೂಪಿಸಿರುವ ಮುಂದಿನ ಯೋಜನೆಗಳೇನು ? (ವಿವರ ನೀಡುವುದು)

## ಮೈಸೂರು ಜಿಲ್ಲೆಯಲ್ಲಿನ ಸಂಚಾರಿ ಪಶು ಚಿಕಿತ್ಸಾಲಯಗಳ ಬಗ್ಗೆ

**ಶ್ರೀ ಸಿ. ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೧೮ (೧೦೩೩) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಜಿಲ್ಲೆಯಲ್ಲಿ ೧೯೬೨ ಸಂಚಾರಿ ಪಶು ಚಿಕಿತ್ಸಾ ಘಟಕಗಳಿಗೆ ರೈತರಿಂದ ಹೆಚ್ಚಿನ ಬೇಡಿಕೆ ಇರುವುದು ಹಾಗೂ ಕಳೆದ ಮಾರ್ಚ್–ಏಪ್ರಿಲ್ ನಲ್ಲಿ ೩೦೦೦ಕ್ಕೂ ಹೆಚ್ಚು ಜಾನುವಾರುಗಳಿಗೆ ಚಿಕಿತ್ಸೆ ನೀಡಿರುವುದು ನಿಜವೇ ;

(ಆ) ಪ್ರಸ್ತುತ ಬೆಳಿಗ್ಗೆ ೯:೦೦ ರಿಂದ ಸಂಜೆ ೫ರವರೆಗಿನ ಸೇವೆಯಿಂದ ರಾತ್ರಿ ವೇಳೆಯ ತುರ್ತು ಚಿಕಿತ್ಸೆಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಸೇವೆಯ ಸಮಯವನ್ನು ವಿಸ್ತರಿಸಲು ಹಾಗೂ ಹೆಚ್ಚುವರಿ ವಾಹನ ನೀಡಲು ಕ್ರಮ ಕೈಗೊಳ್ಳಲಾಗುವುದೇ ;

(ಇ) ಸರಗೂರು ಘಟಕದಲ್ಲಿ ಪಶುವೈದ್ಯರಿಲ್ಲದಿರಲು ಕಾರಣವೇನು ಹಾಗೂ ಗುತ್ತಿಗೆ ಸಿಬ್ಬಂದಿಯಿಂದ ಯೋಜನೆಗೆ ತೊಂದರೆಯಾಗದಂತೆ ಕೈಗೊಂಡಿರುವ ಕ್ರಮಗಳೇನು ;

(ಈ) ಈ ಯೋಜನೆಯಿಂದಾಗಿ ಮೈಸೂರು ಜಿಲ್ಲೆಯಲ್ಲಿ ದಿನಂಪ್ರತಿ ಹಾಲಿನ ಉತ್ಪಾದನೆ ೬.೯೦ ಲಕ್ಷ ಲೀಟರ್ ನಿಂದ ೯.೨೭ ಲಕ್ಷ ಲೀಟರಿಗೆ ಏರಿಕೆಯಾಗಿದೆಯೇ ; ಹಾಗಿದ್ದಲ್ಲಿ, ಇದನ್ನು ರಾಜ್ಯದ ಎಲ್ಲಾ ಜಿಲ್ಲೆಗಳಿಗೂ ವಿಸ್ತರಿಸಲಾಗುವುದೇ ?

## ಸಹಕಾರ ಇಲಾಖೆಯ ವ್ಯಾಪ್ತಿಯ ಬ್ಯಾಂಕ್‌ಗಳ ಕುರಿತು

**ಶ್ರೀ ಎಂ.ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೯೧೯ (೧೦೦೮) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು (PACS), ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್‌ಗಳು (DCCB) ಮತ್ತು ರಾಜ್ಯ

ಸಹಕಾರ ಅಪೆಕ್ಸ್ ಬ್ಯಾಂಕ್‌ಗಳ ಆರ್ಥಿಕ ಸ್ಥಿತಿ ಏನು ; (ಕಳೆದ ಮೂರು ವರ್ಷಗಳ ಲಾಭ–ನಷ್ಟದ ವಿವರ ನೀಡುವುದು)

(ಆ) ಬಡ್ಡಿರಹಿತ ಹಾಗೂ ಕಡಿಮೆ ಬಡ್ಡಿದರದ ಕೃಷಿ ಸಾಲ ಯೋಜನೆಗಳಿಂದ ಎಷ್ಟು ರೈತರು ಪ್ರಯೋಜನ ಪಡೆದಿದ್ದಾರೆ ; ರಾಜ್ಯದಲ್ಲಿ ನಿಷ್ಕ್ರಿಯ (Inactive) ಮತ್ತು ನಷ್ಟದಲ್ಲಿರುವ ಸಹಕಾರ ಸಂಘಗಳ ಸಂಖ್ಯೆ ಎಷ್ಟು ; ಅವುಗಳ ಪುನಶ್ಚೇತನಕ್ಕೆ ಸರ್ಕಾರದ ಯೋಜನೆಗಳೇನು ;

(ಇ) ಸಹಕಾರ ಬ್ಯಾಂಕ್‌ಗಳಲ್ಲಿ ವಂಚನೆ, ಅಕ್ರಮ ಸಾಲ ವಿತರಣೆ ಮತ್ತು ಹಣ ದುರುಪಯೋಗ ಪ್ರಕರಣಗಳ ಸಂಖ್ಯೆ ಎಷ್ಟು ; ಸಂಬಂಧಪಟ್ಟವರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಈ) ಮಹಿಳಾ ಸಹಕಾರ ಸಂಘಗಳು ಮತ್ತು ಸ್ವಸಹಾಯ ಗುಂಪುಗಳಿಗೆ ಸರ್ಕಾರ ನೀಡುತ್ತಿರುವ ಆರ್ಥಿಕ ನೆರವು ಮತ್ತು ಪ್ರೋತ್ಸಾಹ ಧನದ ವಿವರ ನೀಡುವುದು ; ಹಾಲು, ಸಕ್ಕರೆ, ರೇಷ್ಮೆ, ಮೀನುಗಾರಿಕೆ ಮತ್ತು ಕೃಷಿ ಕ್ಷೇತ್ರದ ಸಹಕಾರ ಸಂಘಗಳನ್ನು ಬಲಪಡಿಸಲು ಸರ್ಕಾರದ ವಿಶೇಷ ಯೋಜನೆಗಳೇನು ?

## ಹಜ್ ಇಲಾಖೆ ವತಿಯಿಂದ ಕೈಗೊಂಡ ಕ್ರಮದ ಬಗ್ಗೆ

**ಶ್ರೀ ಎಂ.ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೬೨೦ (೧೦೦೫) ಮಾನ್ಯ ಅಲ್ಪ ಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಿಂದ ಹಜ್ ಯಾತ್ರೆಗೆ ತೆರಳುವ ಯಾತ್ರಿಕರ ಸಂಖ್ಯೆಯನ್ನು ವಿವರದೊಂದಿಗೆ ಸರ್ಕಾರ

ನೀಡುವುದು ; ಹಜ್ ಯಾತ್ರಿಕರ ಆಯ್ಕೆ ಪ್ರಕ್ರಿಯೆಯನ್ನು ಇನ್ನಷ್ಟು ಪಾರದರ್ಶಕವಾಗಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ;

(ಆ) ರಾಜ್ಯದ ಕಳೆದ ಮೂರು ವರ್ಷಗಳಲ್ಲಿ ಹಜ್ ಮೂಲಸೌಕರ್ಯ ಸುಧಾರಣೆಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; ಹಜ್ ಯಾತ್ರಿಕರಿಗೆ ಆರೋಗ್ಯ ತಪಾಸಣೆ, ಲಸಿಕೆ, ತರಬೇತಿ ಹಾಗೂ ಮಾರ್ಗದರ್ಶನವನ್ನು ಜಿಲ್ಲಾ ಮಟ್ಟದಲ್ಲಿಯೂ ನೀಡುವ ಯೋಜನೆ ಇದೆಯೇ ;

(ಇ) ಹಿರಿಯ ನಾಗರೀಕರು, ಮಹಿಳೆಯರು ಹಾಗೂ ದಿವ್ಯಾಂಗರಿಗೆ ಹಜ್ ಯಾತ್ರೆಯಲ್ಲಿ ವಿಶೇಷ ನೆರವು ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಕಳೆದ ಮೂರು ವರ್ಷಗಳಲ್ಲಿ ರಾಜ್ಯದ ಹಜ್ ಭವನಗಳ ಮೂಲಸೌಕರ್ಯ ಸುಧಾರಣೆಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ?

## ಕೃಷಿ ಇಲಾಖೆ ವತಿಯಿಂದ ಕೈಗೊಂಡ ಕ್ರಮದ ಬಗ್ಗೆ

**ಶ್ರೀ ಎಂ.ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೯೨೧ (೧೦೦೬) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷಿ ಇಲಾಖೆಯಲ್ಲಿ ಕೃಷಿ ಅಧಿಕಾರಿಗಳು ಹಾಗೂ ಸಹಾಯಕ ಕೃಷಿ ಅಧಿಕಾರಿಗಳ ಖಾಲಿ ಹುದ್ದೆಗಳ ಸಂಖ್ಯೆ ಎಷ್ಟು ; ನೇಮಕಾತಿ ಯಾವಾಗ ಪೂರ್ಣಗೊಳ್ಳಲಿದೆ ;

(ಆ) ಪ್ರತಿ ತಾಲ್ಲೂಕಿನಲ್ಲಿ ರೈತ ಸಂಪರ್ಕ ಕೇಂದ್ರಗಳ ಕಾರ್ಯ ಕ್ಷಮತೆಯನ್ನು ಹೆಚ್ಚಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ರೈತರು ತಮ್ಮ ಉತ್ಪನ್ನಗಳಿಗೆ ನ್ಯಾಯಯುತ ಬೆಲೆ ಪಡೆಯಲು ಶೀತಲ ಗೋದಾಮು, ಸಂಸ್ಕರಣಾ ಘಟಕ ಮತ್ತು ಗೋದಾಮು ನಿರ್ಮಾಣಕ್ಕೆ ಸರ್ಕಾರದ ಯೋಜನೆ ಏನು ;

(ಈ) ಸಿರಿಧಾನ್ಯ, ಕಾಳು, ಎಣ್ಣೆ ಬೀಜ ಹಾಗೂ ತೋಟಗಾರಿಕೆ ಬೆಳೆಗಳಿಗೆ ಮಾರುಕಟ್ಟೆ ಮತ್ತು ರಫ್ತು, ಅವಕಾಶಗಳನ್ನು ವಿಸ್ತರಿಸಲು ಸರ್ಕಾರದ ಕಾರ್ಯಯೋಜನೆ ಏನು ;

(ಉ) ಹವಾಮಾನ ಬದಲಾವಣೆಯಿಂದ ಕೃಷಿಗೆ ಉಂಟಾಗುತ್ತಿರುವ ಪರಿಣಾಮಗಳನ್ನು ಎದುರಿಸಲು ಹವಾಮಾನ ಸ್ನೇಹಿ ಕೃಷಿ ಪದ್ಧತಿಗಳನ್ನು ಉತ್ತೇಜಿಸಲು ಸರ್ಕಾರ ಎಷ್ಟು ಅನುದಾನ ಮೀಸಲಿಟ್ಟಿದೆ ?

## ಒಳನಾಡು ಜಲಸಾರಿಗೆ ಕ್ಷೇತ್ರದಲ್ಲಿ ಕೈಗೊಂಡಿರುವ ಕ್ರಮದ ಬಗ್ಗೆ

**ಶ್ರೀ ಎಂ.ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೯೨೨ (೧೦೦೯) ಮಾನ್ಯ ಮುಜರಾಯಿ, ಮೀನುಗಾರಿಕೆ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳ ೧೩ ಮೀನುಗಾರಿಕಾ ಬಂದರುಗಳಲ್ಲಿ ಹೂಳೆತ್ತುವಿಕೆ ಯೋಜನೆಯ ಪ್ರಸ್ತುತ ಹಂತವೇನು ; ಈ ಯೋಜನೆಗೆ ಎಷ್ಟು ಅನುದಾನ ಮೀಸಲಿಡಲಾಗಿತ್ತು ; ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ;

(ಆ) ಕರಾವಳಿ ಪ್ರದೇಶದಲ್ಲಿ ಒಳನಾಡು ನೀರಿನ ನಿರ್ವಹಣೆ ಮತ್ತು ಸಾರಿಗೆಯನ್ನು ಸುಧಾರಿಸಲು "ಪಶ್ಚಿಮ ವಾಹಿನಿ" ಯೋಜನೆಗೆ ಸರ್ಕಾರ ಹೆಚ್ಚುವರಿ ಅನುದಾನವನ್ನು ಈ ಆಯವ್ಯಯದಲ್ಲಿ ಕೋರಿದೆಯೇ ;

(ಇ) ನೇತ್ರಾವತಿ ಮತ್ತು ಗುರುಪುರ ಹಿನ್ನೀರಿನಲ್ಲಿ ೧೭ ನಿಲ್ದಾಣಗಳನ್ನು ಒಳಗೊಂಡ ೩೦ ಕಿ.ಮೀ. ಉದ್ದದ ಮತ್ತು ಸುಮಾರು ೨೫೦೦ ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲು ಯೋಜಿಸಿರುವ ರಾಜ್ಯದ ಮೊದಲ ವಾಟರ್ ಮೆಟ್ರೋ ಯೋಜನೆಯ ಪ್ರಸ್ತುತ ಹಂತವೇನು ? (ಮಾಹಿತಿ ನೀಡುವುದು)

## ಕರ್ನಾಟಕ ಗೃಹ ಮಂಡಳಿ ವತಿಯಿಂದ ರಚನೆಗೊಂಡಿರುವ ಬಡಾವಣೆಗಳ ಬಗ್ಗೆ

**ಶ್ರೀ ಕೆ.ಎಸ್.ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೨೩ (೧೦೬೫) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕರ್ನಾಟಕ ಗೃಹ ಮಂಡಳಿ ವತಿಯಿಂದ ರಚನೆಗೊಂಡಿರುವ ಬಡಾವಣೆಗಳು ಯಾವುವು ; ಈ ಬಡಾವಣೆಗಳಲ್ಲಿ ಯಾವ ವಿಧದ ನಿವೇಶನಗಳನ್ನು ಎಷ್ಟು ಪ್ರಮಾಣದಲ್ಲಿ ರಚಿಸಲಾಗಿದೆ ; (ವಿವರ ಒದಗಿಸುವುದು)

(ಆ) ಕೆ.ಹೆಚ್.ಬಿ ಯಿಂದ ರಚಿಸಿರುವ ಬಡಾವಣೆಗಳಲ್ಲಿನ ಎಲ್ಲಾ ನಿವೇಶನಗಳನ್ನು ಸಾರ್ವಜನಿಕರಿಗೆ ಹಂಚಿಕೆ/ಹರಾಜು ಮಾಡಲಾಗಿದೆಯೇ ; ಇಲ್ಲವಾದಲ್ಲಿ, ಉಳಿದಿರುವ ನಿವೇಶನಗಳ ಸಂಖ್ಯೆ ಎಷ್ಟು ; (ಬಡಾವಣೆವಾರು ವಿವಿಧ ವರ್ಗವಾರು ಮಾಹಿತಿಯನ್ನು ನೀಡುವುದು)

(ಇ) ಮಂಡಳಿಯ ವಶದಲ್ಲಿ ಉಳಿದಿರುವ ನಿವೇಶನಗಳನ್ನು ಸಾರ್ವಜನಿಕರಿಗೆ ಹಂಚಿಕೆ/ಹರಾಜು ಮಾಡಲು ಮಂಡಳಿಯು ಕೈಗೊಂಡಿರುವ ಕ್ರಮಗಳೇನು ?

## ರೈತರು ಬೆಳೆದ ಈರುಳ್ಳಿ ಬೆಳೆಗೆ ವಿಮೆ ಜಮೆ ಮಾಡುವ ಬಗ್ಗೆ

**ಶ್ರೀ ಪಿ.ಹೆಚ್.ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೨೪ (೧೦೨೯) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಸರ್ಕಾರ ಪ್ರಾರಂಭಿಸಿದ ರೈತ ಉಪಯೋಗಿ ಫಸಲ್ ಬಿಮಾ ಯೋಜನೆಯಲ್ಲಿ ಕೇಂದ್ರ ಸರ್ಕಾರ ರಾಜ್ಯ ಸರ್ಕಾರ ಮತ್ತು ವಿಮಾ ಕಂಪನಿಗಳ ಜವಾಬ್ದಾರಿಗಳ ಅನುಪಾತವೇನು ; (ವಿವರ ನೀಡುವುದು)

(ಆ) ಕಳೆದ ೨೦೨೫ ನೇ ಸಾಲಿನ ಕಲಬುರಗಿ, ಬೀದರ್, ಚಿತ್ರದುರ್ಗ ಇನ್ನುಳಿದ ಜಿಲ್ಲೆಗಳ ರೈತರು ಪಡೆದುಕೊಂಡಿರುವುದು ಸರಿಯಷ್ಟೆ;

(ಇ) ಆದರೆ ಬಾಗಲಕೋಟೆ ಜಿಲ್ಲೆಯ ಬಾಗಲಕೋಟೆ ತಾಲ್ಲೂಕಿನ ಬೆನಕಟ್ಟಿ ಗ್ರಾಮದ ರೈತರು ೨೦೨೫ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಈರುಳ್ಳಿ ಬೆಲೆಗೆ ವಿಮೆ ಮಾಡಿಸಿದರೂ ಈವರೆಗೆ ಅರ್ಹ ರೈತರಿಗೆ ಬೆಳೆ ವಿಮೆ ಪರಿಹಾರ ಮೊತ್ತ ಜಮೆಯಾಗದೇ ಇರುವುದರಿಂದ ರೈತರು ತೊಂದರೆ ಅನುಭವಿಸುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಈ ತಾರತಮ್ಯಗಳಿಗೆ ಕಾರಣಗಳೇನು; ಪರಿಹಾರ ಯಾವ ಕಾಲಮಿತಿಯಲ್ಲಿ ನೀಡಲಾಗುವುದು ?

## ನೇಕಾರರು ಉತ್ಪಾದಿಸುವ ಉತ್ಪನ್ನಗಳಿಗೆ ಸೂಕ್ತ ಬೆಲೆ ನೀಡುವ ಬಗ್ಗೆ

**ಶ್ರೀ ಪಿ.ಹೆಚ್.ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೨೫ (೧೦೩೦) ಮಾನ್ಯ ಸಕ್ಕರೆ ಮತ್ತು ಜವಳಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ನಕಲಿ ಬ್ರಾಂಡ್ ಹೊಂದಿರುವ ಸೂರತ್‌ನ ಕಡಿಮೆ ದರದ ಸಿಂಥೆಟಿಕ್ ಸೀರೆಗಳ ಮಾರಾಟ ಹೆಚ್ಚುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಕೈಮಗ್ಗ ಮತ್ತು ವಿದ್ಯುತ್ ಚಾಲಿತ ಮಗ್ಗಗಳಿಂದ ಉತ್ಪಾದಿಸಲಾಗುವ ಯಾವ ಯಾವ ಉತ್ಪನ್ನಗಳಿಗೆ ಯಾವ ಯಾವ ಪ್ರದೇಶಗಳಿಗೆ ಭೌಗೋಳಿಕ ಸೂಚನೆಗಳನ್ನು ಗುರುತಿಸಲಾಗಿದೆ ;

(ಇ) ರಾಜ್ಯದ ನೇಕಾರರು ಉತ್ಪಾದಿಸುವ ಉತ್ಪನ್ನಗಳಿಗೆ ಸೂಕ್ತವಾದ ಮಾರುಕಟ್ಟೆ ಸೌಲಭ್ಯಗಳನ್ನು ಕಲ್ಪಿಸಲಾಗಿದೆಯೇ ; ಕಲ್ಪಿಸಿದ್ದಲ್ಲಿ ಯಾವ ಯಾವ ಸೌಲಭ್ಯಗಳನ್ನು ನೀಡಲಾಗಿದೆ ?

## ರಾಜ್ಯದಲ್ಲಿರುವ ಖಾದಿ ಉತ್ಪಾದನಾ ಕೇಂದ್ರಗಳಿಗೆ ಬಿಡುಗಡೆಯಾಗಬೇಕಿರುವ ಸಹಾಯಧನದ ಬಗ್ಗೆ

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೨೬ (೧೦೫೦) ಮಾನ್ಯ ಸಕ್ಕರೆ ಮತ್ತು ಜವಳಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಖಾದಿ ಉತ್ಪಾದನಾ ಕೇಂದ್ರಗಳೆಷ್ಟು ಮತ್ತು ಅವುಗಳು ಯಾವುವು ; (ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಿಂದ ಸದರಿ ಖಾದಿ ಉತ್ಪಾದನಾ ಸಂಸ್ಥೆಗಳಿಗೆ ಬಿಡುಗಡೆಯಾಗಿರುವ ಸಹಾಯಧನ ಎಷ್ಟು ಹಾಗೂ ಬಾಕಿ ಉಳಿಸಿಕೊಂಡಿರುವ ಸಹಾಯಧನದ ಮೊತ್ತವೆಷ್ಟು ; ಬಾಕಿ ಉಳಿಸಿಕೊಂಡಿರುವ ಸಹಾಯಧನವನ್ನು ಯಾವ ಕಾಲಮಿತಿಯೊಳಗೆ ಬಿಡುಗಡೆ ಮಾಡಲಾಗುವುದು ;

(ಇ) ಖಾದಿ ಉತ್ಪನ್ನಗಳನ್ನು ಉತ್ತೇಜಿಸಲು ತಿಂಗಳಿನ ಮೊದಲನೇ ಶನಿವಾರ ಎಲ್ಲಾ ಸರ್ಕಾರಿ ಕಛೇರಿಗಳಲ್ಲಿ ಖಾದಿ ಬಟ್ಟೆಗಳನ್ನು ಕಡ್ಡಾಯುವಾಗಿ ಧರಿಸುವುದನ್ನು ಸರ್ಕಾರ ಆದೇಶ ನೀಡಲಾಗಿರುತ್ತಾದರೂ ಕೂಡ ಪರಿಣಾಮಕಾರಿಯಾಗಿ ಆದೇಶವನ್ನು ಬಹಳಷ್ಟು ಕಛೇರಿಗಳಲ್ಲಿ ಪಾಲಿಸದೇ ಇರುವುದಕ್ಕೆ ಕಾರಣವೇನು ಹಾಗೂ ಪರಿಣಾಮಕಾರಿಯಾಗಿ ಆದೇಶ ಪಾಲಿಸಲು ಕೈಗೊಂಡ ಕ್ರಮಗಳೇನು ?

## ಧಾರವಾಡ, ಹಾವೇರಿ ಮತ್ತು ಗದಗ ಜಿಲ್ಲೆಗಳಿಗೆ ಅನಾವೃಷ್ಠಿಯಿಂದಾದ ರೈತರಿಗೆ ಪರಿಹಾರ ನೀಡುವ ಬಗ್ಗೆ

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೨೭ (೧೦೫೨) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮುಂಗಾರು ಮಳೆ ವಾಡಿಕೆಗಿಂತ ಶೇಕಡ ಎಷ್ಟು ಪ್ರಮಾಣದಲ್ಲಿ ಕಡಿಮೆಯಾಗಿದೆ ; (ಪ್ರಾದೇಶಿಕಾವಾರು ಹಾಗೂ ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಧಾರವಾಡ, ಹಾವೇರಿ ಮತ್ತು ಗದಗ ಜಿಲ್ಲೆಗಳಲ್ಲಿ ಮುಂಗಾರು ಮಳೆಯ ತೀವ್ರ ಕೊರತೆಯಿಂದ ಬೆಳೆಗಳು ಹಾನಿಗೊಳಗಾಗಿ ರೈತರು ಆರ್ಥಿಕ ಸಂಕಷ್ಟಕ್ಕೆ ಒಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈ ಜಿಲ್ಲೆಗಳ ರೈತರಿಗೆ ಬೆಳೆ ನಷ್ಟ ಪರಿಹಾರ, ಕೃಷಿ ಇನ್‌ಪುಟ್ ಸಹಾಯಧನ, ಸಾಲ ಮರುಪಾವತಿ ವಿನಾಯಿತಿ ನೀಡುವ ಬಗ್ಗೆ ಕೈಗೊಂಡಿರುವ ಪರಿಹಾರ ಕ್ರಮಗಳೇನು ;

(ಈ) ಈ ಜಿಲ್ಲೆಗಳನ್ನು ಬರಪೀಡಿತ ಪ್ರದೇಶಗಳೆಂದು ಘೋಷಿಸಿ ವಿಶೇಷ ಪರಿಹಾರ ಪ್ಯಾಕೇಜ್ ಹಾಗೂ ಅಗತ್ಯ ನೆರವು ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಪಾರದರ್ಶಕತೆ ಕೈಗೊಳ್ಳುವ ಬಗ್ಗೆ

**ಶ್ರೀ ರಘು.ಆರ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೯೨೮ (೧೦೨೭) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಹಕಾರ ಇಲಾಖೆ ವ್ಯಾಪ್ತಿಗೆ ಒಳಪಡುವ ಸಹಕಾರಿ ಸಂಸ್ಥೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಪಾರದರ್ಶಕತೆಯಿಂದ ನೇಮಕಾತಿ ಮಾಡಿಕೊಳ್ಳಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಮಾಹಿತಿ ನೀಡುವುದು)

(ಆ) ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಸಹಕಾರ ಇಲಾಖೆ ಹುದ್ದೆಗಳ ನೇಮಕಾತಿ ನಡೆಸಲು ಸರ್ಕಾರ ಉದ್ದೇಶಿಸಲಾಗಿದೆಯೇ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಸದರಿ ಸಹಕಾರ ಇಲಾಖೆ/ ಸಂಸ್ಥೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ನಿಗದಿತ ಕಾಲಮಿತಿಯೊಳಗೆ ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಜಿಲ್ಲಾವಾರು ಮಾಹಿತಿ ನೀಡುವುದು)

## ರಾಜ್ಯದಲ್ಲಿ ಪೌರಕಾರ್ಮಿಕರಿಗೆ ಇರುವ ಸೌಲಭ್ಯಗಳು

**ಶ್ರೀ ರಘು.ಆರ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೯೨೯ (೧೦೨೮) ಮಾನ್ಯ ಪೌರಾಡಳಿತ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಯಲ್ಲಿ ಖಾಯಂ ಮತ್ತು ಗುತ್ತಿಗೆ ಹೊರಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಪೌರಕಾರ್ಮಿಕರಿಗೆ ಸರ್ಕಾರದ ವತಿಯಿಂದ ಆಧುನಿಕ ಉಪಕರಣಗಳನ್ನು ಒದಗಿಸಲಾಗಿದೆಯೇ ; (ಮಾಹಿತಿ ನೀಡುವುದು)

(ಆ) ಸದರಿ ನಗರಸಭೆ ಪುರಸಭೆ ಮತ್ತು ಪಟ್ಟಣ ಪಂಚಾಯಿತಿ ಪೌರಕಾರ್ಮಿಕರಿಗೆ ಇರುವ ಸೌಲಭ್ಯಗಳೇನು ; (ಸವಲತ್ತುಗಳ ವಿವರ ನೀಡುವುದು)

(ಇ) ಸದರಿಯವರು ವಾಸಿಸುವ ವ್ಯಾಪ್ತಿಯಲ್ಲಿ ಚರಂಡಿ ಮತ್ತು ಒಳಚರಂಡಿ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಕಬ್ಬನ್ ಪಾರ್ಕ್ ಉದ್ಯಾನವನದಲ್ಲಿ ರಜಾ ದಿನಗಳಂದೂ ವಾಹನಗಳಿಗೆ ನಿರ್ಭಂಧದ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೯೩೦ (೧೦೭೧) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಬ್ಬನ್ ಪಾರ್ಕ್ ಉದ್ಯಾನವನದಲ್ಲಿ ರಜಾ ದಿನಗಳಂದೂ ವಾಹನಗಳ ಪ್ರವೇಶಕ್ಕೆ ನಿರ್ಭಂಧ ವಿಧಿಸಿರುವುದಕ್ಕೆ ಪ್ರಮುಖ ಕಾರಣಗಳೇನು ; (ಮಾಹಿತಿ ನೀಡುವುದು)

(ಆ) ಕಬ್ಬನ್ ಪಾರ್ಕ್ ಉದ್ಯಾನವನ ಭಾಗದಲ್ಲಿ ರಜಾ ದಿನಗಳಲ್ಲಿ ವಾಹನಗಳ ಸಂಚಾರಕ್ಕೆ ಸಂಬಂಧಿಸಿದಂತೆ ವಿಧಿಸಲಾಗುತ್ತಿರುವ ನಿಯಮಗಳು ಹಾಗೂ ನಿರ್ಭಂಧಗಳಿಂದ ಸಾರ್ವಜನಿಕರಿಗೆ ಉಂಟಾಗುತ್ತಿರುವ ತೊಂದರೆಗಳ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಕಬ್ಬನ್ ಪಾರ್ಕ್ ಸುತ್ತಮುತ್ತ ರಜಾ ದಿನಗಳಲ್ಲಿ ಉಂಟಾಗುವ ವಾಹನ ದಟ್ಟಣೆ ಮತ್ತು ಪಾರ್ಕಿಂಗ್ ಸಮಸ್ಯೆ ಪರಿಹರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಮಾಹಿತಿ ನೀಡುವುದು)

(ಈ) ಹಿರಿಯ ನಾಗರೀಕರು, ಅಂಗವಿಕಲರು, ಮಕ್ಕಳು ಹಾಗೂ ತುರ್ತು (ಆಂಬ್ಯುಲೆನ್ಸ್) ಅಗತ್ಯವಿರುವವರಿಗೆ ಕಬ್ಬನ್ ಪಾರ್ಕ್ ಒಳಗೆ ರಜಾ ದಿನಗಳಲ್ಲಿ ವಾಹನ ಪ್ರವೇಶಕ್ಕೆ ಯಾವುದೇ ವಿಶೇಷ ವ್ಯವಸ್ಥೆ ಇದೆಯೇ ?

## ಸೂರ್ಯನಗರ ಬಳಿ ನಿರ್ಮಿಸಲು ಉದ್ದೇಶಿಸಿರುವ ಅಂತರರಾಷ್ಟ್ರೀಯ ಕ್ರೀಡಾಂಗಣದ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೩೧ (೯೯೯) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆನೇಕಲ್ ತಾಲ್ಲೂಕಿನ ಸೂರ್ಯನಗರ ಬಳಿ ಅಂತರ ರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣ ನಿರ್ಮಾಣ ಕಾಮಗಾರಿ ಆರಂಭವಾಗಿದೆಯೇ ; ಇದರ ಅಂದಾಜು ಮೊತ್ತ ಎಷ್ಟು;

(ಆ) ಕಾಮಗಾರಿಗೆ ಟೆಂಡರ್ ಕರೆದಿದ್ದು ಯಾವಾಗ ; ಟೆಂಡರ್‌ನಲ್ಲಿ ಎಷ್ಟು ಸಂಸ್ಥೆಗಳು ಭಾಗವಹಿಸಿದ್ದವು ; ಸದರಿ ಸಂಸ್ಥೆಗಳು ಟೆಂಡರ್‌ನಲ್ಲಿ ನಮೂದಿಸಿದ್ದ ಮೊತ್ತ ಎಷ್ಟು; ಯಾವ ಸಂಸ್ಥೆಗೆ ಟೆಂಡರ್ ನೀಡಲಾಗಿದೆ ;

(ಇ) ಕ್ರೀಡಾಂಗಣ ನಿರ್ಮಾಣಕ್ಕೆ ರಾಜ್ಯ ಸರ್ಕಾರ ನೀಡಿರುವ ಹಣ ಎಷ್ಟು ; ಅಗತ್ಯವಿರುವ ಬಾಕಿ ಅನುದಾನವನ್ನು ಯಾವ ಮೂಲದಿಂದ ಸಂಗ್ರಹ ಮಾಡಲಾಗುವುದು ;

(ಈ) ಕ್ರೀಡಾಂಗಣ ನಿರ್ಮಾಣಕ್ಕೆ ಎಷ್ಟು ಎಕರೆ ಜಮೀನು ಅಗತ್ಯವಿದೆ ; ಅಗತ್ಯ ಜಮೀನು ಸರ್ಕಾರದಲ್ಲಿ ಲಭ್ಯವಿದೆಯೇ ; ಎಷ್ಟು ಎಕರೆ ಖಾಸಗಿ ಜಮೀನನ್ನು ಭೂ ಸ್ವಾಧೀನಪಡಿಸಿಕೊಳ್ಳಲಾಗಿದೆ ; ಈ ಜಮೀನಿಗೆ ನಿಗದಿಪಡಿಸಿರುವ ದರ ಎಷ್ಟು ?

## ರಾಜ್ಯದಲ್ಲಿ ರೈತರ ಆತ್ಮಹತ್ಯೆ ಪ್ರಕರಣಗಳನ್ನು ತಡೆಯಲು ಕೈಗೊಂಡಿರುವ ಕ್ರಮಗಳ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೩೨ (೯೯೫) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಿಂದ ರಾಜ್ಯದಲ್ಲಿ ರೈತರ ಅತ್ಮಹತ್ಯೆ ಪ್ರಕರಣಗಳು ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಆತ್ಮಹತ್ಯೆ ಮಾಡಿಕೊಂಡ ರೈತರ ಸಂಖ್ಯೆ ಎಷ್ಟು ; (ಜಿಲ್ಲಾವಾರು/ವರ್ಷವಾರು ವಿವರ ನೀಡುವುದು)

(ಆ) ಆತ್ಮಹತ್ಯೆ ಮಾಡಿಕೊಂಡ ಎಷ್ಟು ರೈತ ಕುಟುಂಬಗಳಿಗೆ ಪರಿಹಾರ ಧನ ನೀಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ರೈತರ ಆತ್ಮಹತ್ಯೆ ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ರೂಪಿಸಿರುವ ಯೋಜನೆಗಳು ಯಾವುವು ;

(ಈ) ಆತ್ಮಹತ್ಯೆ ಪ್ರಮಾಣ ಹೆಚ್ಚಳವಾಗಿರುವುದು ಸರ್ಕಾರದ ಯೋಜನೆಗಳು ವಿಫಲವಾಗಿರುವುದರ ಸಂಕೇತವೇ ; ಇದನ್ನು ಸರ್ಕಾರ ಯಾವ ರೀತಿ ವಿಮರ್ಶಿಸುತ್ತದೆ ?

## ಬೆಂಬಲ ಬೆಲೆ ಯೋಜನೆಯಡಿ ಖರೀದಿಸಿರುವ ಆಹಾರ ಧಾನ್ಯಗಳು ಹಣ ಬಾಕಿ ಇರುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೩೩ (೯೯೬) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಿಂದ ರಾಜ್ಯ ಸರ್ಕಾರ ಕೇಂದ್ರ ಸರ್ಕಾರದ ಕನಿಷ್ಠ ಬೆಂಬಲ ಬೆಲೆ (ಎಂ.ಎಸ್.ಪಿ) ಯೋಜನೆಯಡಿ ರೈತರಿಂದ ಯಾವ ಧಾನ್ಯಗಳನ್ನು ಎಷ್ಟು ಪ್ರಮಾಣದಲ್ಲಿ ಖರೀದಿಸಲಾಗಿತ್ತು ; (ಜಿಲ್ಲಾವಾರು ವಿವರ ನೀಡುವುದು)

(ಆ) ರೈತರಿಂದ ಖರೀದಿಸಿದ ಧಾನ್ಯಗಳ ಬೆಂಬಲ ಬೆಲೆಯನ್ನು ಸರ್ಕಾರ ಪೂರ್ಣ ಪ್ರಮಾಣದಲ್ಲಿ ಪಾವತಿ ಮಾಡಿದೆಯೇ ; ಎಷ್ಟು ರೈತರಿಗೆ ಬಾಕಿ ಪಾವತಿ ಆಗಿಲ್ಲ ; ಇದರ ಒಟ್ಟು ಮೊತ್ತ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಬಾಕಿ ಪಾವತಿ ಆಗದಿರಲು ಕಾರಣಗಳೇನು ; ಯಾವ ಕಾಲಮಿತಿಯೊಳಗೆ ಬಾಕಿ ಹಣವನ್ನು ಸರ್ಕಾರ ಪಾವತಿ ಮಾಡಲಿದೆ?

## ಕಳೆದ ೩ ವರ್ಷದಿಂದ ವಿವಿಧ ವಸತಿ ಯೋಜನೆಯಲ್ಲಿ ಹಂಚಿಕೆ ಮಾಡಿರುವ ಮನೆಗಳ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೩೪ (೯೯೭) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷದಿಂದ ರಾಜ್ಯದಲ್ಲಿ ವಿವಿಧ ವಸತಿ ಯೋಜನೆಗಳಡಿ ಗ್ರಾಮೀಣ ಮತ್ತು ನಗರ ಪ್ರದೇಶಗಳಿಗೆ ಹಂಚಿಕೆ ಮಾಡಿರುವ ಹೊಸ ಮನೆಗಳೆಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಚಿಕ್ಕಮಗಳೂರು ವಿಧಾನಸಭಾ ಕ್ಷೇತ್ರದಲ್ಲಿ ವಿವಿಧ ವಸತಿ ಯೋಜನೆಗಳಡಿ ಎಷ್ಟು ಮನೆಗಳನ್ನು ಹೊಸದಾಗಿ ಮಂಜೂರು ಮಾಡಲಾಗಿದೆ; (ಪಂಚಾಯಿತಿವಾರು ವಿವರ ನೀಡುವುದು)

(ಇ) ಮಂಜೂರು ಮಾಡಿರುವ ಮನೆಗಳ ಪೈಕಿ ಎಷ್ಟು ಮನೆಗಳ ಪೂರ್ಣಗೊಂಡಿವೆ; ಎಷ್ಟು ಮನೆಗಳ ಕಾಮಗಾರಿಗಳು ಪ್ರಗತಿಯಲ್ಲಿವೆ; (ಪಂಚಾಯಿತಿವಾರು ವಿವರ ನೀಡುವುದು)

(ಈ) ೨೦೨೧-೨೨ನೇ ಸಾಲಿನಲ್ಲಿ ಮಂಜೂರಾಗಿರುವ ಮನೆಗಳು ಪೂರ್ಣಗೊಂಡಿವೆಯೇ; ಈವರೆಗೆ ಫಲಾನುಭವಿಗಳಿಗೆ ಅನುದಾನ ಬಿಡುಗಡೆ ಆಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಹಣ ಬಿಡುಗಡೆ ಆಗದೇ ಇರಲು ಕಾರಣಗಳೇನು; ಯಾವ ಕಾಲಮಿತಿಯೊಳಗೆ ಹಣ ಬಿಡುಗಡೆ ಮಾಡಲಾಗುವುದು?

## ಚಿಕ್ಕಮಗಳೂರು ನಗರಸಭೆ ವ್ಯಾಪ್ತಿಯಲ್ಲಿ ಜಿ+೨ ಮನೆಗಳ ಕಾಮಗಾರಿ ನಿಧಾನಗತಿಯಲ್ಲಿ ಸಾಗಿರುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೩೫ (೯೯೮) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ನಗರಸಭೆಯ ವ್ಯಾಪ್ತಿಯಲ್ಲಿ ವಸತಿ ರಹಿತರಿಗೆ ಜಿ+೨ ಮನೆಗಳನ್ನು ನಿರ್ಮಿಸಲು ಮಂಜೂರಾತಿ ನೀಡಿದ್ದು ಯಾವಾಗ; ಮನೆಗಳ ನಿರ್ಮಾಣ ಕಾಮಗಾರಿ ಆರಂಭಗೊಂಡಿದ್ದು ಯಾವಾಗ;

(ಆ) ಈ ಮನೆಗಳು ಯಾವಾಗ ಪೂರ್ಣಗೊಳ್ಳಬೇಕಿತ್ತು; ಈವರೆಗೆ ಎಷ್ಟು ಮನೆಗಳು ಪೂರ್ಣಗೊಂಡಿವೆ ;

(ಇ) ಕಾಮಗಾರಿಯು ನಿಧಾನಗತಿಯಲ್ಲಿ ಸಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ನಿಧಾನಗತಿಯಲ್ಲಿ ಸಾಗುತ್ತಿರುವುದಕ್ಕೆ ಕಾರಣಗಳೇನು ;

(ಈ) ಮನೆಗಳ ಕಾಮಗಾರಿಯನ್ನು ಯಾವಾಗ ಪೂರ್ಣಗೊಳಿಸಲಾಗುವುದು ?

## ಪೌರಕಾರ್ಮಿಕರ ಮಕ್ಕಳ ಶಿಕ್ಷಣ ಹಾಗೂ ಉದ್ಯೋಗ ಸೌಲಭ್ಯಗಳ ಕುರಿತು

**ಶ್ರೀ ಶಿವಣ್ಣ ಬಿ.ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೯೩೬ (೯೮೦) ಮಾನ್ಯ ಪೌರಾಡಳಿತ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪೌರಕಾರ್ಮಿಕರ (ಖಾಯಂ, ನೇರ ಪಾವತಿ, ಗುತ್ತಿಗೆ/ಹೊರಗುತ್ತಿಗೆ) ಮಕ್ಕಳಿಗೆ ಉನ್ನತ ಹಾಗೂ ವೃತ್ತಿಪರ ಶಿಕ್ಷಣವನ್ನು ಉಚಿತವಾಗಿ ನೀಡುವ ಯೋಜನೆ ಸರ್ಕಾರದ ಮುಂದಿದೆಯೇ ;

(ಆ) ಪ್ರಸ್ತುತ ಈ ಮಕ್ಕಳ ಶೈಕ್ಷಣಿಕ ನೆರವಿಗಾಗಿ (ವಿದ್ಯಾರ್ಥಿವೇತನ, ವಸತಿ ನಿಲಯ ಇತ್ಯಾದಿ) ಇರುವ ಯೋಜನೆಗಳಾವುವು ; ಕಳೆದ ಮೂರು ವರ್ಷಗಳಲ್ಲಿ ಇದರಿಂದ ಲಭ್ಯವಾದ ಫಲಾನುಭವಿಗಳ ಜಿಲ್ಲಾವಾರು ವಿವರ ನೀಡುವುದು ;

(ಇ) ಶೈಕ್ಷಣಿಕ ಪ್ರವೇಶಾತಿ ಹಾಗೂ ಸರ್ಕಾರಿ ಉದ್ಯೋಗ ನೇಮಕಾತಿಯಲ್ಲಿ ಪೌರಕಾರ್ಮಿಕರ ಮಕ್ಕಳಿಗೆ ಪ್ರತ್ಯೇಕ ಮೀಸಲಾತಿ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಈ) ಈ ಕುರಿತು ಪೌರಕಾರ್ಮಿಕರ ಕಲ್ಯಾಣ ಮಂಡಳಿ ಅಥವಾ ಸರ್ಕಾರ ಕೈಗೊಂಡಿರುವ ನಿರ್ಧಾರ ಹಾಗೂ ಹೊಸ ಕ್ರಮಗಳೇನು ?

## ಸಹಕಾರ ಸಂಘಗಳ ಮೂಲಕ ಪೌರಕಾರ್ಮಿಕರಿಗೆ ಕಡಿಮೆ ಬಡ್ಡಿದರದಲ್ಲಿ ಸಾಲ ಹಾಗೂ ಬಡ್ಡಿ ಮನ್ನಾ ಮಾಡುವ ಕುರಿತು

**ಶ್ರೀ ಶಿವಣ್ಣ ಬಿ.ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೯೩೭ (೯೮೧) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ವಿವಿಧ ಸಹಕಾರ ಸಂಘಗಳು/ಬ್ಯಾಂಕ್‌ಗಳ ಮೂಲಕ ಪೌರಕಾರ್ಮಿಕರಿಗೆ (ಖಾಯಂ, ನೇರ ಪಾವತಿ ಹಾಗೂ ಗುತ್ತಿಗೆ/ಹೊರಗುತ್ತಿಗೆ) ಕಡಿಮೆ ಬಡ್ಡಿದರದಲ್ಲಿ ಅಥವಾ ಶೂನ್ಯ ಬಡ್ಡಿದರದಲ್ಲಿ ಸಾಲ ಸೌಲಭ್ಯ ನೀಡುವ ಯಾವುದೇ ವಿಶೇಷ ಯೋಜನೆ ಸರ್ಕಾರದ ಮುಂದಿದೆಯೇ ;

(ಆ) ಹಾಗಿದ್ದಲ್ಲಿ, ಪೌರಕಾರ್ಮಿಕರಿಗಾಗಿ ಇಂತಹ ನೂತನ ಸಾಲ ಯೋಜನೆಯನ್ನು ರೂಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ಮತ್ತು ಇದಕ್ಕೆ ಅರ್ಹರಾಗುವ ಫಲಾನುಭವಿಗಳ ಮಾನದಂಡಗಳೇನು ;

(ಇ) ರಾಜ್ಯದ ವಿವಿಧ ಸಹಕಾರ ಸಂಘಗಳಿಂದ ಈಗಾಗಲೇ ಸಾಲ ಪಡೆದು ಸಂಕಷ್ಟದಲ್ಲಿರುವ ಪೌರಕಾರ್ಮಿಕರ ಸಾಲದ ಮೇಲಿನ ಬಡ್ಡಿಯನ್ನು ಮನ್ನಾ (Interest Waiver) ಮಾಡುವ ಅಥವಾ ರಿಯಾಯಿತಿ ನೀಡುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆಯೇ ;

(ಈ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದ ವಿವಿಧ ಸಹಕಾರ ಸಂಘಗಳಿಂದ ಎಷ್ಟು ಮಂದಿ ಪೌರಕಾರ್ಮಿಕರಿಗೆ ಎಷ್ಟು ಮೊತ್ತದ ಸಾಲ ವಿತರಿಸಲಾಗಿದೆ ? (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

## ರಾಜ್ಯದಲ್ಲಿ ಜಾರಿಯಲ್ಲಿರುವ ಹಾಗೂ ನೂತನ ವಸತಿ ಯೋಜನೆಗಳು ಮತ್ತು ಸಬ್ಸಿಡಿ ಮನೆಗಳ ಹಂಚಿಕೆ ಕುರಿತು

**ಶ್ರೀ ಶಿವಣ್ಣ ಬಿ.ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೯೩೮ (೯೮೨) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಪ್ರಸ್ತುತ ಚಾಲ್ತಿಯಲ್ಲಿರುವ ವಸತಿ ಯೋಜನೆಗಳು ಯಾವುವು ; ಈ ಯೋಜನೆಗಳಡಿ ನಿರ್ಮಿಸಲಾದ ಹಾಗೂ ಹಂಚಿಕೆಯಾದ ಮನೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮತ್ತು ಯೋಜನೆವಾರು ವಿವರ ನೀಡುವುದು)

(ಆ) ರಾಜ್ಯದ ಬಡವರು, ಕಾರ್ಮಿಕರು ಹಾಗೂ ಮಧ್ಯಮ ವರ್ಗದವರಿಗೆ ಸಬ್ಸಿಡಿ (ರಿಯಾಯಿತಿ) ದರದಲ್ಲಿ ಮನೆಗಳನ್ನು ನಿರ್ಮಿಸಿ ಹಂಚಿಕೆ ಮಾಡುವ ಯಾವುದೇ ನೂತನ ಯೋಜನೆಗಳು ಸರ್ಕಾರದ ಮುಂದಿವೆಯೇ ;

(ಇ) ಹಾಗಿದ್ದಲ್ಲಿ, ಈ ನೂತನ ಯೋಜನೆಗಳಿಗೆ ಫಲಾನುಭವಿಗಳನ್ನು ಆಯ್ಕೆ ಮಾಡಲು ನಿಗದಿಪಡಿಸಿರುವ ಮಾನದಂಡಗಳೇನು ಮತ್ತು ಎಷ್ಟು ಸಬ್ಸಿಡಿ ಮೊತ್ತವನ್ನು ನೀಡಲು ಉದ್ದೇಶಿಸಲಾಗಿದೆ ;

(ಈ) ರಾಜ್ಯದಲ್ಲಿ ಸ್ವಂತ ಮನೆಯಿಲ್ಲದ ವಸತಿ ರಹಿತರಿಗೆ ಹಾಗೂ ನಿವೇಶನ ರಹಿತರಿಗೆ ಆದ್ಯತೆಯ ಮೇರೆಗೆ ವಸತಿ ಸೌಕರ್ಯ ಕಲ್ಪಿಸಲು ಸರ್ಕಾರ ಕೈಗೊಂಡಿರುವ ಮುಂದಿನ ಕಾರ್ಯಯೋಜನೆಗಳೇನು ? (ಸಂಪೂರ್ಣ ವಿವರ ನೀಡುವುದು)

## ಪಿಎಂ ಕಿಸಾನ್ ಸಮ್ಮಾನ್ ನಿಧಿ ಯೋಜನೆಯಡಿ ಅರ್ಹ ರೈತರಿಗೆ ಅನುದಾನ ಜಮೆಯಾಗದಿರುವ ಕುರಿತು

**ಶ್ರೀ ಶಿವಣ್ಣ ಬಿ.ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೯೩೯ (೯೮೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತಾಂತ್ರಿಕ ಕಾರಣಗಳಿಂದಾಗಿ ರಾಜ್ಯದ ೬ ಲಕ್ಷಕ್ಕೂ ಅಧಿಕ ರೈತರು 'ಪಿಎಂ ಕಿಸಾನ್ ಸಮ್ಮಾನ್ ನಿಧಿ' ಯೋಜನೆಯ ಕಂತಿನ ಹಣದಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇ–ಕೆವೈಸಿ ಹಾಗೂ ಬ್ಯಾಂಕ್ ಖಾತೆಗೆ ಆಧಾರ್ ಲಿಂಕ್ ಆಗದಿರುವುದರಿಂದ ಅನುದಾನ ತಡೆಯಾಗಿದ್ದು, ರೈತರಲ್ಲಿ ಜಾಗೃತಿ ಮೂಡಿಸಲು ಕೃಷಿ ಇಲಾಖೆ ಕೈಗೊಂಡಿರುವ ಕ್ರಮಗಳೇನು ;

(ಇ) ರಾಜ್ಯದಲ್ಲಿಯೇ ಅತ್ಯಧಿಕವಾಗಿ ಬೆಳಗಾವಿ ಹಾಗೂ ತುಮಕೂರು ಜಿಲ್ಲೆಗಳಲ್ಲಿ ರೈತರು ಹಣದಿಂದ ವಂಚಿತರಾಗಿದ್ದು, ಈ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಸರ್ಕಾರ ಕಾಲಮಿತಿ ನಿಗದಿಪಡಿಸಿದೆಯೇ ;

(ಈ) ವಂಚಿತರಾಗಿರುವ ರೈತರ ಬ್ಯಾಂಕ್ ಖಾತೆಗಳಿಗೆ ತಕ್ಷಣವೇ ಹಣ ಜಮೆಯಾಗಲು ತಾಲ್ಲೂಕು ಮತ್ತು ಗ್ರಾಮ ಮಟ್ಟದಲ್ಲಿ ಹಮ್ಮಿಕೊಂಡಿರುವ ವಿಶೇಷ ಅಭಿಯಾನಗಳಾವುವು ? (ವಿವರ ನೀಡುವುದು)

# ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಕಾರ್ಯಾಚರಣೆ ಒಪ್ಪಂದ ಮತ್ತು ಕರಾರಿನ ಬಗ್ಗೆ

**ಶ್ರೀ ಶಿವಕುಮಾರ್ ಕೆ. (ನಾಮನಿರ್ದೇಶನ ಹೊಂದಿದವದರು) :–**

೯೪೦ (೧೦೨೨) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನ ದೇವನಹಳ್ಳಿಯಲ್ಲಿರುವ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣವು (KIA) ಅಧಿಕೃತವಾಗಿ ಕಾರ್ಯಾಚರಣೆ ಪ್ರಾರಂಭಿಸಿದ ದಿನಾಂಕ ಯಾವುದು ; ಪ್ರಸ್ತುತ ಈ ವಿಮಾನ ನಿಲ್ದಾಣವು ಒಟ್ಟು ಎಷ್ಟು ಎಕರೆ/ವಿಸ್ತೀರ್ಣದಲ್ಲಿ ಹರಡಿಕೊಂಡಿದೆ ;

(ಆ) ಈ ವಿಮಾನ ನಿಲ್ದಾಣದ ನಿರ್ಮಾಣ ಮತ್ತು ಕಾರ್ಯಾಚರಣೆಗಾಗಿ ಕರ್ನಾಟಕ ಸರ್ಕಾರ ಹಾಗೂ ಬೆಂಗಳೂರು ಇಂಟರ್‌ನ್ಯಾಷನಲ್ ಏರ್‌ಪೋರ್ಟ್ ಲಿಮಿಟೆಡ್ (BIAL) ಮಧ್ಯೆ ಆಗಿರುವ ರಿಯಾಯಿತಿ ಒಪ್ಪಂದ (Concession Agreement) ಮತ್ತು ಭೂ ಗುತ್ತಿಗೆ ಒಪ್ಪಂದದ (Land Lease Agreement) ಪ್ರಮುಖ ಷರತ್ತುಗಳೇನು; (ಒಪ್ಪಂದದ ಪ್ರತಿ ಹಾಗೂ ಗುತ್ತಿಗೆ ಅವಧಿಯ ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ (೨೦೨೩–೨೪, ೨೦೨೪–೨೫ ಹಾಗೂ ೨೦೨೫–೨೬) ಈ ವಿಮಾನ ನಿಲ್ದಾಣದಿಂದ ಪ್ರಯಾಣಿಸಿದ ಒಟ್ಟು ಪ್ರಯಾಣಿಕರ ಸಂಖ್ಯೆ ಎಷ್ಟು ; ಕಾರ್ಯಾಚರಣೆ ನಡೆಸಿದ ಒಟ್ಟು ವಿಮಾನಗಳ ಸಂಖ್ಯೆ ಎಷ್ಟು ; (ವರ್ಷವಾರು, ದೇಶಿಯ ಮತ್ತು ಅಂತರರಾಷ್ಟ್ರೀಯ ಪ್ರಯಾಣಿಕರ/ ವಿಮಾನಗಳ ಪ್ರತ್ಯೇಕ ವಿವರ ನೀಡುವುದು)

(ಈ) ಕಳೆದ ಮೂರು ವರ್ಷಗಳಲ್ಲಿ BIAL ಗಳಿಸಿದ ಒಟ್ಟು ಆದಾಯ ಮತ್ತು ನಿವ್ವಳ ಲಾಭ ವೆಷ್ಟು; (ವರ್ಷವಾರು ಸಂಪೂರ್ಣ ಹಣಕಾಸು ವಿವರ ನೀಡುವುದು)

(ಉ) BIAL ಕಂಪನಿಯಲ್ಲಿ ಕರ್ನಾಟಕ ಸರ್ಕಾರದ (KSIIDC ಮೂಲಕ) ಶೇ. ೧೩ ರಷ್ಟು ಈಕ್ವಿಟಿ ಷೇರು ಬಂಡವಾಳವಿದ್ದು, ಕಳೆದ ಮೂರು ವರ್ಷಗಳಲ್ಲಿ ಡಿವಿಡೆಂಡ್ (Dividends) ಅಥವಾ ಲಾಭದ ಪಾಲಿನ ರೂಪದಲ್ಲಿ ರಾಜ್ಯ ಸರ್ಕಾರಕ್ಕೆ ಸಂದಾಯವಾದ ಒಟ್ಟು ಮೊತ್ತವೆಷ್ಟು, (ವರ್ಷವಾರು ಇವರ ನೀಡುವುದು)

(ಊ) ವಿಮಾನ ನಿಲ್ದಾಣದ ಎರಡನೇ ಹಂತದ ವಿಸ್ತರಣೆ (Terminal-2) ಹಾಗೂ ಹೆಚ್ಚುವರಿ ರನ್‌ವೇ ಯೋಜನೆಗಳಿಗಾಗಿ ಸರ್ಕಾರ ನೀಡಿರುವ ಹೆಚ್ಚುವರಿ ಜಮೀನು ಮತ್ತು ಮೂಲಸೌಕರ್ಯ ಬೆಂಬಲದ ವಿವರಗಳೇನು ?

## ರಾಜ್ಯದಲ್ಲಿರುವ ಅಲ್ಪಸಂಖ್ಯಾತರ ಮುಸಲ್ಮಾನರ ಶೈಕ್ಷಣಿಕ ಮತ್ತು ಸಾಮಾಜಿಕ ಸ್ಥಿತಿಗತಿಗಳ ಬಗ್ಗೆ

**ಶ್ರೀ ಶಿವಕುಮಾರ್ ಕೆ. (ನಾಮನಿರ್ದೇಶನ ಹೊಂದಿದವರು) :–**

೯೪೧ (೧೦೨೩) ಮಾನ್ಯ ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೧೯೯೫, ೨೦೦೦ ಮತ್ತು ೨೦೨೫ರ ಅಂದಾಜಿನ ಪ್ರಕಾರ ಮುಸಲ್ಮಾನ ಅಲ್ಪಸಂಖ್ಯಾತರ ಜನಸಂಖ್ಯೆ ಮತ್ತು ಅಕ್ಷರಸ್ಥರ (Literacy Rate) ಪ್ರಮಾಣ ಎಷ್ಟು; (ವರ್ಷವಾರು ವಿವರ ನೀಡುವುದು)

(ಆ) ಈ ಸಮುದಾಯದಲ್ಲಿ ಶಾಲಾ ಶಿಕ್ಷಣ (Primary & Secondary) ಮತ್ತು ಉನ್ನತ ಶಿಕ್ಷಣವನ್ನು (Higher Education) ಪೂರೈಸಿದವರ ಶೇಕಡವಾರು ಪ್ರಮಾಣ ಎಷ್ಟು; ಸಮುದಾಯವು ಶೈಕ್ಷಣಿಕವಾಗಿ ಹಿಂದುಳಿಯಲು ಪ್ರಮುಖ ಕಾರಣಗಳೇನು; ಇದರಲ್ಲಿ ಎಷ್ಟು ಸ್ಪರ್ಧಾತ್ಮಕ ಪರೀಕ್ಷಾ ಅಭ್ಯರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡಲಾಗಿದೆ ;

(ಇ) ಮುಸಲ್ಮಾನರ ಸ್ಥಿತಿಗತಿ ಸುಧಾರಿಸಲು ರಚಿಸಲಾಗಿದ್ದ ರಾಜೇಂದ್ರ ಸಚಾರ್ ಸಮಿತಿ, ರೆಹಮಾನ್ ಖಾನ್ ಸಮಿತಿ ಮತ್ತು ಅಜಿತ್ ಸೇರ್ ಸಮಿತಿಗಳ ವರದಿಯಲ್ಲಿನ ಪ್ರಮುಖ ಶಿಫಾರಸುಗಳೇನು ; ಈ ಶಿಫಾರಸ್ಸುಗಳನ್ನು ಜಾರಿಗೆ ತರಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಇವರನ್ನು ಸಾಮಾಜಿಕವಾಗಿ ಮತ್ತು ಶೈಕ್ಷಣಿಕವಾಗಿ ಮುಖ್ಯವಾಹಿನಿಗೆ ತರಲು ಕಳೆದ ಮೂರು ವರ್ಷಗಳಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಹಂಚಿಕೆಯಾದ ಅನುದಾನ ಮತ್ತು ವ್ಯಯಿಸಲಾದ ಮೊತ್ತ ಎಷ್ಟು ಹೊಸದಾಗಿ ರೂಪಿಸಲಾದ ಯೋಜನೆಗಳಾವುವು; ಎಷ್ಟು ಹಾಸ್ಟೆಲ್‌ಗಳನ್ನು ಕಟ್ಟಲಾಗಿದೆ ಮತ್ತು ಅದರಲ್ಲಿನ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು? (ಜಿಲ್ಲಾವಾರು ವಿವರಣೆ ನೀಡುವುದು)

## ರಾಜ್ಯದಲ್ಲಿರುವ ಕೊಳಚೆ ಪ್ರದೇಶಗಳು ಹಾಗೂ ವಸತಿ ರಹಿತರಿಗೆ ಮನೆ ನೀಡುವ ಬಗ್ಗೆ

**ಶ್ರೀ ಶಿವಕುಮಾರ್ ಕೆ. (ನಾಮನಿರ್ದೇಶನ ಹೊಂದಿದವರು) :–**

೯೪೨ (೧೦೨೪) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ಲಭ್ಯವಿರುವ ಮಾಹಿತಿ ಪ್ರಕಾರ ಒಟ್ಟು ಎಷ್ಟು ಕೊಳಚೆ (ಸ್ಲಂ ಪ್ರದೇಶಗಳನ್ನು ಗುರುತಿಸಲಾಗಿದೆ ; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಪೂರ್ಣ ಮಾಹಿತಿ ನೀಡುವುದು)

(ಆ) ಗುರುತಿಸಲಾಗಿರುವ ಈ ಕೊಳಚೆ ಪ್ರದೇಶಗಳು ಪ್ರಸ್ತುತ ಎಷ್ಟು ವರ್ಷಗಳಿಂದ ಅಧಿಕೃತವಾಗಿ ಕೊಳಚೆ ಪ್ರದೇಶಗಳ ಪಟ್ಟಿಯಲ್ಲಿಯೇ ಉಳಿದುಕೊಂಡಿವೆ ; (ವರ್ಷವಾರು ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ಈ ಕೊಳಚೆ ಪ್ರದೇಶಗಳಲ್ಲಿ ವಾಸಿಸುತ್ತಿರುವ ವಸತಿ ಹೀನರಿಗೆ ಸರ್ಕಾರದಿಂದ ವಸತಿ ಸೌಲಭ್ಯ ಒದಗಿಸಲು ಯಾವ ಯಾವ ಯೋಜನೆಗಳಡಿ ಒಟ್ಟು ಎಷ್ಟು ಮನೆಗಳನ್ನು ನಿರ್ಮಿಸಲು ಮಂಜೂರಾತಿ ನೀಡಲಾಗಿದೆ ಹಾಗೂ ಪ್ರಸ್ತುತ ಎಷ್ಟು ಮನೆಗಳ ನಿರ್ಮಾಣ ಕಾರ್ಯ ಪೂರ್ಣಗೊಂಡು ಫಲಾನುಭವಿಗಳಿಗೆ ಹಂಚಿಕೆ ಮಾಡಲಾಗಿದೆಯೇ ;

(ಈ) ಕೊಳಚೆ ಪ್ರದೇಶದಲ್ಲಿ ಮನೆಗಳನ್ನು ನಿರ್ಮಿಸಿ, ಫಲಾನುಭವಿಗಳಿಗೆ ಹಂಚಿಕೆ ಮಾಡಿದ ತರುವಾಯವೂ ರಾಜ್ಯದಲ್ಲಿ ಪ್ರಸ್ತುತ ಇನ್ನು ಎಷ್ಟು ಕೊಳಚೆ ಪ್ರದೇಶಗಳು ಅಭಿವೃದ್ಧಿಯಾಗದೆ/ ಪರಿಹಾರ ಕಾಣದೆ ಬಾಕಿ ಉಳಿದಿವೆ ;

(ಉ) ಬಾಕಿ ಉಳಿದಿರುವ ಕೊಳಚೆ ಪ್ರದೇಶಗಳಲ್ಲಿರುವ ವಸತಿರಹಿತರಿಗೆ ಪೂರ್ಣ ಪ್ರಮಾಣದಲ್ಲಿ ಮನೆಗಳನ್ನು ನಿರ್ಮಿಸಿ ಕೊಡಲು ಸರ್ಕಾರದ ಬಳಿ ಇರುವ ಕಾಲಬದ್ಧ ಯೋಜನೆ ಅಥವಾ ಕ್ರಿಯಾ ಯೋಜನೆ ಏನು ? (ಸಂಪೂರ್ಣ ವಿವರ ನೀಡುವುದು)

# ಬೆಂಗಳೂರಿನ ದಿ.ಮಲ್ಲೇಶ್ವರಂ ಅಸೋಸಿಯೇಷನ್ (ರಿ) ಸಂಘದ ಆಡಳಿತದ ಬಗ್ಗೆ

**ಶ್ರೀ ಶಿವಕುಮಾರ್ ಕೆ. (ನಾಮನಿರ್ದೇಶನ ಹೊಂದಿದವರು) :–**

೯೪೩ (೧೦೨೫) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸಂಘಗಳ ಕಾಯ್ದೆ ಅಡಿಯಲ್ಲಿ ನೋಂದಾವಣೆ ಆಗಿರುವ ಬೆಂಗಳೂರಿನ ದಿ.ಮಲ್ಲೇಶ್ವರಂ ಅಸೋಸಿಯೇಷನ್ (ರಿ) ಮಲ್ಲೇಶ್ವರಂ ಸಂಘದ ಆಡಳಿತ ಮಂಡಳಿಗೆ ಯಾವಾಗ ಚುನಾವಣೆ ನಡೆದಿರುತ್ತದೆ ; (ಆಡಳಿತ ಮಂಡಳಿಯ ವಿವರಗಳನ್ನು ಒದಗಿಸುವುದು)

(ಆ) ಕಳೆದ ೩ ವರ್ಷಗಳಲ್ಲಿ ಬೆಂಗಳೂರಿನ ದಿ. ಮಲ್ಲೇಶ್ವರಂ ಅಸೋಸಿಯೇಷನ್ (ರಿ) ಸಂಘಕ್ಕೆ ಸರ್ಕಾರ ಆಡಳಿತಾಧಿಕಾರಿ ನೇಮಿಸಿತ್ತೇ; ಆಡಳಿತ ಅಧಿಕಾರಿಗಳು ಅಥವಾ ಸಹಕಾರ ಇಲಾಖೆ ಅಧಿಕಾರಿಗಳು ಸಂಘದಲ್ಲಿ ನಡೆದಿರುವ ಅವ್ಯವಹಾರಗಳ ಆರೋಪ ಕುರಿತು ತನಿಖಾ ವರದಿಯನ್ನು ನೀಡಿದ್ದಾರೆಯೇ ; ನೀಡಿದ್ದಲ್ಲಿ, ಅದರ ವಿವರಗಳನ್ನು ಒದಗಿಸುವುದು ;

(ಇ) ಬೆಂಗಳೂರಿನ ದಿ.ಮಲ್ಲೇಶ್ವರಂ ಅಸೋಸಿಯೇಷನ್ (ರಿ) ಇದರ ಗೌರವ ಕಾರ್ಯದರ್ಶಿಗಳು ಆಡಳಿತ ಮಂಡಳಿಯ ನಿರ್ಣಯಗಳಿಗೆ ಆಡಳಿತ ಮಂಡಳಿಯ ಸದಸ್ಯರ ಸಹಿ ಪಡೆಯದೇ ತಾವೇ ನಿರ್ಣಯಗಳನ್ನು ಬರೆದುಕೊಂಡು, ನಿರ್ಣಯಗಳನ್ನು ತಿರುಚಿರುವ ಕುರಿತು ಆರೋಪಗಳು ಬಂದಿದೆಯೇ ; ಬಂದಿದ್ದಲ್ಲಿ, ಇವರ ಮೇಲೆ ಏನು ಕ್ರಮ ಕೈಗೊಳ್ಳಲಾಗಿದೆ;

(ಈ) ಬೆಂಗಳೂರಿನ ದಿ. ಮಲ್ಲೇಶ್ವರಂ ಅಸೋಸಿಯೇಷನ್ (ರಿ) ಹೊಸ ಆಡಳಿತ ಮಂಡಳಿ ಬಂದ ನಂತರ ಸಂಘದ ಎಷ್ಟು ಸದಸ್ಯರನ್ನು ಯಾವ ಯಾವ ಕಾರಣಕ್ಕೆ ಅಮಾನತ್ತುಗೊಳಿಸಲಾಗಿದೆ ;

(ಉ) ಗೌರವ ಕಾರ್ಯದರ್ಶಿಗಳು ತಮ್ಮ ವೈಯಕ್ತಿಕ ಹಿತಾಸಕ್ತಿಗೆ ಅನುಗುಣವಾಗಿ ಸದಸ್ಯರ ಮೇಲೆ ಕ್ರಮ ಕೈಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇವರ ಅಧಿಕಾರ ದುರುಪಯೋಗದ ಮತ್ತು ಹಣ ದುರುಪಯೋಗದ ಮೇಲೆ ಎಷ್ಟು ದೂರು ಬಂದಿರುತ್ತದೆ ; ದೂರುಗಳ ಮೇಲೆ ಏನು ಕ್ರಮ ಕೈಗೊಳ್ಳಲಾಗಿದೆ ?

## ಕೇಂದ್ರ ಸರ್ಕಾರದ "ಸರ್ವರಿಗೂ ಸೂರು ಯೋಜನೆ" ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–**

೯೪೪ (೧೦೬೮) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗದಗ ಬೆಟಗೇರಿ ನಗರದಲ್ಲಿ ಕೇಂದ್ರ ಸರ್ಕಾರದ ಸರ್ವರಿಗೂ ಸೂರು ಯೋಜನೆಯಡಿ ಎಷ್ಟು ಮನೆಗಳ ನಿರ್ಮಾಣ ಮಾಡಲಾಗುತ್ತಿದೆ ಹಾಗೂ ಯಾವ ದಿನಾಂಕದಂದು ಕಾಮಗಾರಿ ಪ್ರಾರಂಭವಾಗಿದೆ ಮತ್ತು ಈ ಯೋಜನೆ ಪೂರ್ಣಗೊಳಿಸಲು ನಿಗದಿಯಾದ ಅವಧಿ ಎಷ್ಟು ; (ವಿವರವಾದ ಮಾಹಿತಿ ನೀಡುವುದು)

(ಆ) ಈ ಯೋಜನೆಯಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಹಣಕಾಸಿನ ಪಾಲು ಎಷ್ಟು ಮತ್ತು ಅದಕ್ಕಾಗಿ ಇಲ್ಲಿಯವರೆಗೆ ಬಿಡುಗಡೆಯಾದ ಅನುದಾನ ಎಷ್ಟು ; (ವಿವರವಾದ ಮಾಹಿತಿ ನೀಡುವುದು)

(ಇ) ಈ ಯೋಜನೆಯಡಿ ಲಾಭ ಪಡೆಯಲು ಎಷ್ಟು ಜನರು ಅರ್ಜಿ ಸಲ್ಲಿಸಿದ್ದಾರೆ ಮತ್ತು ಎಷ್ಟು ಜನರಿಗೆ ಮನೆಗಳನ್ನು ಹಂಚಿಕೆ ಮಾಡಲಾಗಿದೆ ; (ಮಾಹಿತಿ ನೀಡುವುದು)

(ಈ) ಮನೆ ಹಂಚಿಕೆ ಮಾಡುವ ವಿಧಾನವೇನು; ಈ ಕುರಿತು ಮನೆ ಹಂಚಿಕೆ ಆಗಿದ್ದಲ್ಲಿ ಯಾವ ವಿಧಾನದ ಅಡಿ ಯಾರು ಹಂಚಿಕೆ ಮಾಡಿದ್ದಾರೆ ? (ಸಂಪೂರ್ಣ ದಾಖಲೆ ಒದಗಿಸುವುದು)

## ರೈತರ ಉತ್ಪನ್ನಗಳಿಗೆ ಉತ್ತಮವಾದ ಬೆಲೆ ನಿಗಧಿ ಪಡಿಸುವ ಕುರಿತು

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೯೪೫ (೧೦೭೦) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಅತಿವೃಷ್ಠಿ, ಅನಾವೃಷ್ಠಿ, ಆಲಿಕಲ್ಲು ಮಳೆ, ರೋಗ–ಕೀಟ ಬಾಧೆಯಿಂದ ತೋಟಗಾರಿಕೆ ಬೆಳೆಗಳಿಗೆ ಉಂಟಾದ ನಷ್ಟದ ಪ್ರಮಾಣ ಎಷ್ಟು ; ನಷ್ಟಕ್ಕೊಳಗಾದ ರೈತರಿಗೆ ಸರ್ಕಾರದಿಂದ ನೀಡಿರುವ ಪರಿಹಾರದ ಮೊತ್ತ ಎಷ್ಟು; ಇನ್ನೂ ಪರಿಹಾರ ಬಾಕಿ ಇದ್ದರೆ, ಅದನ್ನು ಯಾವ ಅವಧಿಯಲ್ಲಿ ಪಾವತಿಸಲಾಗುವುದು ;

(ಆ) ಟೋಮ್ಯಾಟೋ, ಈರುಳ್ಳಿ, ಆಲೂಗಡ್ಡೆ, ಹಣ್ಣು ಹೂವು ಸೇರಿದಂತೆ ಪ್ರಮುಖ ತೋಟಗಾರಿಕೆ ಉತ್ಪನ್ನಗಳಿಗೆ ಮಾರುಕಟ್ಟೆ ಬೆಲೆ ಕುಸಿದ ಸಂದರ್ಭದಲ್ಲಿ ರೈತರ ಹಿತ ಕಾಪಾಡಲು ಸರ್ಕಾರವು ಯಾವ ಶಾಶ್ವತ ಕ್ರಮಗಳನ್ನು ಕೈಗೊಂಡಿದೆ ;

(ಇ) ಕಳೆದ ಮೂರು ವರ್ಷಗಳಲ್ಲಿ ತೋಟಗಾರಿಕೆ ಬೆಳೆಗಳನ್ನು ಬೆಳೆಯುವ ರೈತರಿಗಾಗಿ ಬೆಳೆ ವಿಮೆ ಹಾಗೂ ಹವಾಮಾನ ಆಧಾರಿತ ರಕ್ಷಣಾ ಯೋಜನೆಗಳಡಿ ಎಷ್ಟು ರೈತರು ನೋಂದಾಯಿಸಿಕೊಂಡಿದ್ದಾರೆ ಮತ್ತು ಎಷ್ಟು ರೈತರಿಗೆ ಪರಿಹಾರ ನೀಡಲಾಗಿದೆ? (ಮಾಹಿತಿ ನೀಡುವುದು)

## ಬೆಳೆ ವಿಮೆ ಯೋಜನೆಯಡಿ ರೈತರಿಗೆ ನೀಡಿರುವ ಪರಿಹಾರದ ಕುರಿತು

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೯೪೬ (೧೦೬೯) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳೆ ವಿಮೆ ಯೋಜನೆಯಡಿ ಕಳೆದ ೩ ವರ್ಷಗಳಲ್ಲಿ ರೈತರಿಂದ ಎಷ್ಟು ಅರ್ಜಿಗಳು ಬಂದಿವೆ; ಎಷ್ಟು ರೈತರಿಗೆ ವಿಮಾ ಪರಿಹಾರ ಪಾವತಿಸಲಾಗಿದೆ ಮತ್ತು ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು;

(ಆ) ಬರ, ಅತಿವೃಷ್ಠಿ ಹಾಗೂ ಪ್ರವಾಹದಿಂದ ಬೆಳೆ ನಷ್ಟವಾಗಿರುವ ರೈತರಿಗೆ ಸರ್ಕಾರ ನೀಡಿರುವ ಪರಿಹಾರದ ಮೊತ್ತ ಎಷ್ಟು; ಇನ್ನೂ ಎಷ್ಟು ರೈತರಿಗೆ ಪರಿಹಾರ ಬಾಕಿಯಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ರೈತರಿಗೆ ಕನಿಷ್ಠ ಬೆಂಬಲ ಬೆಲೆ (MSP) ದೊರೆಯುವಂತೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; MSP ಗಿಂತ ಕಡಿಮೆ ದರದಲ್ಲಿ ಬೆಳೆ ಮಾರಾಟ ಮಾಡುತ್ತಿರುವ ರೈತರ ಸಮಸ್ಯೆ ಪರಿಹರಿಸಲು ಸರ್ಕಾರದ ಯೋಜನೆಗಳೇನು ;

(ಈ) ರಾಜ್ಯದಲ್ಲಿ ಕೃಷಿ ಉತ್ಪಾದನಾ ವೆಚ್ಚ ನಿರಂತರವಾಗಿ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ರೈತರ ಆದಾಯ ಕುಸಿಯದಂತೆ ಹಾಗೂ ಕೃಷಿಯನ್ನು ಲಾಭದಾಯಕ ವೃತ್ತಿಯನ್ನಾಗಿ ಮಾಡಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ;

(ಉ) ಕಳೆದ ಮೂರು ವರ್ಷಗಳಲ್ಲಿ ಈ ಉದ್ದೇಶಕ್ಕಾಗಿ ಮೀಸಲಿಟ್ಟ ಅನುದಾನ, ಬಿಡುಗಡೆಯಾದ ಅನುದಾನ ಮತ್ತು ವಾಸ್ತವವಾಗಿ ಖರ್ಚಾದ ಅನುದಾನದ ಮಾಹಿತಿಯನ್ನು ಜಿಲ್ಲಾವಾರು ನೀಡುವುದು ?

## ಹಣ್ಣು ಮತ್ತು ತರಕಾರಿಗಳಲ್ಲಿ ಅತಿಯಾದ ರಾಸಾಯನಿಕ ಪದಾರ್ಥಗಳನ್ನು ಬಳಕೆ ಮಾಡುತ್ತಿರುವ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೯೪೭ (೧೦೮೦) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಸರ್ಕಾರ Monitoring of Pesticide Residues at National Level (MPRNL) ಯೋಜನೆಯಡಿ ದೇಶದ ಎಲ್ಲಾ ರಾಜ್ಯಗಳಲ್ಲಿ ಹಣ್ಣು ಮತ್ತು ತರಕಾರಿಗಳಲ್ಲಿ ಅತಿಯಾದ ಕ್ರೀಮಿನಾಶಕಗಳ ಬಳಕೆಯ ಬಗ್ಗೆ ನೀಡಿದ ವರದಿಯಲ್ಲಿ ಕರ್ನಾಟಕದ ಸ್ಥಾನವೆಷ್ಟು ; (ಸಂಪೂರ್ಣ ಪಟ್ಟಿಯನ್ನು ಒದಗಿಸುವುದು)

(ಆ) ರಾಜ್ಯದಲ್ಲಿ ಎಷ್ಟು ಮಾದರಿಗಳನ್ನು ಪರೀಕ್ಷೆಗೆ ಒಳಪಡಿಸಲಾಗಿದೆ; ಇವುಗಳಲ್ಲಿ ಎಷ್ಟು ಮಾದರಿಗಳು ಅತ್ಯಂತ ವಿಷಕಾರಿ ಕ್ರಿಮಿನಾಶಕಗಳನ್ನು ಬಳಕೆ ಮಾಡಿವೆ ಎಂದು ತಿಳಿಸಲಾಗಿದೆ ಮತ್ತು ಅವು ಯಾವುವು ; (ಎಲ್ಲಾ ಮಾದರಿಗಳ ಸಂಪೂರ್ಣ ಮಾಹಿತಿಯನ್ನು ನೀಡುವುದು)

(ಇ) ರಾಜ್ಯದಲ್ಲಿ ಬೆಳಕಿಗೆ ಬಂದ ಆ ವಿಷಕಾರಿ ಮಾದರಿಗಳನ್ನು ಬೆಳೆದ ರೈತರಿಂದ ಆ ಕ್ರಿಮಿನಾಶಗಳ ಕಂಪನಿಗಳ ಮಾಹಿತಿಯನ್ನು ಸಂಗ್ರಹಿಸಲಾಗಿದೆಯೇ ; ಹೌದು ಎಂದಾದಲ್ಲಿ ಅವುಗಳ ಮಾಹಿತಿಯನ್ನು ನೀಡುವುದು ಹಾಗೂ ಅವುಗಳ ಮೇಲೆ ಕೈಗೊಂಡ ಕ್ರಮಗಳೇನು ; ಇಲ್ಲ ಎಂದಾದ್ದಲ್ಲಿ ಯಾವ ಕಾರಣಕ್ಕಾಗಿ ಅಂತಹ ಕಂಪನಿಗಳ ವಿರುದ್ಧ ಕ್ರಮ ಕೈಗೊಂಡಿರುವುದಿಲ್ಲ ?

## ಸಮುದ್ರ ಮೀನುಗಾರಿಕೆ ಮೀನುಗಾರರ ಸಮಸ್ಯೆ ಬಗ್ಗೆ

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೪೮ (೯೭೫) ಮಾನ್ಯ ಮುಜರಾಯಿ, ಮೀನುಗಾರಿಕೆ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮುದ್ರ ಮೀನುಗಾರಿಕಾ ಉದ್ಯಮ ರಾಜ್ಯದಲ್ಲಿದೆಯೇ ;

(ಆ) ರಾಜ್ಯದಲ್ಲಿರುವ ಸಮುದ್ರ ಮೀನುಗಾರರ ಕಾರ್ಮಿಕರ ಸಂಘಗಳೆಷ್ಟು ; (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಇ) ಸಮುದ್ರ ಮೀನುಗಾರಿಕಾ ಉದ್ಯಮದ ಕಾರ್ಮಿಕ ಸಂಘಗಳಿಗೆ ಸರ್ಕಾರದಿಂದ ನೀಡುವ ಸೌಲಭ್ಯಗಳೇನು;

(ಈ) ಇದುವರೆವಿಗೆ ಎಷ್ಟು ಜನ ಸಮುದ್ರ ಮೀನುಗಾರಿಕಾ ಉದ್ಯಮದಲ್ಲಿ ತೊಡಗಿರುವವರಿಗೆ ಕಾರ್ಮಿಕ ಕಾರ್ಡುಗಳನ್ನು ನೀಡಲಾಗಿದೆ ; (ಜಿಲ್ಲಾವಾರು ಅಂಕಿ ಅಂಶ ನೀಡುವುದು)

(ಉ) ಆಳ ಸಮುದ್ರ ಮೀನುಗಾರಿಕೆ ಸಮಯದಲ್ಲಿ ಅವಗಡ ಸಂಭವಿಸಿ ಮೃತಪಟ್ಟ ಮೀನುಗಾರನ ದೇಹ ಸಿಗದೆ ಇದ್ದಾಗ ಸರ್ಕಾರ

ಕೈಗೊಳ್ಳುವ ಪರಿಹಾರ ಕ್ರಮಗಳೇನು ; ಇವರ ಮರಣ ಪ್ರಮಾಣ ಪತ್ರ ನೀಡಲು ಇರುವ ಅಡೆತಡೆಗಳನ್ನು ಸರಿಪಡಿಸಲಾಗುವುದೆ ?

## ಕಲಬುರಗಿ ಜಿಲ್ಲೆಯಲ್ಲಿ ವಸತಿ ಇಲಾಖೆಯಿಂದ ಕೈಗೊಂಡ ಕ್ರಮಗಳು

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೪೯ (೯೭೭) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಕಲಬುರಗಿ ಜಿಲ್ಲೆಯಲ್ಲಿ ವಸತಿ ಇಲಾಖೆಯ (ರಾಜೀವ್ ಗಾಂಧಿ ವಸತಿ ನಿಗಮ, ಕರ್ನಾಟಕ ವಸತಿ ಮಂಡಳಿ KHB ಮತ್ತು ಕರ್ನಾಟಕ ಕೊಳಚೆ ಪ್ರದೇಶ ಅಭಿವೃದ್ಧಿ ಮಂಡಳಿಗಳ) ಮೂಲಕ ಅನುಷ್ಠಾನಗೊಳಿಸಲಾದ ವಿವಿಧ ವಸತಿ ಯೋಜನೆಗಳು ಯಾವುವು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಯೋಜನೆಗಳಡಿ ಪ್ರಸ್ತುತ ಪೂರ್ಣಗೊಂಡಿರುವ, ನಿರ್ಮಾಣ ಹಂತದಲ್ಲಿರುವ ಮತ್ತು ಇನ್ನು ಪ್ರಾರಂಭವಾಗದಿರುವ ಮನೆ/ ನಿವೇಶನಗಳ ಪ್ರಸ್ತುತ ಸ್ಥಿತಿಗತಿ ಏನು ; (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ಕಲಬುರಗಿ ಜಿಲ್ಲೆಯ ವಸತಿ ಯೋಜನೆಗಳಿಗೆ ಬಿಡುಗಡೆಯಾದ ಮತ್ತು ವೆಚ್ಚ ಮಾಡಲಾದ ಒಟ್ಟು ಅನುದಾನ ಎಷ್ಟು ; (ವರ್ಷಾವಾರು ಮತ್ತು ಯೋಜನಾವಾರು ವಿವರ ನೀಡುವುದು)

(ಈ) ಸದರಿ ಅವಧಿಯ ಜಿಲ್ಲೆಯಲ್ಲಿ ಹಂಚಿಕೆ ಮಾಡಲಾದ ಮನೆಗಳು ಮತ್ತು ನಿವೇಶನಗಳ ಜಾತಿವಾರು (ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗಗಳು, ಅಲ್ಪಸಂಖ್ಯಾತರು ಮತ್ತು ಸಾಮಾನ್ಯ ವರ್ಗದ) ವಿವರಗಳೇನು ? (ತಾಲ್ಲೂಕುವಾರು ಮತ್ತು ಯೋಜನಾವಾರು ಮಾಹಿತಿ ನೀಡುವುದು)

## ಕೃಷಿ ಇಲಾಖೆಯ ಯೋಜನೆಗಳ ಬಗ್ಗೆ

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೫೦ (೯೭೮) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷಿ ಭಾಗ್ಯ ಯೋಜನೆಯಲ್ಲಿ ಕಲಬುರಗಿ ಜಿಲ್ಲೆಯಲ್ಲಿ ಎಷ್ಟು ರೈತರು ನೋಂದಣಿ ಮಾಡಿಕೊಂಡಿದ್ದಾರೆ ; ಇನ್ನೂ ಎಷ್ಟು ನೋಂದಣಿಗೆ ಬಾಕಿ ಇದೆ ;

(ಆ) ಕೃಷಿ ಇಲ್ಲಾಖೆಯಲ್ಲಿ ಇರುವ ಯಾವ ಯಾವ ಯೋಜನೆಯಲ್ಲಿ ಎಷ್ಟು ಕೃಷಿಕರು ಲಾಭಪಡೆದಿದ್ದಾರೆ ಹಾಗೂ ಎಷ್ಟು ಜನರು ನಿರಾಕರಿಸಿರುತ್ತಾರೆ;

(ಇ) ಕಲಬುರಗಿ ಜಿಲ್ಲೆಯಲ್ಲಿ ಎಷ್ಟು ಕೃಷಿಕರಿಗೆ ವಿಮೆ ಪಾವತಿ ಆಗಿದೆ ಎಷ್ಟು ಪಾವತಿಗೆ ಬಾಕಿ ಇದೆ; ಬಿತ್ತನೆ ಕಾರ್ಯ ಮುಗಿದರೂ ಮಳೆ ಬಾರದ ಸ್ಥಳದಲ್ಲಿ ಎಷ್ಟು ಪ್ರದೇಶ ಬಿತ್ತನೆಗೆ ಒಳಗಾಗಿಲ್ಲ ; ಬಿತ್ತನೆ ಆಗದಿರುವ ಪ್ರದೇಶದ ಕೃಷಿಕರಿಗೆ ಯಾವ ಮಾನದಂಡದ ಮೇಲೆ ಪರಿಹಾರ ಒದಗಿಸಲಾಗಿದೆ; ಇನ್ನೂ ಎಷ್ಟು ಬಾಕಿ ಇದೆ ? (ವಿವರ ಒದಗಿಸುವುದು)

## ಬಂದರು ಇಲಾಖೆ ಅಧೀನದಲ್ಲಿರುವ ಪ್ರದೇಶದ ಬಗ್ಗೆ

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೫೧ (೯೭೯) ಮಾನ್ಯ ಮುಜರಾಯಿ, ಮೀನುಗಾರಿಕೆ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೊನ್ನಾವರ ಬಂದರಿನ ಕಾಸರಕೋಡಿನಲ್ಲಿ ಬಂದರು ಇಲಾಖೆ ಅಧೀನದಲ್ಲಿರುವ ಪ್ರದೇಶದ ಕ್ಷೇತ್ರ ಎಷ್ಟು; ಈಗಾಗಲೆ ಈ ಪ್ರದೇಶದಲ್ಲಿ ಎಷ್ಟು ಮನೆಗಳು ಅತಿಕ್ರಮಿಸಿಕೊಂಡಿವೆ ; ಎಷ್ಟು ವರ್ಷದಿಂದ ಅತಿಕ್ರಮಿಸಿಕೊಂಡಿದೆ ; ಈ ಮೀನುಗಾರರ ಭವಿಷ್ಯವೇನು ;

(ಆ) ಹೆಚ್.ಪಿ.ಪಿ.ಎಲ್ ಖಾಸಗಿ ವಾಣಿಜ್ಯ ಬಂದರಿಗೆ ಬಾಡಿಗೆಗೆ ನೀಡಿರುವ ಕ್ಷೇತ್ರವೆಷ್ಟು ;

(ಇ) ಈ ಕ್ಷೇತ್ರಕ್ಕೆ ಕಳೆದ ೧೦ ವರ್ಷದಲ್ಲಿ ಸಂದಾಯವಾದ ಬಾಡಿಗೆ ಎಷ್ಟು ; (ವರ್ಷವಾರು ವಿವರ ಒದಗಿಸುವುದು)

(ಈ) ಹೆಚ್.ಪಿ.ಪಿ.ಎಲ್ ಖಾಸಗಿ ವಾಣಿಜ್ಯ ಬಂದರಿಗೆ ನೀಡಿದ ಕ್ಷೇತ್ರಕ್ಕಿಂತ ಹೆಚ್ಚು ಕ್ಷೇತ್ರ ಬಳಕೆಗೆ ನೀಡಲಾಗಿದೆಯೆ ? (ನೀಡಿದಲ್ಲಿ, ವಿವರ ಒದಗಿಸುವುದು)

## ಮೈಸೂರು ನಗರದಲ್ಲಿ ದುರಸ್ತಿಯಲ್ಲಿರುವ ಸರ್ಕಾರಿ ಕಟ್ಟಡಗಳ ಬಗ್ಗೆ

**ಡಾ. ಡಿ.ತಿಮ್ಮಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೫೨ (೧೦೬೩) ಮಾನ್ಯ ಪೌರಾಡಳಿತ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ನಗರದಲ್ಲಿ ಹಲವಡೆ ದುರಸ್ತಿಯಲ್ಲಿರುವ ಸರ್ಕಾರಿ ಕಟ್ಟಡಗಳಾದ ಕಿವುಡು ಮತ್ತು ಮೂಗರ ಶಾಲೆ ಶತಮಾನೋತ್ಸವ ಭವನ (೧೦೦ ವರ್ಷಗಳ ಹಳೆಯ ಶಾಲೆ), ಪೌರ ಕಾರ್ಮಿಕರ ವಿಶ್ರಾಂತಿ ಗೃಹ, ಶಿಥಿಲವಾದ ಉಗ್ರಾಣಗಳನ್ನು ಸುಸ್ಥಿತಿಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಮೈಸೂರು ನಗರದ ಬಂಬೂ ಬಜಾರ್ ಸಿಗ್ನಲ್ ಹತ್ತಿರ ಸರ್ಕಾರಿ ಉಗ್ರಾಣಗಳು ಶಿಥಿಲಾವಸ್ಥೆಯಲ್ಲಿದ್ದು, ಉಗ್ರಾಣದ ಮೇಲೆ ಗಿಡ ಗಂಟೆಗಳು ಬೆಳೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಸಹಕಾರ ಇಲಾಖೆಯಲ್ಲಿ ಜಾರಿಯಲ್ಲಿರುವ ಯೋಜನೆಗಳ ಕುರಿತು

**ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೫೩ (೯೬೫) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಿಂದ (ಜುಲೈ ೨೦೨೬ರ ಅಂತ್ಯದವರೆಗೆ) ರಾಜ್ಯದ ಅನ್ನದಾತರಿಗೆ ಕೃಷಿ ಸಾಲವನ್ನು ಒದಗಿಸಲು ರೂಪಿಸಿರುವ ಯೋಜನೆಗಳು ಯಾವುವು ; ಯೋಜನೆಗಳಿಗೆ ಮೀಸಲಿಟ್ಟ ಬಿಡುಗಡೆಗೊಳಿಸಿದ ಮತ್ತು ಖರ್ಚಾದ ಅನುದಾನವೆಷ್ಟು;

(ಆ) ಸದರಿ ಆರ್ಥಿಕ ವರ್ಷಗಳಲ್ಲಿ ಎಷ್ಟು ಅನ್ನದಾತರಿಗೆ ಸಾಲವನ್ನು ವಿತರಿಸಲಾಗಿದೆ ; ವಿತರಿಸಿದ ಮೊತ್ತವೆಷ್ಟು; ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವರ್ಗಗಳ ಅನ್ನದಾತರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಸದರಿ ಆರ್ಥಿಕ ವರ್ಷಗಳಲ್ಲಿ ಮಹಿಳೆಯರಿಗೆ / ಮಹಿಳಾ ಸಂಘಗಳಿಗೆ ಸರ್ಕಾರದಿಂದ ರೂಪಿಸಿರುವ ಯೋಜನೆಗಳು ಯಾವುವು ; ಯೋಜನೆಗಳಿಗೆ ಮೀಸಲಿಟ್ಟ ಬಿಡುಗಡೆಗೊಳಿಸಿದ

ಮತ್ತು ಖರ್ಚಾದ ಅನುದಾನವೆಷ್ಟು; ಯೋಜನೆಗಳಲ್ಲಿನ ಫಲಾನುಭವಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ಪ್ರಸ್ತುತ ರಾಜ್ಯದಲ್ಲಿರುವ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕುಗಳ ಸಂಖ್ಯೆ ಎಷ್ಟು ; ಯಾವುವು: ಸದರಿ ಆರ್ಥಿಕ ವರ್ಷಗಳಲ್ಲಿ ಡಿ.ಸಿ.ಸಿ. ಬ್ಯಾಂಕ್‌ಗಳಿಗಾದ ಲಾಭ ಮತ್ತು ನಷ್ಟವೆಷ್ಟು; ನಷ್ಟಕ್ಕೆ ಕಾರಣಗಳೇನು ; ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆಯಲ್ಲಿ ಜಾರಿಯಲ್ಲಿರುವ ಯೋಜನೆಗಳ ಕುರಿತು

**ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೫೪ (೯೬೬) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಿಂದ (ಜುಲೈ ೨೦೨೬ ಅಂತ್ಯದವರೆಗೆ) ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆಗೆ ರಾಜ್ಯ ಸರ್ಕಾರವು ಬಜೆಟ್‌ನಲ್ಲಿ ಮೀಸಲಿಟ್ಟ ಮತ್ತು ಬಿಡುಗಡೆಗೊಳಿಸಿದ ಅನುದಾನ ಎಷ್ಟು; ಯಾವ ಉದ್ದೇಶಕ್ಕೆ ಅನುದಾನವನ್ನು ಬಳಕೆ ಮಾಡಿಕೊಳ್ಳಲಾಗಿದೆ ;

(ಆ) ಕಳೆದ ಮೂರು ವರ್ಷಗಳಿಂದ (ಜುಲೈ ೨೦೨೬ ಅಂತ್ಯದವರೆಗೆ) ಪ್ರಸ್ತುತ ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆಯಿಂದ ಜಾರಿಯಲ್ಲಿರುವ ಯೋಜನೆಗಳು ಯಾವುವು ; ಯೋಜನೆಗಳಿಗೆ ಮೀಸಲಿಟ್ಟ, ಬಿಡುಗಡೆಗೊಳಿಸಿದ ಮತ್ತು ಖರ್ಚಾದ ಅನುದಾನವೆಷ್ಟು ;

(ಇ) ೨೦೨೧–೨೨, ೨೦೨೨–೨೩ನೇ ಸಾಲಿನಲ್ಲಿ ಜಾರಿಯಲ್ಲಿರುವ ಯೋಜನೆಗಳಾವುವು ; ಪ್ರಸ್ತುತ ೨೦೨೩ರಿಂದ ಇಲ್ಲಿಯವರೆಗೆ ಯಾವುದಾದರೂ ಯೋಜನೆಗಳು/ ಸಹಾಯಧನಗಳನ್ನು ರದ್ದುಪಡಿಸಲಾಗಿದೆಯೇ ; ರದ್ದುಪಡಿಸಲು ಕಾರಣಗಳೇನು ?

## ಪುರಸಭೆ ಮತ್ತು ಸ್ಥಳೀಯ ಸಂಸ್ಥೆಗಳಲ್ಲಿ ಖಾಯಂ ಮತ್ತು ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಕುರಿತು

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೫೫ (೯೬೭) ಮಾನ್ಯ ಪೌರಾಡಳಿತ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪುರಸಭೆ ಮತ್ತು ಸ್ಥಳೀಯ ಸಂಸ್ಥೆಗಳಲ್ಲಿ ಖಾಯಂ ಮತ್ತು ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಸ್ವಚ್ಛತೆ ಹಾಗೂ ಇನ್ನಿತರ ವಿಭಾಗಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ವಿವರ ನೀಡುವುದು ;

(ಆ) ೨೦೨೨–೨೩ ಸಾಲಿನಿಂದ ೨೦೨೬ ಜುಲೈ ಅಂತ್ಯದವರೆಗೆ ಎಷ್ಟು ಪೌರ ಕಾರ್ಮಿಕ ನೌಕರರನ್ನು ಖಾಯಂಗೊಳಿಸಲಾಗಿದೆ; ವೇತನವನ್ನು ಕಾಲಕಾಲಕ್ಕೆ ಪಾವತಿಸಲಾಗುತ್ತಿದೆಯೇ; ಇಲ್ಲದಿದ್ದಲ್ಲಿ, ಯಾವ ಕಾರಣಕ್ಕಾಗಿ ವೇತನವು ಸಕಾಲದಲ್ಲಿ ಪಾವತಿಯಾಗುತ್ತಿಲ್ಲ ;

(ಇ) ಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರ ಕಾರ್ಮಿಕರಿಗೆ ಸರ್ಕಾರ ಪಾವತಿಸುತ್ತಿರುವ ವೇತನವೆಷ್ಟು ; ನಿಗಧಿಪಡಿಸಿದ ಕೆಲಸದ ಸಮಯವೆಷ್ಟು ಹಾಗೂ ಸರ್ಕಾರ ಒದಗಿಸುತ್ತಿರುವ ಸೌಲಭ್ಯಗಳಾವುವು ?

## ಕೃಷಿ ಇಲಾಖೆಯಲ್ಲಿ ಜಾರಿಯಲ್ಲಿರುವ ಯೋಜನೆಗಳ ಕುರಿತು

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೫೬ (೯೬೮) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಿಂದ (ಜುಲೈ ೨೦೨೬ ಅಂತ್ಯದವರೆಗೆ) ಕೃಷಿ ಇಲಾಖೆಗೆ ರಾಜ್ಯ ಸರ್ಕಾರವು ಆಯವ್ಯಯದಲ್ಲಿ ಮೀಸಲಿಟ್ಟ ಮತ್ತು ಬಿಡುಗಡೆಗೊಳಿಸಿದ ಅನುದಾನವೆಷ್ಟು ; ಯಾವ ಉದ್ದೇಶಕ್ಕೆ ಅನುದಾನವನ್ನು ಬಳಕೆ ಮಾಡಿಕೊಳ್ಳಲಾಗಿದೆ ;

(ಆ) PM ಕಿಸಾನ್ ಯೋಜನೆಯಲ್ಲಿ ರಾಜ್ಯ ಸರ್ಕಾರವು ಅನ್ನದಾತರಿಗೆ ೪ ಸಾವಿರ ರೂ. ಸಹಾಯಧನವನ್ನು ನೀಡುವುದನ್ನು ಮುಂದುವರೆಸಿದೆಯೇ ; ಇಲ್ಲದಿದ್ದಲ್ಲಿ, ಯಾವ ಕಾರಣಕ್ಕಾಗಿ ಯೋಜನೆಯುನ್ನು ನಿಲ್ಲಿಸಲಾಗಿದೆ ; ಸದರಿ ಯೋಜನೆ ಪ್ರಾರಂಭದಿಂದ ಇಲ್ಲಿಯವರೆಗೆ ಎಷ್ಟು ಜನ ಅನ್ನದಾತರಿಗೆ ಎಷ್ಟು ಮೊತ್ತವನ್ನು ಯಾವ ವರ್ಷಗಳಲ್ಲಿ ಪಾವತಿಸಲಾಗಿದೆ ; ಯೋಜನೆಯನ್ನು ಮುಂದುವರೆಸಲು ಸರ್ಕಾರದ ಮುಂದಿರುವ ಸವಾಲುಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ೨೦೨೧-೨೨, ೨೦೨೨-೨೩ನೇ ಸಾಲಿನಲ್ಲಿ ಜಾರಿಯಲ್ಲಿರುವ ಯೋಜನೆಗಳಾವುವು: ಪ್ರಸ್ತುತ ೨೦೨೩ರಿಂದ ಇಲ್ಲಿಯವರೆಗೆ ಯಾವುದಾದರೂ ಯೋಜನೆಗಳು / ಸಹಾಯ ಧನಗಳನ್ನು ರದ್ದುಪಡಿಸಲಾಗಿದೆಯೇ ; ರದ್ದುಪಡಿಸಲು ಕಾರಣಗಳೇನು;

(ಈ) ಕಳೆದ ಮೂರು ವರ್ಷಗಳಲ್ಲಿ (ಜುಲೈ ೨೦೨೬ ಅಂತ್ಯದವರೆಗೆ) ಪ್ರಸ್ತುತ ರಾಜ್ಯದ ಅನ್ನದಾತರಿಗೆ ಕೃಷಿ ಇಲಾಖೆಯಿಂದ

ಜಾರಿಯಲ್ಲಿರುವ ಯೋಜನೆಗಳು ಯಾವುವು ; ಯೋಜನೆಗಳಿಗೆ ಮೀಸಲಿಟ್ಟ. ಬಿಡುಗಡೆಗೊಳಿಸಿದ ಮತ್ತು ಖರ್ಚಾದ ಅನುದಾನವೆಷ್ಟು ?

## ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರೈತರಿಗೆ ಪಾವತಿಸಲು ಬಾಕಿ ಇರುವ ಮೊತ್ತದ ಕುರಿತು

**ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೫೭ (೯೬೯) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೪-೨೫, ೨೦೨೫-೨೬ ಮತ್ತು ೨೦೨೬-೨೭ನೇ ಸಾಲಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ರಾಜ್ಯದ ರೈತರಿಂದ ಖರೀದಿಸಿದ ಬೆಳೆಗಳು ಯಾವುವು: ಎಷ್ಟು ಪ್ರಮಾಣದಲ್ಲಿ ಬೆಳೆಗಳನ್ನು ಖರೀದಿಸಲಾಗಿದೆ ; ಖರೀದಿಯಲ್ಲಿ ಸರ್ಕಾರ ರೂಪಿಸಿರುವ ನಿಯಮಗಳೇನು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ಆರ್ಥಿಕ ವರ್ಷಗಳಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಖರೀದಿಸಿದ ಬೆಳೆಗಳಿಗೆ ಹಣವನ್ನು ಪಾವತಿಸಲಾಗಿದೆಯೇ ; ಹಣಪಾವತಿಗೆ ಬಾಕಿ ಇರುವ ಮೊತ್ತವೆಷ್ಟು ; ಯಾವ ವರ್ಷಗಳಲ್ಲಿ ಬಾಕಿ ಇದೆ; ಬಾಕಿ ಇರಲು ಕಾರಣಗಳೇನು ; ಬಾಕಿ ಮೊತ್ತವನ್ನು ಪಾವತಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಕನಿಷ್ಠ ಬೆಂಬಲ ಬೆಲೆ ಯೋಜನೆಯ ಉದ್ದೇಶಗಳೇನು ; ಸದರಿ ಯೋಜನೆಯಲ್ಲಿ ರೈತರಿಂದ ಖರೀದಿಸಿದ ಬೆಳೆಗಳಿಗೆ ಎಷ್ಟು

ಸಮಯದೊಳಗೆ ಹಣವನ್ನು ಪಾವತಿ ಮಾಡಬೇಕೆಂಬ ನಿಯಮವಿದೆ; ಸರ್ಕಾರ ನಿಯಮವನ್ನು ಪಾಲಿಸುತ್ತಿದೆಯೇ ; ೨೦೨೫–೨೬ನೇ ಸಾಲಿನಲ್ಲಿ ಸದರಿ ಯೋಜನೆಯಡಿ ರೈತರಿಂದ ಬೆಳೆಗಳನ್ನು ಖರೀದಿಸಿ ಸಾವಿರ ಕೋಟಿಗೂ ಅಧಿಕ ಮೊತ್ತವನ್ನು ರೈತರಿಗೆ ಪಾವತಿಸುವುದನ್ನು ಯಾವ ಕಾರಣಕ್ಕಾಗಿ ಸರ್ಕಾರ ಬಾಕಿ ಉಳಿಸಿಕೊಂಡಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ರಾಜ್ಯದ ಮಹಾನಗರ ಪಾಲಿಕೆಗಳ ಕಛೇರಿ ವ್ಯವಸ್ಥೆ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೫೮ (೯೬೦) ಮಾನ್ಯ ಪೌರಾಡಳಿತ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಮಹಾನಗರ ಪಾಲಿಕೆಗಳ ಕೇಂದ್ರ ಕಛೇರಿಗಳು ಹಾಗೂ ವಲಯ ಕಛೇರಿಗಳಲ್ಲಿ ಸಾರ್ವಜನಿಕರಿಗೆ ಪಾರದರ್ಶಕ, ಸುಗಮ ಮತ್ತು ಭ್ರಷ್ಟಾಚಾರ ರಹಿತ ಆಡಳಿತ ಸೇವೆಗಳನ್ನು ಒದಗಿಸುವ ನಿಟ್ಟಿನಲ್ಲಿ ಕಛೇರಿ ವ್ಯವಸ್ಥೆ ರೂಪಿಸಲಾಗಿದೆಯೇ ;

(ಆ) ಮಹಾನಗರ ಪಾಲಿಕೆಗಳ ಕೇಂದ್ರ ಕಛೇರಿ ಹಾಗೂ ವಲಯ ಕಛೇರಿಗಳಲ್ಲಿ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಪ್ರತ್ಯೇಕ ಕಚೇರಿ, ಫ್ಯಾಬ್ರಿಕೇಟೆಡ್ ಚೇಂಬರ್, ಕ್ಯಾಬಿನ್ ಅಥವಾ ವಿಭಾಗೀಯ ಕೊಠಡಿಗಳನ್ನು ನಿರ್ಮಿಸಲು ಜಾರಿಯಲ್ಲಿರುವ ನಿಯಮಗಳು, ಮಾರ್ಗಸೂಚಿಗಳು ಹಾಗೂ ಮಾನದಂಡಗಳೇನು ; ಕಛೇರಿ ಮುಖ್ಯಸ್ಥರನ್ನು ಹೊರತುಪಡಿಸಿ ಯಾವ ಹಂತದ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಪ್ರತ್ಯೇಕ ಚೇಂಬರ್ ಕಲ್ಪಿಸಲು ಅವಕಾಶವಿದೆ ;

(ಇ) ಇಂತಹ ಚೇಂಬರ್‌ಗಳಲ್ಲಿ ಟಿಂಟೆಡ್ (Tinted) ಅಥವಾ ಒಳಭಾಗವು ಸಾರ್ವಜನಿಕರಿಗೆ ಸ್ಪಷ್ಟವಾಗಿ ಕಾಣದ ಗಾಜುಗಳನ್ನು

ಅಳವಡಿಸಲು ಸರ್ಕಾರ ಅಥವಾ ನಗರಾಭಿವೃದ್ಧಿ ಇಲಾಖೆಯಿಂದ ಯಾವುದೇ ಅನುಮತಿ ಅಥವಾ ಮಾರ್ಗಸೂಚಿ ನೀಡಲಾಗಿದೆಯೇ ; ಇದ್ದಲ್ಲಿ, ಮಾಹಿತಿ ನೀಡುವುದು ;

(ಈ) ಮಂಗಳೂರು ಮಹಾನಗರ ಪಾಲಿಕೆಯ ಕೇಂದ್ರ ಕಛೇರಿ ಹಾಗೂ ವಲಯ ಕಛೇರಿಗಳಲ್ಲಿ ವಿವಿಧ ಹಂತದ ಅಧಿಕಾರಿಗಳಿಗೆ ಪ್ರತ್ಯೇಕ ಫ್ಯಾಬ್ರಿಕೇಟೆಡ್ ಚೇಂಬರ್ ಹಾಗೂ ಟಿಂಟೆಡ್ ಗ್ಲಾಸ್ ಅಳವಡಿಸಲು ಅವಕಾಶವಿದೆಯೇ; ಈ ಕುರಿತ ಆದೇಶಗಳೇನು ;

(ಉ) ಸಾರ್ವಜನಿಕರು ಪ್ರತಿ ಅಧಿಕಾರಿಯನ್ನು ಪ್ರತ್ಯೇಕವಾಗಿ ಭೇಟಿ ಮಾಡಲು ಸರತಿ ಸಾಲಿನಲ್ಲಿ ಕಾಯಬೇಕಾದ ಪರಿಸ್ಥಿತಿ ತಪ್ಪಿಸಲು ಮಹಾನಗರ ಪಾಲಿಕೆಗಳ ಕಛೇರಿಗಳಲ್ಲಿ ಸಾರ್ವಜನಿಕರಿಗೆ ಮುಕ್ತ ಪ್ರವೇಶ. ಪಾರದರ್ಶಕ ಕಾರ್ಯನಿರ್ವಹಣೆ ಹಾಗೂ ಜವಾಬ್ದಾರಿಯುತ ಆಡಳಿತವನ್ನು ಖಚಿತಪಡಿಸುವ ಉದ್ದೇಶದಿಂದ, ಕಛೇರಿ ಮುಖ್ಯಸ್ಥರನ್ನು ಹೊರತುಪಡಿಸಿ ಉಳಿದ ಅಧಿಕಾರಿಗಳು ಮತ್ತು ಸಿಬ್ಬಂದಿ ಸಾರ್ವಜನಿಕರಿಗೆ ಸುಲಭವಾಗಿ ಸಂಪರ್ಕಿಸಬಹುದಾದ ರೀತಿಯ ಕಛೇರಿ ವ್ಯವಸ್ಥೆಯನ್ನು ಜಾರಿಗೊಳಿಸಲು ಸರ್ಕಾರ ಯಾವುದೇ ಏಕರೂಪದ ಮಾರ್ಗಸೂಚಿಯನ್ನು ಹೊರಡಿಸುವ ಉದ್ದೇಶ ಹೊಂದಿದೆಯೇ; ಇದ್ದಲ್ಲಿ, ಅದನ್ನು ಯಾವ ಕಾಲಮಿತಿಯೊಳಗೆ ಜಾರಿಗೊಳಿಸಲಾಗುವುದು ?

## ಕೃಷಿ ಇಲಾಖೆಯ ಸಿಬ್ಬಂದಿ ಕೊರತೆ ಹಾಗೂ ಕ್ಷೇತ್ರಮಟ್ಟದ ಸೇವೆಗಳನ್ನು ಬಲಪಡಿಸುವಿಕೆ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೫೯ (೯೬೧) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷಿ ಇಲಾಖೆಯಲ್ಲಿ ಕೃಷಿ ಅಧಿಕಾರಿ, ಸಹಾಯಕ ಕೃಷಿ ನಿರ್ದೇಶಕ, ಸಹಾಯಕ ಕೃಷಿ ಅಧಿಕಾರಿ, ಕೃಷಿ ತಾಂತ್ರಿಕ, ಮಣ್ಣು ಪರೀಕ್ಷಾ ಪ್ರಯೋಗಾಲಯ ಹಾಗೂ ಕೃಷಿ ವಿಸ್ತರಣಾ ಸಿಬ್ಬಂದಿ ಸೇರಿದಂತೆ ವಿವಿಧ ಹುದ್ದೆಗಳ ಮಂಜೂರಾದ, ಭರ್ತಿಯಾದ ಹಾಗೂ ಖಾಲಿ ಹುದ್ದೆಗಳ ಜಿಲ್ಲಾವಾರು ಮತ್ತು ಹುದ್ದೆವಾರು ವಿವರಗಳೇನು ;

(ಆ) ಪ್ರಸ್ತುತ ಒಬ್ಬ ಕೃಷಿ ಅಧಿಕಾರಿ/ಸಹಾಯಕ ಕೃಷಿ ಅಧಿಕಾರಿಯ ವ್ಯಾಪ್ತಿಗೆ ಎಷ್ಟು ಗ್ರಾಮಗಳು, ರೈತರು ಹಾಗೂ ಕೃಷಿ ಪ್ರದೇಶ ಬರುತ್ತದೆ; ಕೃಷಿ ವಿಸ್ತರಣಾ ಸಿಬ್ಬಂದಿಯ ಸಂಖ್ಯೆ ಕೇಂದ್ರ/ರಾಜ್ಯ ಸರ್ಕಾರದ ನಿಗದಿತ ಮಾನದಂಡಗಳಿಗೆ ಅನುಗುಣವಾಗಿದೆಯೇ; ಅದನ್ನು ಸರಿಪಡಿಸಲು ಸರ್ಕಾರದ ಕ್ರಮಗಳೇನು ;

(ಇ) ಸಿಬ್ಬಂದಿ ಕೊರತೆಯಿಂದ ಬೆಳೆ ಸಲಹೆ, ಕೀಟ-ರೋಗ ನಿರ್ವಹಣೆ. ಮಣ್ಣು ಪರೀಕ್ಷೆ, ಸೂಕ್ಷ್ಮ ನೀರಾವರಿ, ಸಾವಯವ ಕೃಷಿ. ಬೆಳೆ ವೈವಿಧ್ಯಕರಣ, ಹವಾಮಾನ ಆಧಾರಿತ ಸಲಹೆ, ಬೆಳೆ ವಿಮೆ, ಡಿಜಿಟಲ್ ಸೇವೆಗಳು ಹಾಗೂ ಸಹಾಯಧನ ಯೋಜನೆಗಳು ರೈತರಿಗೆ ಸಮರ್ಪಕವಾಗಿ ತಲುಪುತ್ತಿಲ್ಲ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ; ರೈತ ಮನೆ ಬಾಗಿಲಿಗೆ ಕೃಷಿ ಸೇವೆಗಳನ್ನು ಒದಗಿಸುವ ಬಗ್ಗೆ ಸರ್ಕಾರದ ಕ್ರಮಗಳೇನು ;

(ಈ) ಖಾಲಿ ಹುದ್ದೆಗಳನ್ನು ತ್ವರಿತವಾಗಿ ಭರ್ತಿ ಮಾಡಿ, ಹೋಬಳಿ/ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಅಗತ್ಯ ಸಿಬ್ಬಂದಿ ಒದಗಿಸಲು ವಿಶೇಷ ನೇಮಕಾತಿ ಅಭಿಯಾನ, ಕೃಷಿ ಪದವೀಧರರ ನೇಮಕಾತಿ ಹಾಗೂ ಮಾನವ ಸಂಪನ್ಮೂಲ ಪುನರ್‌ರಚನಾ ಯೋಜನೆಯನ್ನು ಕಾಲಮಿತಿಯಲ್ಲಿ ಜಾರಿಗೊಳಿಸುವುದೇ ?

# ನಗರ ಸ್ಥಳೀಯ ಸಂಸ್ಥೆಗಳಲ್ಲಿ ಒಳಚರಂಡಿ ವ್ಯವಸ್ಥೆ ಯೋಜನೆ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೬೦ (೯೬೨) ಮಾನ್ಯ ಪೌರಾಡಳಿತ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಒಳಚರಂಡಿ ವ್ಯವಸ್ಥೆ ಕಲ್ಪಿಸಲು ಅನುದಾನ ನಿಗದಿಪಡಿಸುವಾಗ ಜನಸಂಖ್ಯೆ, ವಿಸ್ತೀರ್ಣ, ಒಳಚರಂಡಿ ಜಾಲದ ವ್ಯಾಪ್ತಿ, ಪ್ರಸ್ತುತ ಸಂಪರ್ಕಗಳ ಸಂಖ್ಯೆ, ಭೌಗೋಳಿಕ ಪರಿಸ್ಥಿತಿ, ಮಳೆಯ ಪ್ರಮಾಣ, ಒಳಚರಂಡಿ ಉತ್ಪಾದನೆ, STP ಸಾಮರ್ಥ್ಯ ಹಾಗೂ ನಗರಾಭಿವೃದ್ಧಿ ಯೋಜನೆಗಳ ಆಧಾರದ ಮೇಲೆ ಯಾವ ಮಾನದಂಡಗಳನ್ನು ಅನುಸರಿಸಲಾಗುತ್ತಿದೆ ; ಅನುದಾನ ಹಂಚಿಕೆಯ ವಿವರ ನೀಡುವುದು ;

(ಆ) ಕುಂದಾಪುರ ಪುರಸಭೆ ವ್ಯಾಪ್ತಿಯ ಒಳಚರಂಡಿ ಯೋಜನೆಗೆ DPR ತಯಾರಿಸಲಾಗಿದೆಯೇ ; ಯೋಜನೆಯ ಮೂಲ ಅಂದಾಜು ವೆಚ್ಚ, ವಿನ್ಯಾಸ ಸಾಮರ್ಥ್ಯ, ಒಳಚರಂಡಿ ಜಾಲದ ಉದ್ದ, ಪ್ರಸ್ತಾವಿತ ಸಂಪರ್ಕಗಳ ಸಂಖ್ಯೆ, ಪಂಪಿಂಗ್ ಸ್ಟೇಷನ್‌ಗಳು ಹಾಗೂ STP ಸಾಮರ್ಥ್ಯ ಎಷ್ಟಿದೆ ; DPRಗೆ ತಿದ್ದುಪಡಿ ಮಾಡಲಾಗಿದೆಯೇ ; ಮಾಡಿದ್ದರೆ ಕಾರಣಗಳೇನು ;

(ಇ) ಈ ಯೋಜನೆಗೆ ಈವರೆಗೆ ಆಡಳಿತಾತ್ಮಕ ಮತ್ತು ತಾಂತ್ರಿಕ ಅನುಮೋದನೆ ಪಡೆದ ಮೊತ್ತವೆಷ್ಟು; ಬಿಡುಗಡೆಯಾದ, ಖರ್ಚಾದ, ಬಳಕೆಯಾಗದೆ ಉಳಿದ ಹಾಗೂ ಬಾಕಿ ಇರುವ ಅನುದಾನದ ವಿವರವೇನು ;

(ಈ) DPRನಲ್ಲಿ ನಿಗದಿಪಡಿಸಿದಂತೆ ಕಾಮಗಾರಿ ಭೌತಿಕ ಹಾಗೂ ಆರ್ಥಿಕ ಪ್ರಗತಿ ಸಾಧಿಸಿದೆಯೇ ; ಪೂರ್ಣಗೊಂಡ ಮತ್ತು ಬಾಕಿ ಇರುವ ಕಾಮಗಾರಿಗಳ ಪ್ರಮಾಣ, ವಿಳಂಬಕ್ಕೆ ಕಾರಣಗಳು ಹಾಗೂ ಪರಿಷ್ಕೃತ ವೆಚ್ಚವೆಷ್ಟು ;

(ಉ) ಬಾಕಿ ಕಾಮಗಾರಿ ಪೂರ್ಣಗೊಳಿಸಲು ಅಗತ್ಯವಿರುವ ಹೆಚ್ಚುವರಿ ಅನುದಾನ, ಪರಿಷ್ಕೃತ DPR, ಟೆಂಡರ್/ಗುತ್ತಿಗೆ ಸ್ಥಿತಿ ಇತ್ಯಾದಿಗಳ ಹಿನ್ನಲೆಯಲ್ಲಿ ಕುಂದಾಪುರ ಪುರಸಭೆಯ ಸಂಪೂರ್ಣ ಒಳಚರಂಡಿ ವ್ಯವಸ್ಥೆಯನ್ನು ಯಾವ ಕಾಲಮಿತಿಯಲ್ಲಿ ಕಾರ್ಯಗತಗೊಳಿಸಲಾಗುವುದು ?

## ಕರ್ನಾಟಕ ರಾಜ್ಯದಲ್ಲಿ ಬೆಳೆ ವಿಮೆ ಎಲ್ಲಾ ರೈತರಿಗೆ ತಲುಪಿಸುವ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೬೧ (೯೬೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸ್ತುತ ರಾಜ್ಯದಲ್ಲಿ ಬೆಳೆ ವಿಮೆ ವ್ಯಾಪ್ತಿಗೆ ಒಳಪಟ್ಟಿರುವ ರೈತರ ಸಂಖ್ಯೆ, ವಿಮೆ ಮಾಡಿಸಿರುವ ಕೃಷಿ ವಿಸ್ತೀರ್ಣ ಹಾಗೂ ವಿಮೆ ವ್ಯಾಪ್ತಿಯಿಂದ ಹೊರಗುಳಿದಿರುವ ವಿಸ್ತೀರ್ಣ ಎಷ್ಟು; ಹೊರಗುಳಿಯಲು ಕಾರಣಗಳೇನು ; ಎಲ್ಲಾ ಕೃಷಿ ಭೂಮಿಯನ್ನು ವಿಮಾ ವ್ಯಾಪ್ತಿಗೆ ತರಲು ಕಂದಾಯ ಇಲಾಖೆಯೊಂದಿಗೆ ಸಮನ್ವಯ ಸಾಧಿಸಿದೆಯೇ ;

(ಆ) ರಾಜ್ಯದ ಪ್ರತಿಯೊಂದು ಅರ್ಹ ಕೃಷಿ ಜಮೀನು ಹಾಗೂ ರೈತನನ್ನು ಬೆಳೆ ವಿಮೆ ವ್ಯಾಪ್ತಿಗೆ ತರಲು RTC/ಪಹಣಿ, ಬೆಳೆ ಸಮೀಕ್ಷೆ, FRUITS, ಬ್ಯಾಂಕ್ ಮತ್ತು ವಿಮಾ ದತ್ತಾಂಶಗಳನ್ನು ಸಂಯೋಜಿಸಿ ಸಮಗ್ರ ವ್ಯವಸ್ಥೆ ರೂಪಿಸಲಾಗಿದೆಯೇ ; ಇಲ್ಲದಿದ್ದರೆ ಕ್ರಮವೇನು ;

(ಇ) ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ವಿಮಾ ಪ್ರೀಮಿಯಂ ಪಾಲನ್ನು ವಿಮಾ ಕಂಪನಿಗಳಿಗೆ ನಿಗದಿತ ಅವಧಿಯಲ್ಲಿ ಪಾವತಿಸಲಾಗುತ್ತಿದೆಯೇ ; ವಿಳಂಬದಿಂದ ರೈತರ ಪರಿಹಾರಕ್ಕೆ ತೊಂದರೆಯಾಗಿರುವ ಪ್ರಕರಣಗಳಿವೆಯೇ ;

(ಈ) ಮಳೆಮಾಪಕಗಳ (Rain Gauge) ದೋಷ ಅಥವಾ ಮಳೆಯ ಅಂಕಿ ಅಂಶದ ಕೊರತೆಯಿಂದ ನೈಜ ಬೆಳೆನಷ್ಟವಾಗಿದ್ದರೂ ವಿಮಾ ಕಂಪನಿಗಳು ಕ್ಲೈಮ್ ತಿರಸ್ಕರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇಂತಹ ಪ್ರಕರಣಗಳ ಮರುಪರಿಶೀಲನೆಗೆ ವ್ಯವಸ್ಥೆಯಿದೆಯೇ ; ಮಳೆಮಾಪಕಗಳ ಸಮರ್ಪಕ ನಿರ್ವಹಣೆಗೆ ಸರ್ಕಾರದ ಕ್ರಮಗಳೇನು ;

(ಉ) ಮಳೆಮಾಪಕಗಳ ಹೆಚ್ಚಳ, ಸ್ವಯಂಚಾಲಿತ ಹವಾಮಾನ ಕೇಂದ್ರಗಳ ದತ್ತಾಂಶ, ಗ್ರಾಮ/ಹೋಬಳಿ ಮಟ್ಟದ ನೈಜ ಬೆಳೆನಷ್ಟ ದಾಖಲಾತಿ ಹಾಗೂ ತ್ವರಿತ ಮೇಲ್ಮನವಿ ವ್ಯವಸ್ಥೆ ಜಾರಿಗೊಳಿಸಿ, ಅರ್ಹ ರೈತರಿಗೆ ನಿಗದಿತ ಕಾಲಮಿತಿಯಲ್ಲಿ ವಿಮಾ ಪರಿಹಾರ ದೊರೆಯುವಂತೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ–ನೇಮಕಾತಿ, ರೋಸ್ಟರ್ ಹಾಗೂ ಹೆಚ್ಚುವರಿ ಹುದ್ದೆಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೬೨ (೯೬೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದೋಷಪೂರಿತ ರೋಸ್ಟರ್ ಅಳವಡಿಸಿರುವ ೨೪–೦೧–೨೦೧೯ರ ಸಹಾಯಕ ಪ್ರಾಧ್ಯಾಪಕರ ನೇಮಕಾತಿಯನ್ನು ರದ್ದುಪಡಿಸಿ, ಹೊಸ ನೇಮಕಾತಿ ಅಧಿಸೂಚನೆ ಹೊರಡಿಸುವುದಾಗಿ ಕೃಷಿ ಇಲಾಖೆ

ಪ್ರಮಾಣಪತ್ರ ಸಲ್ಲಿಸಿದ ನಂತರ ಈವರೆಗೆ ಕೈಗೊಂಡಿರುವ ಕ್ರಮಗಳೇನು ; ಹೊಸ ಅಧಿಸೂಚನೆ ಹೊರಡಿಸಲು ನಿಗದಿತ ಕಾಲಮಿತಿ ಏನು ;

(ಆ) ಇಲಾಖೆ ರೋಸ್ಟರ್‌ನಲ್ಲಿ ಲೋಪವಿರುವುದನ್ನು ಒಪ್ಪಿಕೊಂಡಿರುವ ಹಿನ್ನೆಲೆಯಲ್ಲಿ, ಸಂಬಂಧಿತ ಪ್ರಕರಣವನ್ನು ತ್ವರಿತವಾಗಿ ಇತ್ಯರ್ಥಗೊಳಿಸಲು ಸರ್ಕಾರ ಕೈಗೊಂಡಿರುವ ಕಾನೂನು ಕ್ರಮಗಳೇನು ; ಪರಿಶಿಷ್ಟ ಜಾತಿಯ ಅಭ್ಯರ್ಥಿಗಳಿಗೆ ಅವಕಾಶ ವಂಚನೆಗೆ ಕಾರಣವೇನು ; ಈ ಕುರಿತು ಸರ್ಕಾರ ಕೈಗೊಂಡ ಕಾನೂನು ಕ್ರಮಗಳೇನು ;

(ಇ) ಆರ್ಥಿಕ ಇಲಾಖೆಯ ಅನುಮೋದನೆಯಿಲ್ಲದೆ ಹೆಚ್ಚುವರಿ ಸಹಾಯಕ ಪ್ರಾಧ್ಯಾಪಕರನ್ನು ನೇಮಕ ಮಾಡಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ೨೦೨೩ರಿಂದ ಇಲ್ಲಿಯವರೆಗೆ HRMS ಮೂಲಕ ಅನುಮೋದಿತ ಹುದ್ದೆಗಳಿಗೆ ಹಾಗೂ ಹೆಚ್ಚುವರಿ/ ಅನುಮೋದನೆಯಿಲ್ಲದ ಹುದ್ದೆಗಳಿಗೆ ಪ್ರತ್ಯೇಕವಾಗಿ ಸರ್ಕಾರದ ಖಜಾನೆಯಿಂದ ಪಾವತಿಸಿರುವ ವೇತನದ ಒಟ್ಟು ಮೊತ್ತ ಎಷ್ಟು;

(ಈ) ಅನುಮೋದನೆಯಿಲ್ಲದ ಹುದ್ದೆಗಳಿಗೆ ನಿಯಮಬಾಹಿರವಾಗಿ ಪ್ರತಿ ತಿಂಗಳು ವೇತನ ಪಾವತಿಸಲು ಅವಕಾಶವಿದೆಯೇ ; ಸರ್ಕಾರದ ಹಣಕಾಸು ನಿಯಮಗಳ ಉಲ್ಲಂಘನೆಯಾಗಿದ್ದರೆ, ಹೊಣೆಗಾರರಿಂದ ಮೊತ್ತ ವಸೂಲಿ ಮಾಡುವ ಕ್ರಮ ಕೈಗೊಳ್ಳಲಾಗಿದೆಯೇ ;

(ಉ) ಮೇಲ್ಕಂಡ ಪ್ರಕರಣ ಬಾಕಿಯಿರುವ ಸಂದರ್ಭದಲ್ಲಿ ಷರತ್ತುಬದ್ಧವಾಗಿ ನೇಮಕಗೊಂಡ ಸಹಾಯಕ ಪ್ರಾಧ್ಯಾಪಕರ ಪ್ರೊಬೇಷನರಿ ಅವಧಿ ತೃಪ್ತಿಕರವಾಗಿ ಪೂರ್ಣಗೊಂಡಿದೆ ಎಂದು ಆದೇಶಿಸುವುದು ಹಾಗೂ ಬೆಂಗಳೂರಿನ ಕೃಷಿ ವಿಶ್ವವಿದ್ಯಾಲಯಕ್ಕೆ

ವರ್ಗಾವಣೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇಂತಹ ಆದೇಶ ಹೊರಡಿಸಿದ ವಿಶ್ವವಿದ್ಯಾಲಯದ ಸಂಬಂಧಪಟ್ಟ ಪದಾಧಿಕಾರಿ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ?

## ತೋಟಗಾರಿಕಾ ಮಂಡಳಿಯ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೬೩ (೧೦೫೯) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತೋಟಗಾರಿಕಾ ಇಲಾಖೆಯಲ್ಲಿ ಎಷ್ಟು ತೋಟಗಾರಿಕಾ ಬೆಳೆಗಳಿಗೆ ಅನ್ವಯಿಸುವಂತೆ ಮಂಡಳಿಗಳನ್ನು ರಚಿಸಲಾಗಿದೆ ; (ಯಾವುವು, ಮಾಹಿತಿ ಒದಗಿಸುವುದು)

(ಆ) ಕಳೆದ ಎರಡು ವರ್ಷಗಳಲ್ಲಿ ಈ ತೋಟಗಾರಿಕಾ ಬೆಳೆಗಳಿಗೆ ರಚಿಸಲಾದ ಮಂಡಳಿಗಳಿಗೆ ಸರ್ಕಾರದಿಂದ ನೀಡಿದ ಅನುದಾನವೆಷ್ಟು ; (ಮಂಡಳಿವಾರು ವಿವರ ನೀಡುವುದು)

(ಇ) ಮಾವು ಮತ್ತು ಹಲಸಿನ ಕೃಷಿಕರಿಗೆ ಯಾವ ಸೌಲಭ್ಯಗಳನ್ನು ನೀಡಲಾಗುತ್ತದೆ ?

## ವಾಹನ ಸಂಚಾರ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೬೪ (೧೦೬೦) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಬ್ಬನ್ ಪಾರ್ಕ್ ಮತ್ತು ಲಾಲ್‌ಬಾಗ್ ಉದ್ಯಾನಗಳಲ್ಲಿ ವಾಹನ ಸಂಚಾರ ಮತ್ತು ನಿಲುಗಡೆ ಸೌಲಭ್ಯವನ್ನು ನೀಡಿರುವುದರಿಂದ ಅಲ್ಲಿರುವ ಪ್ರಾಣಿ ಮತ್ತು ಪಕ್ಷಿಗಳಿಗೆ ತೊಂದರೆಯುಂಟಾಗುತ್ತಿರುವುದು

ಸರ್ಕಾರದ ಗಮನಕ್ಕೆ ಬಂದಿದೆಯೇ ; ವಾಹನ ನಿಲುಗಡೆ ಸೌಲಭ್ಯವನ್ನು ರದ್ದುಗೊಳಿಸುವ ಬಗ್ಗೆ ಸರ್ಕಾರದ ನಿಲುವೇನು ;

(ಆ) ಕಬ್ಬನ್ ಪಾರ್ಕ್ ಮತ್ತು ಲಾಲ್‌ಬಾಗ್‌ಗಳಲ್ಲಿ ಅನಧಿಕೃತವಾಗಿ ವಾಣಿಜ್ಯ ಉದ್ದೇಶಗಳಿಗಾಗಿ ಕಟ್ಟಡ ನಿರ್ಮಾಣ ಮಾಡಿದ್ದು, ತೆರವುಗೊಳಿಸುವ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಕಬ್ಬನ್ ಪಾರ್ಕ್ ಮತ್ತು ಲಾಲ್‌ಬಾಗ್‌ಗಳು ಬೆಂಗಳೂರು ನಗರಕ್ಕೆ ಆಮ್ಲಜನಕ ನೀಡುವ ಸೆಂಟರ್ ಆಗಿದ್ದು, ಈ ಪ್ರದೇಶಗಳಲ್ಲಿ ವಾಹನ ಸಂಚಾರ ಮತ್ತು ವಾಣಿಜ್ಯ ವ್ಯವಹಾರಗಳನ್ನು ರದ್ದು ಮಾಡುವ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಪುರಸಭೆಗಳಲ್ಲಿ ಇ-ಆಸ್ತಿಯ ವಿತರಣೆಯ ಕುರಿತು

**ಶ್ರೀ ಶರವಣ ಟಿ.ಎ. (ವಿಧಾನಸಭೆಯಿಂದ ಚುನಾಯಿತರಾದವರು) :-**

೯೬೫ (೧೦೭೨) ಮಾನ್ಯ ಪೌರಾಡಳಿತ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪುರಸಭೆಗಳಲ್ಲಿ ಆಸ್ತಿ ವಹಿಯಲ್ಲಿ ದಾಖಲಿರುವ ಗ್ರಾಮಠಾಣಾ ವ್ಯಾಪ್ತಿಯ ಆಸ್ತಿಗಳಿಗೆ ಇ-ಖಾತಾ ಪಡೆಯಲು ಸಲ್ಲಿಸಬೇಕಾದ ದಾಖಲಾತಿಗಳು ಯಾವುವು ; (ಮಾರ್ಗಸೂಚಿ/ಸುತ್ತೋಲೆಯ ಪ್ರತಿಯನ್ನು ನೀಡುವುದು)

(ಆ) ಗ್ರಾಮಠಾಣಾ ವ್ಯಾಪ್ತಿಯ ಸ್ವತ್ತುಗಳಿಗೆ ಇ-ಖಾತೆ ನೀಡಲು ನೊಂದಾಯಿತ ದಾಖಲೆಗಳು ಕಡ್ಡಾಯವೇ ; ಕಡ್ಡಾಯವಲ್ಲದೇ ಇದ್ದಲ್ಲಿ ನೊಂದಾಯಿತ ದಾಖಲೆ ನೀಡುವಂತೆ ಹಿಂಬರಹ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು; ಹಲವು ದಾಖಲೆಗಳನ್ನು

ಕೇಳಿ ಇ–ಆಸ್ತಿ ನೀಡದೆ ಸಾರ್ವಜನಿಕರಿಗೆ ತೊಂದರೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಈ ಬಗ್ಗೆ ಸರ್ಕಾರ ಕೈಗೊಳ್ಳುವ ಕ್ರಮಗಳೇನು ;

(ಇ) ಕಳೆದ ಮೂರು ವರ್ಷಗಳಲ್ಲಿ ಗ್ರಾಮ ಪಂಚಾಯಿತಿಯಿಂದ ಉನ್ನತೀಕರಣಗೊಂಡ ಎಷ್ಟು ಪುರಸಭೆಗಳಲ್ಲಿ ಗ್ರಾಮ ಠಾಣಾ ವ್ಯಾಪ್ತಿಯ ಸ್ವತ್ತುಗಳಿಗೆ ಇ–ಖಾತಾ ನೀಡಲಾಗಿದೆ ; (ಪುರಸಭೆವಾರು ವಿವರ ನೀಡುವುದು)

(ಈ) ಕಳೆದ ಮೂರು ವರ್ಷಗಳಲ್ಲಿ ಗ್ರಾಮ ಪಂಚಾಯಿತಿಯಿಂದ ಉನ್ನತೀಕರಣಗೊಂಡ ಪುರಸಭೆಯಲ್ಲಿ ಎಷ್ಟು ಆಸ್ತಿಗಳನ್ನು ಪುರಸಭೆಯ ಇ–ಆಸ್ತಿಗೆ ಇಂಡೀಕರಣ ಮಾಡಲಾಗಿದೆ ; ಮಾಡದೆ ಇದ್ದರೆ ಕಾರಣಗಳೇನು ; ಮಾಡಿದ್ದರೆ, ಪುರಸಭೆವಾರು ಮಾಹಿತಿಯನ್ನು ನೀಡುವುದು ;

(ಉ) ತೆರಿಗೆ ಪಾವತಿಸಲು ಸಿದ್ದರಿರುವ ಆಸ್ತಿ ಮಾಲೀಕರಿಂದ ತೆರಿಗೆ ಸ್ವೀಕರಿಸದೆ, ವಿನಾಕಾರಣ ಹಿಂಬರಹ ನೀಡಿದಲ್ಲಿ, ಮುಂದಿನ ವರ್ಷದಲ್ಲಿ ಪಾವತಿಸಬೇಕಾದ ದಂಡ ಮತ್ತು ಬಡ್ಡಿಯನ್ನು ಮನ್ನಾ ಮಾಡಲಾಗುವುದೇ ಅಥವಾ ಇದಕ್ಕೆ ಕಾರಣರಾದ ಅಧಿಕಾರಿಗಳ ವೇತನದಲ್ಲಿ ಕಟಾಯಿಸಲಾಗುವುದೇ ; ಇಲ್ಲದೆ ಇದ್ದಲ್ಲಿ, ಯಾವ ರೀತಿಯಲ್ಲಿ ದಂಡ, ಬಡ್ಡಿ ಪಾವತಿಸಿಕೊಳ್ಳಲಾಗುವುದು ?

## ಬಳ್ಳಾರಿ ವಿಜಯನಗರ ಜಿಲ್ಲೆಗಳ ರೈತರಿಗೆ ಬೆಂಬಲ ಬೆಲೆಯಲ್ಲಿ ಖರೀದಿಸಿದ ಧಾನ್ಯಕ್ಕೆ ಹಣ ಸಂದಾಯವಾಗದಿರುವ ಬಗ್ಗೆ

**ಶ್ರೀ ವೈ.ಎಂ.ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೬೬ (೧೦೫೫) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೫ನೇ ಸಾಲಿನಲ್ಲಿ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿ ರೈತರಿಂದ ಜೋಳ ಮತ್ತು ರಾಗಿ ಖರೀದಿಸಲಾಗಿದೆಯೇ ; ಖರೀದಿಸಿದ್ದಲ್ಲಿ, ರೈತರಿಗೆ ನೀಡಲಾಗಿರುವ ಬೆಂಬಲ ಬೆಲೆಯ ವಿವರ ಒದಗಿಸುವುದು ;

(ಆ) ೨೦೨೫ನೇ ಸಾಲಿನಲ್ಲಿ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿ ರೈತರಿಂದ ಜೋಳ ಮತ್ತು ರಾಗಿ ಖರೀದಿಸಿದ ರೈತರಿಗೆ ಪೂರ್ಣ ಹಣ ಸಂದಾಯ ಮಾಡಲಾಗಿದೆಯೇ ; ಇದ್ದಲ್ಲಿ, ಯಾವಾಗ ಮತ್ತು ಎಷ್ಟು ರೈತರಿಗೆ ನೀಡಲಾಗಿದೆ ; ಬಾಕಿ ಇದ್ದಲ್ಲಿ, ಇಲ್ಲಿಯವರೆಗೆ ನೀಡದಿರಲು ಕಾರಣವೇನು ; ರೈತರಿಗೆ ಯಾವ ಕಾಲಮಿತಿಯಲ್ಲಿ ಹಣ ಸಂದಾಯ ಮಾಡಲಾಗುವುದು ? (ಮಾಹಿತಿ ಒದಗಿಸುವುದು)

## ರಾಯಚೂರು, ಬಳ್ಳಾರಿ, ಕೊಪ್ಪಳ ಮತ್ತು ವಿಜಯಪುರ ಜಿಲ್ಲೆಗಳ ಹಾಲು ಒಕ್ಕೂಟದಲ್ಲಿ ರೈತರಿಗೆ ನೀಡಬೇಕಾದ ವಿಮೆ ಹಣ ದುರ್ಬಳಕೆ ಬಗ್ಗೆ

**ಶ್ರೀ ವೈ.ಎಂ.ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೬೭ (೧೦೫೬) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು, ಬಳ್ಳಾರಿ, ಕೊಪ್ಪಳ ಮತ್ತು ವಿಜಯಪುರ ಜಿಲ್ಲೆಗಳ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟದಲ್ಲಿ ೨೦೨೩ ರಿಂದ ಜಾನುವಾರುಗಳ ವಿಮೆ ಹಣವನ್ನು ರೈತರಿಗೆ ನೀಡದೆ ದುರ್ಬಳಕೆ ಮಾಡಿಕೊಂಡಿರುವುದು ನಿಜವೇ ; (ಸಂಪೂರ್ಣ ವಿವರ ಒದಗಿಸುವುದು)

(ಆ) ರೈತರಿಗೆ ನೀಡಬೇಕಾದ ವಿಮೆ ಹಣವನ್ನು ದುರ್ಬಳಕೆ ಮಾಡಿದವರು ಯಾರು ; ಅವರುಗಳ ಮೇಲೆ ಕೈಗೊಂಡ ಕ್ರಮಗಳೇನು ; ಈ ವಿಮೆ ಹಣವನ್ನು ಸಂಬಂಧಿಸಿದ ರೈತರಿಗೆ ನೀಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ? (ವಿವರ ಒದಗಿಸುವುದು)

## ಮಹಾನಗರ ಪಾಲಿಕೆಗಳ ನೌಕರರ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಬದಲಾವಣೆ ಮಾಡುವ ಕುರಿತು

**ಶ್ರೀ ಕೆ. ವಿವೇಕಾನಂದ (ಶಿಕ್ಷಕರ ಕ್ಷೇತ್ರ) :–**

೯೬೮ (೧೦೬೪) ಮಾನ್ಯ ಪೌರಾಡಳಿತ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಮಹಾನಗರ ಪಾಲಿಕೆಗಳಲ್ಲಿನ ಅಧಿಕಾರಿ/ನೌಕರರಿಗೆ ಸಂಬಂಧಿಸಿದ ವೃಂದ ಮತ್ತು ನೇಮಕಾತಿ ನಿಯಮಾವಳಿಗಳನ್ನು ಯಾವ ಸಾಲಿನಲ್ಲಿ ಬದಲಾವಣೆ ಮಾಡಲಾಗಿದೆ ; (ಪೂರ್ಣ ಮಾಹಿತಿ ನೀಡುವುದು)

(ಆ) ಸರ್ಕಾರಿ ನೌಕರರ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪ್ರತಿ ಮೂರು ವರ್ಷಗಳಿಗೊಮ್ಮೆ ಪರಿಷ್ಕರಣೆ ಮಾಡಬೇಕಾಗಿರುವುದರಿಂದ ಮಹಾನಗರ ಪಾಲಿಕೆ ನೌಕರರಿಗೆ ಹಲವಾರು ವರ್ಷಗಳಿಂದ ಇನ್ನು ನಿಯಮಾವಳಿಯನ್ನು ಪರಿಷ್ಕರಿಸದೇ ಇರಲು ಕಾರಣವೇನು ;

(ಇ) ವೃಂದ ಮತ್ತು ನೇಮಕಾತಿ ನಿಯಮಗಳು ಸರಿಯಾದ ಸಮಯಕ್ಕೆ ಪರಿಷ್ಕರಣೆಗೊಳ್ಳದೆ ನಗರ ಪಾಲಿಕೆ ಸಿಬ್ಬಂದಿ ವರ್ಗದವರಿಗೆ ದೊರಕಬೇಕಾದ ಮುಂಬಡ್ತಿ ದೊರೆಯದೇ ನಿವೃತ್ತಿ ಹೊಂದುತ್ತಿದ್ದು ; ಇವರುಗಳು ಅವಕಾಶ ವಂಚಿತರಾಗಿರುತ್ತಾರೆ ; ಆದ್ದರಿಂದ ಸರ್ಕಾರ ಕಾಲ ಕಾಲಕ್ಕೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಣೆ ಮಾಡಲು ಕೈಗೊಂಡಿರುವ ಕ್ರಮಗಳೇನು ?

## ಜನತಾ ಬಜಾರ್ ಮಳಿಗೆಗಳ ಕುರಿತು

**ಶ್ರೀ ವಿನಯ್ ಕಾರ್ತಿಕ್ ಪ್ರಕಾಶ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೬೯ (೧೦೬೬) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಯಾವ ವರ್ಷದಿಂದ ಜನತಾ ಬಜಾರ್ ಮಳಿಗೆಗಳನ್ನು ಪ್ರಾರಂಭಿಸಲಾಯಿತು; ಸದರಿ ಮಳಿಗೆಗಳ ಪ್ರಾರಂಭದ ಉದ್ದೇಶವೇನು; ಸರ್ಕಾರ ಇಲ್ಲಿಯವರೆಗೆ ತೆರೆದ ಜನತಾ ಬಜಾರ್ ಮಳಿಗೆಗಳ ಒಟ್ಟು ಸಂಖ್ಯೆ ಎಷ್ಟು ಮತ್ತು ಸದರಿ ಮಳಿಗೆಗಳ ವಿಸ್ತೀರ್ಣವೆಷ್ಟು ;

(ಆ) ಬೆಂಗಳೂರಿನಲ್ಲಿ ತೆರೆದಿದ್ದ ಮಳಿಗೆಗಳ ಒಟ್ಟು ಸಂಖ್ಯೆ ಎಷ್ಟು; ಅವುಗಳು ಯಾವ ವಿಳಾಸದಲ್ಲಿ ಇರುತ್ತವೆ ; ಸದರಿ ಮಳಿಗೆಗಳ ವಿಸ್ತೀರ್ಣವೆಷ್ಟು ಹಾಗೂ ಅವುಗಳಲ್ಲಿ ಮಾರಾಟ ಮಾಡುತ್ತಿದ್ದ ವಸ್ತುಗಳು ಯಾವುವು ;

(ಇ) ಕಳೆದ ಮೂರು ವರ್ಷಗಳಲ್ಲಿ ಜನತಾ ಬಜಾರ್ ಮಳಿಗೆಗಳ ವಾರ್ಷಿಕ ವಹಿವಾಟು ಎಷ್ಟು ; (ವರ್ಷವಾರು ಮಳಿಗೆವಾರು ಪ್ರತ್ಯೇಕ ವಿವರ ನೀಡುವುದು)

(ಈ) ಜನತಾ ಬಜಾರ್ ಮಳಿಗೆಗಳಲ್ಲಿ ಈ ಹಿಂದೆ ಕೆಲಸ ಮಾಡುತ್ತಿದ್ದ ಅಧಿಕಾರಿ/ನೌಕರರ ಸಂಖ್ಯೆ ಎಷ್ಟು ; ಪ್ರಸ್ತುತ ಎಷ್ಟು ಅಧಿಕಾರಿ/ ನೌಕರರು ಕಾರ್ಯನಿರ್ವಹಿಸುತ್ತಿದ್ದಾರೆ ;

(ಉ) ಇತ್ತೀಚೆಗೆ ಜನತಾ ಬಜಾರ್ ಮಳಿಗೆಗಳ ಸಂಖ್ಯೆ ಮತ್ತು ವಹಿವಾಟು ಗಣನೀಯವಾಗಿ ಕ್ಷೀಣಿಸುತ್ತಿರುವುದಕ್ಕೆ ಕಾರಣಗಳೇನು ; ಇದುವರೆಗೆ ಎಷ್ಟು ಮಳಿಗೆಗಳನ್ನು ಮುಚ್ಚಲಾಗಿದೆ ; ಅವು ಯಾವುವು ;

(ಊ) ಸದರಿ ಜನತಾ ಬಜಾರ್ ಮಳಿಗೆಗಳ ಬಲವರ್ಧನೆಗೆ/ ಪುನಃಶ್ಚೇತನಗೊಳಿಸಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ?

## ರಾಯಚೂರು ಜಿಲ್ಲೆಯ ರೈತರಿಗೆ ಕೃಷಿ ಆಧಾರಿತ ಡ್ರೋನ್ ವ್ಯವಸ್ಥೆ ಮಾಡುವ ಕುರಿತು

**ಶ್ರೀ ಎ. ವಸಂತ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೭೦ (೧೦೭೮) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕದ ಕೃಷಿ ಪ್ರಧಾನ ಜಿಲ್ಲೆಗಳಾದ ರಾಯಚೂರು ಸೇರಿದಂತೆ ಇತರೆ ಜಿಲ್ಲೆಗಳಲ್ಲಿ ರೈತರ ಕೃಷಿ ವೆಚ್ಚ ಕಡಿಮೆ ಮಾಡಿ, ಬೆಳೆ ಉತ್ಪಾದಕತೆ ಹೆಚ್ಚಿಸುವ ಉದ್ದೇಶದಿಂದ ಕೃಷಿ ಡ್ರೋನ್ ಮತ್ತು Artificial Intelligence ಆಧಾರಿತ ಬೆಳೆ, ಕೀಟ–ರೋಗಗಳ ಆರಂಭಿಕ ಪತ್ತೆ, ನಿಖರ ಕೀಟನಾಶಕ ಸಿಂಪಡಣೆ, ನೀರಿನ ನಿರ್ವಹಣೆ ಹಾಗೂ ಬೆಳೆ ಹಾನಿ ಅಂದಾಜು ವ್ಯವಸ್ಥೆಯನ್ನು ಗ್ರಾಮ ಮಟ್ಟಕ್ಕೆ ವಿಸ್ತರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ರಾಯಚೂರು ಜಿಲ್ಲೆಯಲ್ಲಿ ಇದನ್ನು ಪ್ರಾಯೋಗಿಕವಾಗಿ Pilot Project ಆಗಿ ಆರಂಭಿಸಲಾಗುವುದೇ ;

(ಇ) ಸಣ್ಣ ಮತ್ತು ಅತಿಸಣ್ಣ ರೈತರು ಡ್ರೋನ್ ಸೇವೆಯನ್ನು ಉಚಿತವಾಗಿ ಅಥವಾ ಸಹಾಯಧನದೊಂದಿಗೆ ಪಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ವಸತಿ ಇಲಾಖೆಯಿಂದ ನೀಡುತ್ತಿರುವ ಮನೆಗಳ ಸಹಾಯಧನವನ್ನು ಹೆಚ್ಚಿಸುವ ಕುರಿತು

**ಶ್ರೀ ಎ. ವಸಂತ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೭೧ (೧೦೭೯) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸ್ತುತ ನಿರ್ಮಾಣ ವೆಚ್ಚ ಮತ್ತು ಕಟ್ಟಡ ಸಾಮಗ್ರಿಗಳ ಬೆಲೆ ಏರಿಕೆಯನ್ನು ಪರಿಗಣಿಸಿ, ಗ್ರಾಮೀಣ ಬಡ ಕುಟುಂಬಗಳಿಗೆ ನೀಡಲಾಗುತ್ತಿರುವ ವಸತಿ ಸಹಾಯಧನವನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಬೆಲೆ ಏರಿಕೆಗೆ ಅನುಗುಣವಾಗಿ ಸಹಾಯಧನ ಪರಿಷ್ಕರಿಸಲಾಗುವುದೇ ;

(ಇ) ಹೆಚ್ಚುವರಿ ಹಣದ ಕೊರತೆಯಿಂದ ಅಪೂರ್ಣವಾಗಿರುವ ಮನೆಗಳಿಗೆ ವಿಶೇಷ ಅನುದಾನ ನೀಡಲಾಗುವುದೇ ?

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಬೆಳೆ ವಿಮೆ ಹಣದ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೭೨ (೧೦೪೧) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಕಳೆದ ವರ್ಷ ಸುರಿದ ಭಾರಿ ಮಳೆ ಹಾಗೂ ಪ್ರವಾಹದಿಂದ ಬೆಳೆ ಹಾನಿ ಅನುಭವಿಸಿದ ಜಿಲ್ಲೆಯಲ್ಲಿರುವ ತಾಲ್ಲೂಕುಗಳು ಯಾವುವು ;

(ಆ) ಈ ಮೇಲ್ಕಂಡ ಜಿಲ್ಲೆಗಳಲ್ಲಿ ಪ್ರಧಾನ ಮಂತ್ರಿ ಫಸಲ್ ಭಿಮಾ ಯೋಜನೆಯಡಿ ೨೦೨೫–೨೬ನೇ ಸಾಲಿನಲ್ಲಿ ಎಷ್ಟು ಲಕ್ಷ ರೈತರು ಬೆಳೆ ವಿಮೆಗೆ ನೋಂದಣಿ ಮಾಡಿಸಿದ್ದಾರೆ ;

(ಇ) ಮೊದಲ ಹಂತದಲ್ಲಿ ಬೆಳೆ, ವಿಮೆಯ ಮಧ್ಯಂತರ ಪರಿಹಾರವಾಗಿ ಎಷ್ಟು ಕೋಟಿ ರೂ. ಈ ಜಿಲ್ಲೆಗಳಿಗೆ ಬಿಡುಗಡೆಯಾಗಿತ್ತು ; ಬಾಕಿ ಬೆಳೆ ವಿಮೆ ಅಂತಿಮ ಪರಿಹಾರ ಯಾವಾಗ ನೀಡಲಾಗುವುದು ಹಾಗೂ ನೀಡಲು ಬೇಕಾಗಿರುವ ಹಣವೆಷ್ಟು ; ಯಾವಾಗ ಬಿಡುಗಡೆ ಮಾಡಲಾಗುವುದು ? (ತಾಲ್ಲೂಕುವಾರು ವಿವರ ನೀಡುವುದು)

# ಕಲಬುರಗಿ ಜಿಲ್ಲೆಯ ಅಫಜಲಪುರ ತಾಲ್ಲೂಕಿನ ಗೊಬ್ಬೂರ (ಬಿ) ಗ್ರಾಮಾ ಪಂಚಾಯಿತಿ ಮನೆಗಳ ಕಾರ್ಯದೇಶ ನೀಡುವ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೭೩ (೧೦೪೨) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯ ಅಫಜಲಪುರ ತಾಲ್ಲೂಕಿನಲ್ಲಿ ಬರುವ ಗೊಬ್ಬೂರ (ಬಿ) ಗ್ರಾಮದ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಶಿವಾಜಿನಗರ, ಗೊಬ್ಬೂರವಾಡಿ ಮತ್ತು ಗೊಬ್ಬೂರವಾಡಿ ತಾಂಡಾಗಳಿಗೆ ದೇವರಾಜ ಅರಸು ವಸತಿ ಯೋಜನೆಯಲ್ಲಿ ನಿರ್ಗತಿಕರು, ವಿಧವೆಯರು ವಿಕಲಚೇತನರು ಹಾಗೂ ಇತರೆ ವರ್ಗದ ವಸತಿ ರಹಿತರಿಗೆ ೨೦೨೦–೨೧ನೇ ಸಾಲಿನಲ್ಲಿ ೫೦೦ ಮನೆಗಳನ್ನು ಮಂಜೂರು ಮಾಡಿ ಆದೇಶ ಹೊರಡಿಸಿದ್ದರೂ ಇದುವರೆವಿಗೂ ಫಲಾನುಭವಿಗಳಿಗೆ ಮನೆಗಳನ್ನು ಹಂಚಿಕೆ ಮಾಡದಿರಲು ಕಾರಣವೇನು ; (ಸಂಪೂರ್ಣ ವಿವರ ನೀಡುವುದು)

(ಆ) ಜಿಲ್ಲಾಧಿಕಾರಿಗಳ ಜಿಲ್ಲಾ ವಸತಿ ಸಮಿತಿಯಲ್ಲಿ ಫಲಾನುಭವಿಗಳ ಪಟ್ಟಿ ತಯಾರಿಸಿ ಅನುಮೋದನೆ ನೀಡಿರುವ ೫೦೦ ಮನೆಗಳ ಗುರಿಯನ್ನು ತಡೆಹಿಡಿದಿರುವುದನ್ನು ತೆರವುಗೊಳಿಸಿ ಬಡ ವಸತಿ ರಹಿತರಿಗೆ ಕಾರ್ಯಾದೇಶ ನೀಡಲು ಸರ್ಕಾರ ಇದುವರೆವಿಗೂ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ಕಲಬುರಗಿ ಉಚ್ಚ ನ್ಯಾಯಾಲಯವು ಈ ಮೇಲ್ಕಂಡ ದೇವರಾಜ ಅರಸು ವಸತಿ ಯೋಜನೆಯ ೫೦೦ ಮನೆಗಳಿಗೆ ಅನುದಾನ ಬಿಡುಗಡೆ ಮಾಡಿ ಕಾರ್ಯಾದೇಶ ನೀಡುವಂತೆ ಆದೇಶ ನೀಡಿದ್ದು ; ನ್ಯಾಯಾಲಯ ನೀಡಿದ ಗಡವು ಮೀರಿದ್ದರೂ ಕ್ರಮ ಕೈಗೊಳ್ಳದಿರಲು ಕಾರಣವೇನು ; ಸದರಿ ಆದೇಶವನ್ನು ಯಾವಾಗ ಕಾರ್ಯರೂಪಕ್ಕೆ ತರಲಾಗುವುದು ?

# ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಗೊಬ್ಬರ ವಿತರಣೆಯ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೭೪ (೧೦೪೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ರೈತರಿಗೆ ಪ್ರತಿ ಎಕರೆಗೆ ಎಷ್ಟು ಚೀಲ ಯೂರಿಯಾ, ಡಿಎಪಿ ಹಾಗೂ ಇನ್ನಿತರ ಗೊಬ್ಬರಗಳನ್ನು ವಿತರಿಸಲಾಗುತ್ತಿದೆ ಹಾಗೂ ರೈತರಿಗೆ ಅಗತ್ಯವಿರುವಷ್ಟು ಗೊಬ್ಬರ ವಿತರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಆ) ಯೂರಿಯಾ, ಡಿಎಪಿ ಹಾಗೂ ಇನ್ನಿತರ ಗೊಬ್ಬರಗಳನ್ನು ಯಾವ ಬೆಲೆಯಲ್ಲಿ ರೈತರಿಗೆ ವಿತರಿಸಲು ಸಂಬಂಧಪಟ್ಟ ವಿವಿಧ ಆಗ್ರೋ ಏಜೆನ್ಸಿಗಳಿಗೆ ಸರ್ಕಾರ ಸೂಚಿಸಿದೆ ;

(ಇ) ಸರ್ಕಾರ ಪ್ರತಿ ಎಕರೆ/ರೈತರಿಗೆ ನೀಡಲು ಉದ್ದೇಶಿಸಿರುವ ಗೊಬ್ಬರವನ್ನು ಹಂತ ಹಂತದ ಬದಲಾಗಿ ಒಂದೆ ಬಾರಿಗೆ ವಿತರಿಸಲು ಕ್ರಮ ಕೈಗೊಳ್ಳುವುದೆ ; ರೈತರಿಗೆ ಯಾವ ಮಾನದಂಡದ ಆಧಾರದ ಮೇಲೆ ಗೊಬ್ಬರ ವಿತರಣೆ ನಿಗದಿ ಮಾಡುತ್ತಿದೆ ; ಈಗ ನೀಡುತ್ತಿರುವ ಗೊಬ್ಬರದ ಪ್ರಮಾಣವನ್ನು ಹೆಚ್ಚಿಸುವ ಪ್ರಸ್ತಾಪ ಸರ್ಕಾರದ ಗಮನದಲ್ಲಿದೆಯೇ ?

**ಜ್ಯೋತಿ**

ಕಾರ್ಯದರ್ಶಿ (ಪ್ರ)

ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. O-61/500 ಪ್ರತಿಗಳು/20–08–2026